ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 165 ಸಂಚಿಕೆ- 165 | PAGE-8 ಪುಟ-8 | ಭಾನುವಾರ 10.08.2025 | RS.2/- ಬೆಲೆ 2/-

## ಮೆಟ್ರೋ ಯಾವ ಪಕ್ಷದ ಸ್ವತ್ತಲ್ಲ



ಮಲ್ಲಮ ನುಡಿ ವಾರ್ತೆ ಬೆಂಗಳೂರು,ಆ.9;ಬೆಂಗಳೂರು ಮೆಟ್ರೊ ರೈಲು ಯೋಜನೆಯಲ್ಲಿ ರಾಜ್ಯಸರ್ಕಾರದ್ದೇ ದೊಡ್ಡ ಪಾಲಿದೆ. ಇಷ್ಟಾದರೂ ಬಿಜೆಪಿ ಮೆಟ್ರೊ ಕೇಂದ್ರ ಸರ್ಕಾರದ್ದು ಎಂದು ಪ್ರಚಾರ ಮಾಡುತ್ತಿದೆ. ಇದು ಸರಿಯಲ್ಲ, ಮೆಟ್ರೊ ಯಾವ ಪಕ್ಷದ ಸ್ವತ್ತಲ್ಲ,ಜನರ ಸ್ವತ್ತು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.ಕೆಪಿಸಿಸಿ ಕಚೇರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಳೆ ಮೆಟ್ರೊದ ಹಳದಿ ಮಾರ್ಗ ಉದ್ಘಾಟನೆಯಾಗುತ್ತಿದೆ ಮೆಟ್ರೊ ನಮ್ಮದೇ ಅಂತ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಸಂಸದ ತೇಜಸ್ವಿ ಸೂರ್ಯ ಹೇಳುತ್ತಿದ್ದಾರೆ. ಬಿಜೆಪಿಯವರಿಗೆ ಮೆಟ್ರೊ ಇತಿಹಾಸವೇ ಗೊತ್ತಿಲ್ಲ. ಮೆಟ್ರೊ ಪ್ರಾರಂಭವಾದ್ದು ಮನಮೋಹನ್‌ಸಿಂಗ್ ಪ್ರಧಾನಿಯಾಗಿದ್ದಾಗ ಆಗ ನಾನು ಬೆಂಗಳೂರು ನಗರಾಭಿವೃದ್ಧಿ ಸಚಿವನಾಗಿದ್ದೆ. ಬಿಜೆಪಿಯವರಿಗೆ ಪ್ರಚಾರದ ಹುಚ್ಚು, ಮೆಟ್ರೊ ಮಾಡಿದ್ದು ನಾವೇ ಎಂದು ಹೇಳಿಕೊಳ್ಳುತ್ತಿದ್ದಾರೆ. ವಾಸ್ತವದಲ್ಲಿ ಮೆಟ್ರೊಗೆ ರಾಜ್ಯಸರ್ಕಾರದ ದೊಡ್ಡ ಪಾಲಿದೆ ಎಂದರು.

ಮೆಟ್ರೊ ಮೊದಲ ಹಂತಕ್ಕೆ ಭೂಮಿ ಸೇರಿ ರಾಜ್ಯಸರ್ಕಾರ ಶೇ. 30 ರಷ್ಟು ಹಣ ಕೊಟ್ಟಿದೆ. ಕೇಂದ್ರದ್ದು, ಶೇ. 25 ರಷ್ಟು ಮಾತ್ರ. ಉಳಿದ ಶೇ. 45 ಸಾಲದ ಮೂಲಕ ಪಡೆಯಲಾಗಿದೆ. ಹಾಗೆಯೇ ಮೆಟ್ರೊ 2ನೇ ಹಂತಕ್ಕೂ ರಾಜ್ಯಸರ್ಕಾರ ಶೇ. 30 ರಷ್ಟು ಹಣ ಒದಗಿಸಿದೆ. ಕೇಂದ್ರಸರ್ಕಾರ ಕೇವಲ 20 ರಷ್ಟು ಅನುದಾನ ನೀಡಿದೆ.

ಉಳಿದ 50ರಷ್ಟು ಹಣವನ್ನು ಸಾಲದ ಮೂಲಕ ಪಡೆದು ಮೆಟ್ರೊ ಪೂರ್ಣಗೊಳಿಸಲಾಗಿದೆ. ಹೀಗಿದ್ದರೂ ಕೇಂದ್ರದ ಸಚಿವರು, ಬಿಜೆಪಿ ಸಂಸದರು, ಕರ್ನಾಟಕಕ್ಕೆ ಮೆಟ್ರೊದ ಕ್ರೆಡಿಟ್ ಕೊಡದೆ ಇರುವುದು ಅಕ್ಷಮ್ಯ ಎಂದು ಬಿಜೆಪಿ ನಾಯಕರ ವಿರುದ್ಧ ಆಕ್ರೋಶ ಹೊರ ಹಾಕಿದರು.

ಬೆಂಗಳೂರು ಮೆಟ್ರೊಗೆ ಕೇಂದ್ರ ಹಾಗೂ ರಾಜ್ಯಸರ್ಕಾರ ವೆಚ್ಚ ಮಾಡಿರುವ ಹಣದ ವಿವರದ ದಾಖಲೆಗಳನ್ನು ಅವರು ಸುದ್ದಿಗೋಷ್ಠಿಯಲ್ಲಿ ಬಿಡುಗಡೆ ಮಾಡಿ ಪ್ರತಿ ಹಂತದಲ್ಲೂ ಮೆಟ್ರೊದಲ್ಲಿ ರಾಜ್ಯಸರ್ಕಾರದ್ದೇ ದೊಡ್ಡ ಪಾಲಿದೆ ಎಂದು ಸ್ಪಷ್ಟಪಡಿಸಿದರು.

## ಮತಗಳವು ತನಿಖೆ ಬಗ್ಗೆ ಪರಿಶೀಲನೆ:ಸಿಎಂ



ಮಲ್ಲಮ್ಮ ನುಡಿ ವಾರ್ತೆ ಮೈಸೂರು,ಆ.9;ರಾಜ್ಯದಲ್ಲಿ ನಡೆದಿರುವ ಮತಗಳವಿನ ಬಗ್ಗೆ ತನಿಖೆ ನಡೆಸುವ ಬಗ್ಗೆ ಕಾನೂನು ಇಲಾಖೆಗೆ ಪರಿಶೀಲಿಸಿ ವರದಿ ನೀಡುವಂತೆ ಸೂಚಿಸಿದ್ದೇನೆ. ವರದಿ ನಂತರ ಮತಗಳುವಿನ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ ತೀರ್ಮಾನ ಮಾಡುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.


ಮೈಸೂರಿನ ವಿಮಾನನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮತಗಳುವಿನ ಬಗ್ಗೆ ಕಾನೂನು ಕ್ರಮಕೈಗೊಳ್ಳುವ ಸಂಬಂಧ ನಮ್ಮ ಕಾನೂನು ಸಲಹೆಗಾರರು ಹಾಗೂ ಕಾನೂನು ಇಲಾಖೆಗೆ ಎಲ್ಲವನ್ನೂ ಕೂಲಂಕುಶವಾಗಿ ಪರಿಶೀಲಿಸಿ ಎಂದು ಹೇಳಿದ್ದೇನೆ. ಇವರು ಪರಿಶೀಲನೆ ನಡೆಸಿ ಸಲಹೆ ಕೊಟ್ಟ ನಂತರ ರಾಜ್ಯಸರ್ಕಾರ ಕಾನೂನು ಕ್ರಮದ ಬಗ್ಗೆ ನಿರ್ಧಾರ ಮಾಡುತ್ತೆ ಎಂದು ಹೇಳಿದರು. ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಮತಗಳವು ಆಗಿರುವುದು ಸತ್ಯ, ಅದನ್ನೇ ಕಾಂಗ್ರೆಸ್ ವರಿಷ್ಠ ರಾಹುಲ್‌ಗಾಂಧಿ ಹೇಳಿದ್ದಾರೆ.

ಆರು ತಿಂಗಳು ಅಧ್ಯಯನ ನಡೆಸಿ ಮತಗಳುವಿನ ಬಗ್ಗೆ ದಾಖಲೆಗಳನ್ನು ಬಿಡುಗಡೆ ಮಾಡಲಾಗಿದೆ ಎಂದು ಅವರು ಹೇಳಿದರು.

ಬಿಜೆಪಿಯವರು ತಪ್ಪು ಮಾಡಿದ್ದಾರೆ. ಹಾಗಾಗಿ ಮತಗಳವು ಆಗಿಲ್ಲ ಎಂದು ಸುಳ್ಳು ಹೇಳುತ್ತಿದ್ದಾರೆ. ಮಹದೇವಪುರ ಕ್ಷೇತ್ರದ ಒಂದು ಚಿಕ್ಕ ಕಟ್ಟಡದಲ್ಲಿ 80 ಮಂದಿ ಮತದಾರರಿದ್ದಾರೆ. ಇದು ಹೇಗೆ ಸಾಧ್ಯ. ಇದನ್ನೆಲ್ಲ ಸಮಗ್ರ ಅಧ್ಯಯನ ಮಾಡಿಯೇ ಮತಗಳುವಿನ ಬಗ್ಗೆ

(2ನೇ ಪುಟ ನೋಡಿ)

## ಸ್ವಾತಂತ್ರ್ಯೋತ್ಸವ ಭಾಷಣಕ್ಕೆ ಸಾರ್ವಜನಿಕರಿಂದ ಸಲಹೆ ಕೇಳಿದ ಪ್ರಧಾನಿ ಮೋದಿ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.9: ಆಗಸ್ಟ್ 15 ರಂದು ಪ್ರಧಾನಿ ನರೇಂದ್ರಮೋದಿಯವರು ಸ್ವಾತಂತ್ರ್ಯ ದಿನಾಚರಣೆಯಂದು ಕೆಂಪು ಕೋಟೆಯಲ್ಲಿ ಮಾಡುವ ಭಾಷಣ ಮತ್ತೊಮ್ಮೆ ಐತಿಹಾಸಿಕವಾಗುವ ನಿರೀಕ್ಷೆಯಿದ್ದು, ಹಲವು ಮಹತ್ವದ ಘೋಷಣೆಗಳಿಗೆ ಸಾಕ್ಷಿಯಾಗುವ ಸಾಧ್ಯತೆ ಇದೆ.

ಪ್ರಧಾನಿ ಮೋದಿ ಅವರ ಸ್ವಾತಂತ್ರ್ಯೋತ್ಸವ ಭಾಷಣಕ್ಕೆ ಸಲಹೆಗಳನ್ನು ನೀಡಬೇಕೆಂದು ಕೇಂದ್ರ ಸರ್ಕಾರ ಕರೆ ನೀಡಿದೆ. ನಮೋ ಅಪ್ಲಿಕೇಶನ್ ಮೂಲಕ ಸಾರ್ವಜನಿಕರು ಪ್ರಧಾನಿ ಭಾಷಣಕ್ಕೆ ಸಲಹೆಗಳು ಮತ್ತು ತಮ್ಮ ಆಲೋಚನೆಗಳನ್ನು ಹಂಚಿಕೊಳ್ಳಲು ಆಹ್ವಾನಿಸಿದೆ.

ಈ ಮನವಿಯ ನಂತರ, ಒಬ್ಬ ವ್ಯಕ್ತಿ ಪ್ರಧಾನಿಯವರು ನೆರೆಯ ರಾಷ್ಟ್ರಗಳೊಂದಿಗೆ ಸಂಬಂಧವನ್ನು ಬಲಪಡಿಸುವುದನ್ನು ಪರಿಗಣಿಸಬೇಕೆಂದು ಸಲಹೆ ನೀಡಿದ್ದಾರೆ.

ವ್ಯಾಪಾರದಲ್ಲಿ ಸ್ಥಳೀಯ ಕೃಷಿ ಆಧಾರಿತ ಚಟುವಟಿಕೆಗಳನ್ನು ಉತ್ತೇಜಿಸಲು ಅನೇಕರು ಶಿಫಾರಸು

(2ನೇ ಪುಟ ನೋಡಿ)

## ದೆಹಲಿಯಲ್ಲಿ ಭಾರೀ ಮಳೆ; ಗೋಡೆ ಕುಸಿದು ಇಬ್ಬರು ಮಕ್ಕಳು ಸೇರಿ ಎಂಟು ಮಂದಿ ಸಾವು

ಮಲ್ಲಮ್ಮನುಡಿವಾರ್ತೆ ನವದೆಹಲಿ:ಅ.9: ರಾಷ್ಟ್ರರಾಜಧಾನಿ ದೆಹಲಿಯಲ್ಲಿ ಭಾರಿ ಮಳೆಯಾಗುತ್ತಿದ್ದು, ಜೈತ್‌ಪುರದ ಹರಿ ನಗರ ಪ್ರದೇಶದಲ್ಲಿ ಗೋಡೆಯ ಒಂದು ಭಾಗ ಕುಸಿದು ಇಬ್ಬರು ಮಕ್ಕಳು ಸೇರಿದಂತೆ ಎಂಟು ಜನರು ಸಾವನ್ನಪ್ಪಿದ್ದಾರೆ. ಮೃತದುರ್ದೈವಿಗಳು ಹಳೆಯ ದೇವಾಲಯದ ಬಳಿ ತಾತ್ಕಾಲಿಕ ಶೆಲ್ಟರ್‌ಗಳಲ್ಲಿ ವಾಸಿಸುತ್ತಿದ್ದರು. ಪಕ್ಕದ ಗೋಡೆ ಇದ್ದಕ್ಕಿದ್ದಂತೆ ಕುಸಿದಾಗ ಅವಶೇಷಗಳಡಿ ಸಿಕ್ಕಿಹಾಕಿಕೊಂಡರು. ರಕ್ಷಣಾ ತಂಡ, ತಕ್ಷಣ ಸ್ಥಳಕ್ಕೆ ಆಗಮಿಸಿ ಗಾಯಾಳುಗಳನ್ನು ಸಫ್ದರ್ಜಂಗ್ ಆಸ್ಪತ್ರೆ ಮತ್ತು ಏಮ್ಸ್‌ಗೆ ಕರೆದೊಯ್ದರು. ಆದರೆ ಚಿಕಿತ್ಸೆಯ ಸಮಯದಲ್ಲಿ ಎಲ್ಲರೂ ಮೃತಪಟ್ಟಿದ್ದಾರೆ. ಮೃತರನ್ನು ಶಬಿಬುಲ್ (30), ರಬಿಬುಲ್ (30), ಮುತ್ತು ಅಲಿ (45), ರುಬಿನಾ (25), ಡಾಲಿ (25), ಹಶಿಬುಲ್ ಹಾಗೂ ಮಕ್ಕಳಾದ ರುಖ್ಸಾನಾ(6) ಮತ್ತು ಹಸೀನಾ (7) ಎಂದು ಗುರುತಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮುಂದೆ ಸಂಭವಿಸಬಹುದಾದ ಅನಾಹುತಗಳನ್ನು ತಪ್ಪಿಸಲು ಅಧಿಕಾರಿಗಳು ಶೆಲ್ಟರ್‌ಗಳಿಂದ ಜನರನ್ನು ಸ್ಥಳಾಂತರಿಸಿದ್ದಾರೆ.

## ಸಹಪಾಠಿಗಳ ಕಿರುಕುಳ ವಿದ್ಯಾರ್ಥಿನಿ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಆ.9–

ಕಾಲೇಜಿನಲ್ಲಿ ಸಹಪಾಠಿಗಳು ನೀಡಿದ ಮಾನಸಿಕ ಕಿರುಕುಳಕ್ಕೆ ಬೇಸತ್ತು ವಿದ್ಯಾರ್ಥಿನಿಯೋರ್ವಳು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಗುಳೇದಗುಡ್ಡ ಪಟ್ಟಣದಲ್ಲಿ ನಡೆದಿದೆ. ಗುಳೇದಗುಡ್ಡ ಪಟ್ಟಣದ ಭಂಡಾರಿ ಹಾಗೂ ರಾಠಿ ಕಾಲೇಜಿನಲ್ಲಿ ಬಿಎ ಓದುತ್ತಿರುವ ಅಂಜಲಿ ಸಂಗಪ್ಪ ಮುಂಡಾಸ(21) ಆತ್ಮಹತ್ಯೆ ಮಾಡಿಕೊಂಡಿರುವ ವಿದ್ಯಾರ್ಥಿನಿ.

ತನ್ನ ಸಹಪಾಠಿಗಳು ನಿತ್ಯ ನೀಡುತ್ತಿದ್ದ ಕಿರುಕುಳದಿಂದ ಮಾನಸಿಕವಾಗಿ ನೊಂದು ನಾನು ಆತ್ಮಹತ್ಯ ಮಾಡಿಕೊಳ್ಳುತ್ತಿದ್ದೇನೆ ಎಂದು ಅಂಜಲಿ ಸಾವಿಗೂ ಮುಂಚೆ ಬರೆದಿಟ್ಟಿರುವ ಪತ್ರದಲ್ಲಿ ತಿಳಿಸಿದ್ದಾಳೆ. ಈ ಘಟನೆ ಪಟ್ಟಣದ ವಿದ್ಯಾರ್ಥಿಗಳು ಮತ್ತು ಪಾಲಕರಲ್ಲಿ

ಆತಂಕ ಮೂಡಿಸಿದ್ದು, ವಿದ್ಯಾರ್ಥಿನಿ ಆತ್ಮಹತ್ಯೆಗೆ ರ್‍ಯಾಗಿಂಗ್ ಕಾರಣವಾಗಿದೆ ಎಂದು ಅಖಿಲ

ಭಾರತೀಯ ವಿದ್ಯಾರ್ಥಿ ಪರಿಷತ್ ಆರೋಪಿಸಿದ್ದು, ಕಾಲೇಜು ಆಡಳಿತ ಮಂಡಳಿ

ಈ ಬಗ್ಗೆ ಮೌನ ವಹಿಸಿದೆ ಎಂದು ದೂರಿ ಪ್ರತಿಭಟನೆ ನಡೆಸಿದೆ.



## ಒಂದನೇ ಪುಟದಿಂದ

# ಪರಿಶೀಲನೆ:ಸಿಎಂ

ರಾಹುಲ್‌ಗಾಂಧಿ ಮಾತನಾಡಿದ್ದಾರೆ ಎಂದರು.ಕಳೆದ 2018ರ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ಬಾದಾಮಿ ಕ್ಷೇತ್ರದಲ್ಲಿ ಸಿದ್ದರಾಮಯ್ಯ ಅವರು ಮತ ಖರೀದಿ ಮಾಡಿಯೇ ಗೆದ್ದರು ಎಂದು ಮಾಜಿ ಸಚಿವ ಸಿ.ಎಂ ಇಬ್ರಾಹಿಂ ಹೇಳಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಈ ಬಗ್ಗೆ ನನಗೆ ಗೊತ್ತಿಲ್ಲ. ಸಿಎಂ ಇಬ್ರಾಹಿಂ ಈಗ ನಮ್ಮ ಪಕ್ಷದಲ್ಲಿ ಇಲ್ಲ. 2018ರಲ್ಲಿ ಅವರು ನನ್ನ ಪರವಾಗಿ ಕೆಲಸ ಮಾಡಿದ್ದರು.

ಮತ ಖರೀದಿ ಎಂಬುದು ನನಗೆ ಹೊಸ ವಿಚಾರ. ಈ ಬಗ್ಗೆ ನಾನು ಕೇಳೇ ಇರಲಿಲ್ಲ ಎಂದರು. ನಾನು ಬಾದಾಮಿಯಿಂದ ಸ್ಪರ್ಧಿಸಿದ್ದ ಸಂದರ್ಭದಲ್ಲಿ ಎರಡೇ ದಿನ ಅಲ್ಲಿಗೆ ಹೋಗಿದ್ದು, ಒಂದು ನಾಮಪತ್ರ ಸಲ್ಲಿಸುವ ದಿನ, ಮತ್ತೊಂದು ದಿನ ಪ್ರಚಾರಕ್ಕೆ ಹೋಗಿದ್ದೆ ಅದು ಬಿಟ್ಟರೆ ತಮಗೆ ಬೇರೆ ಏನು ವಿಚಾರಗಳು ಗೊತ್ತಿಲ್ಲ ಎಂದರು.

ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಸಚಿವರಾದ ಡಾ. ಎಚ್.ಸಿ ಮಹದೇವಪ್ಪ, ಕೆ. ವೆಂಕಟೇಶ್ ಮತ್ತಿತರರು ಇದ್ದರು.

# ಸಲಹೆ ಕೇಳಿದ ಪ್ರಧಾನಿ ಮೋದಿ

ಮಾಡಿದ್ದು, ಪದ್ಮಿನಿ ನರಸಿಂಹ ಅವರು ಮಹಿಳೆಯರ ಅಭಿವೃದ್ಧಿಗೆ ಪ್ರಾಮುಖ್ಯತೆ ನೀಡುವಾಗ ರಫ್ತು ವ್ಯವಹಾರಕ್ಕೆ ಆದ್ಯತೆ ನೀಡಬೇಕೆಂದು ಸೂಚಿಸಿದ್ದಾರೆ.

ಪ್ರಧಾನಿ ಮೋದಿ ಅವರು ತಮ್ಮ ಸ್ವಾತಂತ್ರ್ಯೋತ್ಸವ ಭಾಷಣದಲ್ಲಿ ಈ ಬಾರಿ ಜಮ್ಮು ಮತ್ತು ಕಾಶ್ಮೀರಕ್ಕೆ ರಾಜ್ಯದ ಸ್ಥಾನಮಾನ ಮರುಸ್ಥಾಪನೆ ಅಥವಾ ಇತರ ಪ್ರಮುಖ ಘೋಷಣೆಗಳನ್ನು ಮಾಡಬಹುದೆಂಬ ಊಹಾಪೋಹ ರಾಜಕೀಯ ವಲಯದಲ್ಲಿದೆ. ಅಲ್ಲದೆ ಪ್ರಧಾನಿ ಮೋದಿ, ಯುವಕರು ಮತ್ತು ಮಹಿಳೆಯರಿಗಾಗಿ ವಿಶೇಷ ಉಪಕ್ರಮಗಳನ್ನು ಅನಾವರಣಗೊಳಿಸುವ ನಿರೀಕ್ಷೆಯಿದೆ.

ಈ ವರ್ಷ ಕೆಂಪು ಕೋಟೆಯಲ್ಲಿ ಪ್ರಧಾನಿ ಮೋದಿ ಮಾಡಲಿರುವ ಭಾಷಣವು ಐತಿಹಾಸಿಕವಾಗಬಹುದು. ಭಯೋತ್ಪಾದನೆ ಮತ್ತು ವ್ಯಾಪಾರಕ್ಕೆ ಸಂಬಂಧಿಸಿದಂತೆ ಹೊಸದಾಗಿ ರೂಪಿಸಲಾದ ರಾಷ್ಟ್ರೀಯ ನೀತಿಗಳ ಕುರಿತು ದೇಶದ ಜನತೆಗೆ ಸಂದೇಶಗಳನ್ನು ನೀಡಬಹುದು ಎಂದು ಮೂಲಗಳು ತಿಳಿಸಿವೆ.

# ಪತ್ರಿಕಾ ವಿತರಕ ಮೆಹಬೂಬ್ ಮನಿಯಾರ್ ಗೆ ವಿಶೇಷ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಅ.9:ಕೊಪ್ಪಳದಲ್ಲಿ ಕಳೆದ ಸುಮಾರು ಮೂರು ದಶಕದಿಂದಅಧಿಕೃತಪತ್ರಿಕವಿತರಕ ರಾಗಿಕಾರ್ಯನಿರ್ವಹಿಸುತ್ತಿರುವ ಇಲ್ಲಿನಮಹಿಬೂಬ್‌ಮನಿಯಾರ್ ಗೆಕರ್ನಾಟಕಕಾರ್ಯನಿರತ ಪತ್ರಕರ್ತರ ಸಂಘ ಕೊಪ್ಪಳ ಜಿಲ್ಲಾ ಘಟಕದ ವತಿಯಿಂದ ವಿಶೇಷ ಸನ್ಮಾನ ಮಾಡಿ ಸತ್ಕರಿಸಲಾಯಿತು,

ಶನಿವಾರ ನಗರದ ಜಿಲ್ಲಾ ಸರ್ಕಾರಿ ನೌಕರರ ಸಂಘದ ಕವನದಲ್ಲಿ ಜರುಗಿದ ಪತ್ರಿಕಾ ದಿನಾಚರಣೆಸಮಾರಂಭದಲ್ಲಿ ಮಹಬೂಬ್ ಮನಿಯಾರ್ ರವರ ಪತ್ರಿಕಾ ವಿತರಣಾ ಸೇವೆ ಯನ್ನು ಪರಿಗಣಿಸಿ ಅವರಿಗೆ ಸನ್ಮಾನಿಸಿ ಶುಭ ಕೋರಲಾಯಿತು,

ಈಸಂದರ್ಭದಲ್ಲಿಮುಖ್ಯಮಂತ್ರಿ ಅವರಮಾಧ್ಯಮಸಲಹೆಗಾರ ಕೆ ವಿ ಪ್ರಭಾಕರ್, ಶಾಸಕ ಕೆ ರಾಘವೇಂದ್ರ ಹಿಟ್ನಾಳ್, ನಗರಸಭೆಯಅಧ್ಯಕ್ಷಅಮ್ಜದ್ ಪಟೇಲ್‌ಪತ್ರಕರ್ತರಸಂಘದ ರಾಜ್ಯ ಅಧ್ಯಕ್ಷ ಶಿವಾನಂದ ತಗಡೂರು, ರಾಜ್ಯ ಪ್ರಧಾನ ಕಾರ್ಯದರ್ಶಿಜಿಸಿಲೋಕೇಶ್, ಜಿಲ್ಲಾ ಅಧ್ಯಕ್ಷ ಹನುಮಂತ ಹಳ್ಳಿಕೇರಿ ಜಿಲ್ಲಾ ಖಜಾಂಚಿ ರಾಜುಬಿಆರ್,ರಾಜ್ಯಸಮಿತಿ ವಿಶೇಷ ಆಹ್ವಾನಿತ ಸದಸ್ಯ ಎಚ್ ಎಸ್ ಹರೀಶ್, ರಾಜ್ಯ ಸಮಿತಿಸದಸ್ಯಸಾಧಿಕ್ ಅಲಿ, ರಾಷ್ಟ್ರೀಯ ಮಂಡಳಿ ಸದಸ್ಯ ಜಿಎಸ್ ಗೋನಾಳ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ವೈ ನಾಗರಾಜ್, ಗೌರವ ಅಧ್ಯಕ್ಷ ಬಸವರಾಜ ಗುಡ್ಲಾನೂರ್ ಪತ್ರಿಕಾಭವನ್ ಕಟ್ಟಡಸಮಿತಿ ಅಧ್ಯಕ್ಷಏನ್ ಎಂದೊಡ್ಡಮನಿ, ಜಿಲ್ಲಾಕಾರ್ಯದರ್ಶಿ ವೀರಣ್ಣ ಕಳ್ಳಿಮನಿ ಸೇರಿದಂತೆಅನೇಕರು ಪಾಲಗೊಂಡಿದ್ದರು,

# ಸೋದರತ್ವದ ಬಾಂಧವ್ಯ ಸಾರುವ ರಕ್ಷಾ ಬಂಧನ : ಕೊಲ್ಲೂರು




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.9:ಸೋದರತ್ವ ಸಾರುವ ರಕ್ಷಾ ಬಂಧನ ಶತಮಾನಗಳ ಇತಿಹಾಸ ಹಾಗೂ ಪೌರಾಣಿಕ ಹಿನ್ನಲೆ ಹೊಂದಿದೆ ಎಂದು ಜಿಲ್ಲಾ ಪ್ರಚಾರಕ ಕಿರಣ ಕೊಲ್ಲೂರು ಹೇಳಿದರು.

ಪಟ್ಟಣದ ಭಾಗಿರಥಿ ಪಬ್ಲಿಕ್ ಶಾಲೆಯಲ್ಲಿ ಶುಕ್ರವಾರ ಹಮ್ಮಿಕೊಂಡ ರಕ್ಷಾಬಂಧನ ಉತ್ಸವ ಕಾರ್ಯಕ್ರಮದಲ್ಲಿ ಭಾರತಾಂಬೆಭಾವಚಿತ್ರಕ್ಕೆಪೂಜೆ ನೇರವೇರಿಸಿ ಮಾಲಾರ್ಪಣೆ ಮಾಡಿದ ನಂತರ ಅವರು ಮಾತನಾಡಿದರು.

ರಕ್ಷಾ ಬಂಧನ ಎಂಬುದು ಸಂಸ್ಕೃತದ ಪದವಾಗಿದ್ದು. ಇದರ ಅರ್ಥ ರಕ್ಷಣೆ-ಯ ಬಂಧ ಎಂದು. ರಕ್ಷಾ ಬಂಧನದಂದು ಸೋದ-ರಿಯರು ತಮ್ಮ ಸೋದರನ ಏಳಿಗೆಗಾಗಿ.ಧೀರ್ಘಾಯುಸ್ಯಕ್ಕಾಗಿ ವೃತ ಆಚರಿಸಿ ಸೋದರನ ಮಣಿಕಟ್ಟಿಗೆರಕ್ಷಾದಾರಅಥವ ಆರಾಖಿಯನ್ನು ಕಟ್ಟುತ್ತಾರೆ ಎಂದು ವಿವರಿಸಿದರು.

ಶರಣಬಸಪ್ಪ ಶಿಕ್ಷಣ ಸಂಸ್ಥೆ ಅಧ್ಯಕ್ಷ ಶರಣಪ್ಪ ಮಾನಕರೆ, ಆರ್‌ಎಸ್‌ಎಸ್ ಹಿರಿಯಸ್ವಯಂ ಸೇವಕಬಸವರಾಜಪಾಟೀಲ ಮಾತನಾಡಿದರು.ವಿಕಾಸಅಕಾಡೆಮಿ ತಾಲ್ಲೂಕು ಘಟಕಸಂಚಾಲಕ ಯಶವಂತ ಬಿರಾದಾರ, ಕರವೇ ತಾಲ್ಲೂಕು ಘಟಕ ಅಧ್ಯಕ್ಷಮಂಜುನಾಥಸ್ವಾಮಿ, ವಿವೇಕಾನಂದಸ್ವಾಮಿಶಿಕ್ಷಣ ಸಂಸ್ಥೆ ಅಧ್ಯಕ್ಷ ಸಂಗಮೇಶ ಬಿರಾದಾರ,ನಗರಕಾರ್ಯವಾಹ ಪ್ರಶಾಂತಖಾನಾಪುರೆ,ಮುಖ್ಯಶಿಕ್ಷಕ ಮನೋಜಕುಮಾರಹಿರೇಮಠ ಪಾಲ್ಗೊಂಡಿದ್ದರು.

ಸಂಗೀತಾಕಾಂಬಳೆ,ರಾಜಶ್ರೀ ಸಿರಗಿರೆ, ದೀಪಮಾಲಾ ಸೂರ್ಯವಂಶಿ, ಅಂಬಿಕಾ ಸೂರ್ಯವಂಶಿ,ಪಂಚಫುಲಾ ಚವಾಣ್,ಅಶ್ವಿನಿಗಾಯವಾಡ್, ಮಲ್ಲಿಕಾರ್ಜುನ ಮೇತ್ರೆ ಇದ್ದರು.ಅಂಜಲಿ ಕಾಂಬಳೆ ನಿರೂಪಿಸಿದರು. ಪ್ರಥ್ವಿರಾಜ ಸಂಗಡಿಗರು ಪ್ರಾರ್ಥನೆ ಗೀತೆ ಹಾಡಿದರು. ಶೀತಲ ಹಂಗರಗೆ ಸ್ವಾಗತಿಸಿದರು. ಶ್ರೀದೇವಿ ಸೋನಕಾಂಬಳೆ ವಂದಿಸಿದರು.

# ಡಿಜಿಟಲ್ ಕ್ರಾಂತಿಯಿಂದ ವೈದ್ಯಕೀಯ ಕ್ಷೇತ್ರದಲ್ಲಿ ಕ್ರಾಂತಿಕಾರಕ ಬದಲಾವಣೆ: ಗುರುಪ್ರೀತ್‌ಸಿಂಗ್



ಮಲ್ಲಮ್ಮನುಡಿವಾರ್ತೆಕಲಬುರಗಿ, ಆ.9:ಡಿಜಿಟಲ್‌ಕ್ರಾಂತಿಕ್ಲಿನಿಕಲ್ ಸಂಶೋಧನೆಯಲ್ಲಿಕ್ರಾಂತಿಕಾರಕ ಬದಲಾವಣೆಗಳನ್ನುತರುತ್ತಿದೆ ಎಂದು ಎಸ್‌ಸಿಆರ್‌ಎಂಪಿ ಅಧ್ಯಕ್ಷ ಗುರುಪ್ರೀತ್‌ಸಿಂಗ್ ಅವರು ಹೇಳಿದರು

ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಮಾತೋಶ್ರೀ ತಾರಾದೇವಿರಾಂಪೂರೆಇನ್ಸಿಟ್ಯೂಟ್ ಆಫ್ ಫಾರ್ಮಸುಟಿಕಲ್ ಸೈನ್ಸ್ ಹಾಗೂಹೈದ್ರಾಬಾದ್‌ನಕ್ಲಿನಿಕಲ್ ರೀಸರ್ಚ್ ಆಂಡ್ ಮೆಡಿಕಲ್ ಪ್ರೊಫೆಶನಲ್ ಸೊಸೈಟಿಸಂಯುಕ್ತ ಆಶ್ರಯದಲ್ಲಿಶನಿವಾರಜರುಗಿದ ಅಂತಾರಾಷ್ಟ್ರೀಯ ಕಾನ್ ಕ್ಲೇವ್ 2025 ಉದ್ಘಾಟಿಸಿ ಮಾತನಾಡಿದ ಅವರು, ಔಷಧ ಅಭಿವೃದ್ಧಿಯಲ್ಲಿ ಸಹ ಡಿಜಿಟಲ್‌ಕ್ಷೇತ್ರವುಕಾರ್ಯವನ್ನು ವೇಗಗೊಳಿಸಿದೆ ಎಂದರು.

ರೋಗಿಗಳ ಆರೋಗ್ಯವನ್ನು ಸುಧಾರಿಸುವ ಮತ್ತು ಸಂಶೋಧನೆಯನ್ನು ಹೆಚ್ಚು ಪರಿಣಾಮಕಾರಿ ಮಾಡಿ ಫಲಿತಾಂಶವನ್ನುಸುಲಭವಾಗಿಸುವ ಸಾಮರ್ಥ್ಯವನ್ನುನೀಡುತ್ತಿದೆ. ಈಯುಗದಬದಲಾವಣೆಗಳಿಗೆ ನಾವು ಹೊಂದಿಕೊಂಡು ಅವುಗಳನ್ನುಅಳವಡಿಸಿಕೊಳ್ಳುವ ಮೂಲಕಮತ್ತುಸಂಬಂಧಿತ ಸವಾಲುಗಳನ್ನುಪರಿಹರಿಸುವ ಮೂಲಕ,ಆರೋಗ್ಯರಕ್ಷಣೆಯನ್ನು ಮುನ್ನಡೆಸಲು ಕ್ಲಿನಿಕಲ್ ಸಂಶೋಧನೆಯ ಭವಿಷ್ಯವು ಉತ್ತಮಭರವಸೆಯನ್ನುಹೊಂದಿದೆ ಎಂದು ಅವರು ಹೇಳಿದರು. ಕ್ಲಿನಿಕಲ್ ಸಂಶೋಧನೆಯು ಭವಿಷ್ಯದಡಿಜಿಟಲ್‌ರೂಪಾಂತರ ಆಧುನಿಕವಾಗಿಆರೋಗ್ಯರಕ್ಷಣೆ ಮತ್ತುಸಂಶೋಧನೆಯಲ್ಲಿನ ಪ್ರಮುಖ ಪ್ರವೃತ್ತಿಯನ್ನು ಪ್ರತಿಬಿಂಬಿಸುತ್ತದೆ, ಇದು ಕ್ಲಿನಿಕಲ್ ಸಂಶೋಧನೆಯನ್ನು ಹೇಗೆ ನಡೆಸಲಾಗುತ್ತದೆ ಮತ್ತು ನಿರ್ಧಾರಗಳನ್ನು ಹೇಗೆತೆಗೆದುಕೊಳ್ಳಲಾಗುತ್ತದೆ ಎಂಬುದನ್ನು ಸುಧಾರಿಸಲು ಡಿಜಿಟಲ್ ತಂತ್ರಜ್ಞಾನಗಳು ಮತ್ತು ಡೇಟಾಗಳು ಈ ಯುಗದಲ್ಲಿ ವೈದ್ಯಕೀಯ ಕ್ಷೇತ್ರದಲ್ಲಿನಿಖರವಾಗಿಫಲಿತಾಂಶ ನೀಡುತ್ತಿವೆ ಎಂದು ಅವರು ತಿಳಿಸಿದರು.

ಅಧ್ಯಕ್ಷತೆವಹಿಸಿದ್ದಸಂಸ್ಥೆಯ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಶಶೀಲ್ ಜಿ. ನಮೋಶಿಅವರುಮಾತನಾಡಿ, ಇತ್ತೀಚಿನದಿನಗಳಲ್ಲಿವೈದ್ಯಕೀಯ ಕ್ಷೇತ್ರದಲ್ಲಿ ಡಿಜಿಟಲ್ ಯುಗ ಪ್ರಾರಂಭವಾಗಿದೆ ಇದ-ರಿಂದಾಗಿ ಅತೀಕ್ಲಿಷ್ಟಕರವಾದ ಆಪರೇಷನ್ಗಳನ್ನುನಿರ್ವಹಿಸುವಲ್ಲಿ ಮನುಷ್ಯಸಹಜ ತಪ್ಪುಗಳನ್ನು ತಪ್ಪಿಸುವ ಸಲುವಾಗಿ ಕೃತಕ ಬುದ್ಧಿಮತ್ತೆತಂತ್ರಜ್ಞಾನದಿಂದ ರೊಬೋಟ್ಗಳನ್ನು ಗಣ-ಕಯಂತ್ರದ ಮುಖಾಂತರ ನಿರ್ವಹಿಸಿ, ನಿಯಂತ್ರಿಸಿ ಆಪರೇಷನ್ ಪ್ರಕ್ರಿಯೆಯನ್ನು ಸುಲಭಗೊಳಿಸಲಾಗುತ್ತದೆ.ಮನುಷ್ಯ ಸಹಜವಾದಬಳಲಿಕೆ,ವಿಶ್ರಾಂತಿ ಇವು ಯಾವುದರ ತೊಂದರೆ ಇಲ್ಲದೆರೊಬೋಟಿಕ್ ಸರ್ಜರಿ ಮಾಡಲು ಈಕೃತಕಬುದ್ಧಿಮತ್ತೆ ತಂತ್ರಜ್ಞಾನ ಸಹಕಾರಿಯಾಗಿದೆ. ರೋಗದಪತ್ತೆಹಚ್ಚುವಿಕೆಯಲ್ಲಿ ಮತ್ತುರೋಗದ ಚಿಕಿತ್ಸೆಯಲ್ಲಿ ಕೃತಕ ಬುದ್ಧಿಮತ್ತೆ ಬಹಳ ಮುಖ್ಯಪಾತ್ರವಹಿಸುತ್ತದೆ ಎಂದು ಹೇಳಿದರು

ಗೌರವ ಅತಿಥಿಗಳಾಗಿ ಫಾರ್ಮಕೋವಿಜಿಲನ್ಸ್ ಕನ್ಸಲ್ಟೆಂಟ್,ಕ್ಲಿನೆಕ್ಸಲ್ ಯುಕೆನ ಮಿಸ್ ಪೂನಮ್ ಕುಮಾರಿ, ಎಸ್‌ಸಿಆರ್‌ಎಂಪಿಯ ಮಹ್ಮದ್ ಗಯೂರ್ ಖಾನ್,ಗ್ಲೋಬಲ್ ಕ್ಲೀನಿಕಲ್ ಟ್ರೈಲ್ ಮ್ಯಾನೇಜರ್ ನಿಖಿಲ್ ಭಾನುಮತಿ, ಡಾ. ವಿವೇಕ್ ಗುಪ್ತಾ, ಡಾ. ಉಮಾಮಾ ಯಜಧಾನಿ, ರಿಂಪಿ ಸೈನಿ, ಸಂಸ್ಥೆಯ ಕಾರ್ಯದರ್ಶಿಉದಯಕುಮಾರ್ ಚಿಂಚೋಳಿ,ಸಂಚಾಲಕರಾದ ಅನಿಲಕುಮಾರ್ ಮರಗೋಳ್, ಸಾಯಿನಾಥಪಾಟೀಲ್,ಆಡಳಿತ ಮಂಡಳಿ ಸದಸ್ಯರಾದ ಡಾ. ನಾಗೇಂದ್ರ ಮಂತಾಳೆ, ಡಾ. ಮಹಾದೇವಪ್ಪರಾಂಪೂರೆ,ಡಾ ಅನಿಲಕುಮಾರ್ ಪಟ್ಟಣ,ಡಾ. ಕಿರಣ್ ದೇಶಮುಖ್,ನಾಗಣ್ಣ ಘಂಟಿ, ಡಾ. ಗುರುಲಿಂಗಪ್ಪ ಪಾಟೀಲ್, ನಿರ್ದೇಶಕರಾದ ಅಶೋಕ್‌ಕುಮಾರ್‌ದಸ್ತಾಪೂರ್ ಅವರು ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಪ್ರಿನ್ಸಿಪಾಲ್ ಡಾ. ಪ್ರಕಾಶ್ ಸರಸಂಬಿ ಅವರು ಸ್ವಾಗತಿಸಿದರು. ಪ್ರಾಧ್ಯಾಪಕಿ ವಾಣಿ ಬಬಲಾದಿ ಅವರು ಕಾರ್ಯಕ್ರಮ ನಿರೂಪಿಸಿದರು ಬಸವರಾಜ್ ಬೆಂಡಗುಂಬಳಿ ಅವರು ವಂದಿಸಿದರು.

# ಅರ್ಥಪೂರ್ಣವಾಗಿ 31ನೇ ವಿಶ್ವ ಆದಿವಾಸಿ ದಿನಾಚರಣೆ



ಬೀದರ. ಅ. 09 : ಕರ್ನಾಟಕಗೊಂಡಆದಿವಾಸಿ ಸಂಘಹಾಗೂಜಿಲ್ಲಾಟೋಕರಿ ಕೋಳಿ ಸಮಾಜ ಸಂಘದ ವತಿಯಿಂದ 31ನೇ ವಿಶ್ವ ಆದಿವಾಸಿ ದಿನಾಚರಣೆಯನ್ನು ಶನಿವಾರ ನಗರದ ಮಹಾತ್ಮ ಬೊಮ್ಮಗೊಂಡೇಶ್ವರರಪುತ್ಥಳಿಗೆ ಪೂಜೆ ಸಲ್ಲಿಸಿ, ಮಾಲಾರ್ಪಣೆ ಮಾಡಿ,ಪುಷ್ಪಾರ್ಚನೆಮಾಡುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು. ಈ ಸಮಯದಲ್ಲಿ ಮಾತನಾಡಿದ ಕರ್ನಾಟಕಗೊಂಡಆದಿವಾಸಿ ಸಂಘದಉಪಾಧ್ಯಕ್ಷಪಂಡಿತ್ ಚಿದ್ರಿ,ಆದಿವಾಸಿಗಳು ಈದೇಶದ ಮೂಲ ವಂಶಸ್ಥರು. ಸ್ವತಂತ್ರ ಹೋರಾಟದಲ್ಲೂಮಹತ್ತರವಾದ ಕೊಡುಗೆನೀಡಿದ್ದಾರೆ. ಅರಣ್ಯ ಸಂಪತ್ತನ್ನುಉಳಿಸಿಮುಂಬರುವ ಪೀಳಿಗೆಗೆನೀಡುವಕೆಲಸವನ್ನು ಆದಿವಾಸಿಗಳುಮಾಡುತ್ತಿದ್ದಾರೆ ಎಂದರು. ಕರ್ನಾಟಕಗೊಂಡ ಆದಿವಾಸಿ ಸಂಘದ ಪ್ರಧಾನ ಕಾರ್ಯದರ್ಶಿ ಮಾಳಪ್ಪ ಅಡಸಾರೆಮಾತನಾಡಿ,ವಿಶ್ವದ ಆದಿವಾಸಿಗಳ ಸಂಸ್ಕೃತಿ,ಶಿಕ್ಷಣ, ಆರೋಗ್ಯ,ಪರಿಸರ,ಮಾನವ ಹಕ್ಕುಗಳ ಸಂರಕ್ಷಣೆ,ಸಾಮಾಜಿಕ ಮತ್ತುಆರ್ಥಿಕ ಅಭಿವೃದ್ಧಿಯ ಧ್ಯೇಯದೊಂದಿಗೆ ವಿಶ್ವಸಂಸ್ಥೆ 23-12-1994ರಲ್ಲಿ ತೆಗೆದು-ಕೊಂಡ ನಿರ್ಣಯದನ್ವಯ 1995ರಿಂದಪ್ರತಿವರ್ಷ ಆಗಸ್ಟ್ 9 ರಂದು ವಿಶ್ವ ಆದಿವಾಸಿ ದಿನ ಆಚರಿಸಿಕೊಂಡು ಬರಲಾಗುತ್ತಿದೆ. ಅದರಂತೆ ಇಂದು ಕರ್ನಾಟಕ ಗೊಂಡ ಆದಿವಾಸಿಸಂಘಹಾಗೂಜಿಲ್ಲಾ ಟೋಕರಿ ಕೋಳಿ ಸಮಾಜ ಸಂಘದಿಂದ ಮಹಾತ್ಮಾ ಬೋಮ್ಮಗೊಂಡೇಶ್ವರರಪುತ್ಥಳಿಗೆ ಪೂಜೆ ಸಲ್ಲಿಸಿ, ಮಾಲಾರ್ಪಣೆ ಮಾಡಿ,ಪುಷ್ಪಾರ್ಚನೆಮಾಡುವ ಮೂಲಕ ಆಚರಿಸಿದ್ದೇವೆ ಎಂದರು. ಕರ್ನಾಟಕ ಆದಿವಾಸಿ ರಕ್ಷಣಾ ಪರಿಷತ್ತಿನ ಅಧ್ಯಕ್ಷನಾರಾಯಣರಾವ್ ಭಂಗಿ ಮಾತನಾಡಿ, ಆದಿವಾಸಿಗಳ ಅಭಿವೃದ್ಧಿಗಾಗಿ ಜಿಲ್ಲೆಯಲ್ಲಿರುವ ಎಲ್ಲಾ ಆದಿವಾಸಿಗಳು ಒಗ್ಗಟ್ಟಾಗಿ ಕೆಲಸಮಾಡೋಣ.ಮುಂಬರುವ ವಿಶ್ವ ಆದಿವಾಸಿ ದಿನವನ್ನು ಎಲ್ಲರೂ ಸೇರಿ ಆಚರಿಸೋಣ ಎಂದರು. ಟೋಕರಿ ಕೋಳಿ ಸಮಾಜದ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಮಾಣಿಕ್ ನೆಳಗಿ ಮಾತನಾಡಿ, ಬೀದರ ಜಿಲ್ಲೆಯಲ್ಲಿ ಸುಮಾರು ನಾಲ್ಕು ಆದಿವಾಸಿ ಸಮುದಾಯಗಳು ಬೀದರಜಿಲ್ಲೆಯಲ್ಲಿವಾಸಿಸುತ್ತವೆ. ಇವರೆಲ್ಲರನ್ನು ಒಗ್ಗೂಡಿಸಿದ ಶ್ರೇಯಸ್ಸುಬಿ.ನಾರಾಯಣರಾವ್ ಹಾಗೂಕೆ.ಎಂಮೈತ್ರಿಯವರಿಗೆ ಸಲ್ಲುತ್ತದೆ. ಕಾಡನ್ನು ಉಳಿಸಿ ಬೆಳೆಸುವವರುಆದಿವಾಸಿಗಳು.ನಮ್ಮ ಆದಿವಾಸಿಸಮುದಾಯದವರಿಗೆ ಸಾಕಷ್ಟುಸೌಲಭ್ಯಸಿಗಬೇಕಾಗಿದೆ. ಆದ್ದರಿಂದ ಆದಿವಾಸಿಯ ಎಲ್ಲಾ ಸಮುದಾಯದವರು ಸಂಘಟಿತರಾಗಿಹೋರಾಡೋಣ ಎಂದು ಹೇಳಿದರು.

ಈಸಂದರ್ಭದಲ್ಲಿಸಂಗೊಳ್ಳಿ ರಾಯಣ್ಣ ಗೊಂಡ ಸಂಘದ ಅಧ್ಯಕ್ಷಬಾಬುರಾವಮಲ್ಕಾಪುರ, ಟೋಕರಿ ಕೋಳಿ ಸಮಾಜ ಸಂಘದ ಉಪಾಧ್ಯಕ್ಷಸುನಿಲ್ ಖಾಶೆಂಪೂರ್, ನಿಜ ಶರಣ ಅಂಬಿಗರ ಯುವ ಸೇನೆಯ ಜಿಲ್ಲಾಧ್ಯಕ್ಷಸುನಿಲ್ ಭಾವಿಕಟ್ಟಿ,

ಗೊಂಡ ಹಾಗೂ ಟೋಕರಿ ಕೋಳಿ ಸಮುದಾಯದ ಮುಖಂಡರುಗಳಾದ ಈಶ್ವರ ಮಲ್ಕಾಪೂರ್, ಬಾಬುರಾವ್ ಖಾಶೆಂಪೂರ್,ರವಿಕುಮಾರ್ ಸಿರ್ಸಿ, ಜಗನ್ನಾಥ ಜಂಬಗಿ, ಪುಂಡಲೀಕರಾವ್ ಇಟಗಂಪಳ್ಳಿ, ವಿಜಯಕುಮಾರ್ ಡುಮ್ಮೆ, ಮಾಣಿಕ್ ನೆಳಗಿ,ದೀಪಕ್ ಚಿದ್ರಿ, ಭೋಮ್ಮಗೊಂಡ ಚಿಟ್ಟಾವಾಡಿ, ರಘುನಾಥ ಭೂರೆ, ರವಿ ಇಂಜಿನಿಯರ್,ಹಣಮಂತರಾವ್ ಘೋಡಂಪಳ್ಳಿ,ಚಂದ್ರಕಾಂತ್ ಫುಲೇಕರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನುಲಿಯ ಚಂದಯ್ಯ ತತ್ವ ಅನುಷ್ಠಾನದಿಂದ ಸಮಾಜ ಸುಭಿಕ್ಷು



ಬೀದರ.ಅ.09:ನುಲಿಯ ಚಂದಯ್ಯ ಅವರ ತತ್ವಗಳ ಅನುಷ್ಠಾನದಿಂದ ಸಮಾಜ ಹಾಗೂ ದೇಶ ಸುಭಿಕ್ಷ ಆಗುವುದರಲ್ಲಿ ಸಂದೇಹವೇ ಇಲ್ಲ ಎಂದು ಸಾಹಿತಿ ರಮೇಶ ಮಠಪತಿ ಅಭಿಪ್ರಾಯಪಟ್ಟರು.

ಲಿಂಗಾಯತ ಮಹಾ ಮಠದ ವತಿಯಿಂದ ನಗರದ ಬಸವಗಿರಿಯಲ್ಲಿ ಶನಿವಾರ ಆಯೋಜಿಸಿದ್ದ ನುಲಿಯ ಚಂದಯ್ಯ ಅವರ ಜಯಂತಿ, ಸಾಮೂಹಿಕ ಇಷ್ಟಲಿಂಗ ಪೂಜೆ ಹಾಗೂ ವಚನ ಪಾರಾಯಣ ಕಾರ್ಯಕ್ರಮದಲ್ಲಿ ಅವರು ವಿಶೇಷಉಪನ್ಯಾಸನೀಡಿದರು.

ಹನ್ನೆರಡನೆಯ ಶತಮಾನದ ಪ್ರಮುಖಶರಣರಲ್ಲಿಒಬ್ಬರಾಗಿದ್ದ ನುಲಿಯ ಚಂದಯ್ಯ, ಬಸವಣ್ಣನವರ ಕಾಯಕ ಸಿದ್ಧಾಂತದ ಪ್ರತೀಕವಾಗಿದ್ದರು. ಪ್ರತಿಯೊಬ್ಬರೂ ದುಡಿದು, ದಾಸೋಹ ಮಾಡಿಯೇ ಉಣ್ಣಬೇಕು ಎನ್ನುವುದು ಅವರ ಸಂದೇಶವಾಗಿದೆ ಎಂದು ಹೇಳಿದರು.

ಕಾಯಕಕ್ಕೆತಕ್ಕಂತೆ ಪ್ರತಿಫಲ ಪಡೆಯಬೇಕೇ ವಿನಃ ಹೆಚ್ಚು ಪ್ರತಿಫಲ ಪಡೆದು ಶೋಷಣೆ ಮಾಡಬಾರದು ಎಂದಿದ್ದರು ಎಂದು ತಿಳಿಸಿದರು.

ಪ್ರತಿ ದಿನ ನದಿಯ ದಡದಲ್ಲಿ ಬೆಳೆದ ನುಲಿಯನ್ನು ತಂದು ಹೊಸೆದು,ಹಗ್ಗ ಕಣ್ಣಿ ಸಿದ್ಧಪಡಿಸಿ, ಮಾರಾಟ ಮಾಡುತ್ತಿದ್ದರು. ಬಂದ ಆದಾಯದಲ್ಲಿ ಮೊದಲು ದಾಸೋಹಗೈದು, ಪ್ರಸಾದ ಸೇವಿಸುವುದು ಅವರ ನಿತ್ಯದ ನೇಮವಾಗಿತ್ತು ಎಂದು ಹೇಳಿದರು.

ಚಂದಯ್ಯನವರ ಕಾಯಕ-ದಾಸೋಹ ನಿಷ್ಠೆ ಅಪಾರವಾಗಿತ್ತು. ಕಾಯಕದಲ್ಲಿ ನಿರತನಾದಡೆ ಗುರು-ಲಿಂಗ-ಜಂಗಮ ಬಂದರೂ ಹಂಗು ಹರಿಯಬೇಕೆಂದು ಕಾಯಕದಲ್ಲಿ ಮಗ್ನರಾಗುತ್ತಿದ್ದರು ಎಂದು ತಿಳಿಸಿದರು.

ಒಮ್ಮೆ ಅವರು ಕಾಯಕದಲ್ಲಿ ನಿರತರಾಗಿದ್ದಾಗ ಕೊರಳ ಇಷ್ಟಲಿಂಗ ಜಾರಿ ಬಿದ್ದಿತ್ತು. ಕಾಯಕಕ್ಕೆ ಅಡ್ಡಿಯಾದೆ-ಯೆಂದು ಶಿವನನ್ನೇ ಬಿಟ್ಟರು. ಲಿಂಗಯ್ಯನೇ ನನ್ನನ್ನು ಎತ್ತಿಕೋ ಎಂದು ಬೆಂಬತ್ತಿದ ಪ್ರಸಂಗ ಹೃದಯಸ್ಪರ್ಶಿಯಾಗಿದೆ ಎಂದು ಹೇಳಿದರು.

ಸಾನಿಧ್ಯ ವಹಿಸಿದ್ದ ಪರುಷಕಟ್ಟೆಯ ಚನ್ನಬಸವಣ್ಣ ಮಾತನಾಡಿ, ಇಂದು ನೂಲ ಹುಣ್ಣಿಮೆ ಅಂದರೆ ರಾಖಿ ಪೂರ್ಣಿಮೆಯೂ ಇದೆ. ಇದು, ಪ್ರೀತಿ, ಸಹೋದರತೆಯನ್ನು ಸಾರುವ ಸಂಭ್ರಮದ ಹಬ್ಬ. ಸಹೋದರಿಯರೆಲ್ಲ ಹೊಸ ಬಟ್ಟೆ ಧರಿಸಿ ತಮ್ಮ ಅಣ್ಣ-ತಮ್ಮಂದಿರಿಗೆ ರಕ್ಷೆಯನ್ನು ಕಟ್ಟಿ ಹಾರೈಸುವ ದಿನ ಎಂದು ತಿಳಿಸಿದರು.

ಪರಸ್ಪರ ಆಯುಷ್ಯ, ಆರೋಗ್ಯ ಹಾಗೂ ರಕ್ಷಣೆಗಾಗಿ ಪ್ರಾರ್ಥಿಸುವುದರಿಂದ ಅಣ್ಣ-ತಂಗಿಯರ ಸಂಬಂಧ ಗಟ್ಟಿಗೊಳ್ಳುತ್ತದೆ ಎಂದು ಹೇಳಿದರು.

ಜ್ಞಾನ ಕಾರಂಜಿ ಚಾಟರಿಟಬಲ್ ಟ್ರಸ್ಟ್ ಅಧ್ಯಕ್ಷ ಮಾಣಿಕಪ್ಪ ಗೋರನಾಳೆ ಅಧ್ಯಕ್ಷತೆ ವಹಿಸಿದ್ದರು.

ನೀಲಮ್ಮನಬಳಗದ ಲಾವಣ್ಯ ಮುಖ್ಯ ಅತಿಥಿಯಾಗಿದ್ದರು. ಅಶೋಕ ಎಲಿ, ಸಿ.ಎಸ್. ಗಣಾಚಾರಿ, ಚನ್ನಬಸಪ್ಪ ಹಂಗರಗಿ, ಮಾರುತಿ ಪಾಟೀಲ ಸಮ್ಮುಖ ವಹಿಸಿದ್ದರು.

ನೀಲಮ್ಮನ ಬಳಗದ ಸಹೋದರಿಯರು ಪ್ರಾರ್ಥನೆ ಹಾಗೂ ವಚನ ಗಾಯನ ನಡೆಸಿಕೊಟ್ಟರು. ಬಸವಪ್ರಸಾದ ಕೊಪ್ಪಳ ನಿರೂಪಿಸಿದರು.

# ರಕ್ಷಾ ಬಂಧನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಸಹೋದರ ಮತ್ತುಸಹೋದರಿಯರನಡುವಿನ ಅನುಬಂಧವನ್ನು ಹೆಚ್ಚಿಸುವ ರಕ್ಷಾ ಬಂಧನ ಹಬ್ಬವನ್ನು ಭಾನುವಾರ ದೇಶದೆಲ್ಲೆಡೆ ಆಚರಿಸಲಾಗಿದೆ. ಅಣ್ಣ-ತಂಗಿಯ ನಡುವಿನ ಶುದ್ಧವಾದ, ನಿರ್ಭಾರತ ಮತ್ತು ಬಲವಾದ ಸಂಬಂಧವನ್ನು ಪ್ರತಿಬಿಂಬಿಸುವ ಹಬ್ಬವೇ ರಕ್ಷಾ ಬಂಧನ. "ರಕ್ಷಾ" ಎಂದರೆ ರಕ್ಷಣೆ ಮತ್ತು "ಬಂಧನ" ಎಂದರೆ ಬಂಧ ಅಥವಾ ಬಾಂಧವ್ಯ. ಈ ಹಬ್ಬವು ಸಹೋದರ ಮತ್ತು ಸಹೋದರಿಯ ನಡುವಿನ ಪ್ರೀತಿಯ ಸಂಕೇತವಾಗಿದೆ. ರಕ್ಷಾ ಬಂಧನದಂದು ಸಹೋದರಿಯು ತನ್ನ ಸಹೋದರರ ಕೈಗೆ ರಾಖಿಯನ್ನು ಕಟ್ಟಿ, ಅವನ ದೀರ್ಘಾಯುಷ್ಯಹಾಗೂಕ್ಷೇಮಕ್ಕಾಗಿ ಪ್ರಾರ್ಥಿಸುತ್ತಾಳೆ. ಪಟ್ಟಣದ ಶಿವಪೂರಬಡಾವಣೆಯ ಡಾಕ್ಟರ್ ಕೃಷ್ಣಾರೆಡ್ಡಿ ಮಂಡಾ ರವರಿಗೆ ವಿನಾಯಕರೆಡ್ಡಿ ಮಂಡಾ ರವರ ಸುಪುತ್ರಿ ಆರುಷಿ ರೆಡ್ಡಿ ಮಂಡಾ ರಾಖಿ ಕಟ್ಟಿ ಸಿಹಿ ತಿನ್ನಿಸುವ ಮೂಲಕ ಆಶೀರ್ವಾದಿಸಿದಳು.

## ಬಾಂಧವ್ಯದ ಹಬ್ಬ, ರಕ್ಷಾ ಬಂಧನ ಸಂಭ್ರಮಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ಸಹೋದರ ಮತ್ತು ಸಹೋದರಿಯರ ನಡುವಿನ ಬಂಧನವನ್ನು ಬಿಗಿ ಆಗಿಸುವ, ಪ್ರೀತಿ, ರಕ್ಷಣೆ ಪದ್ಧತಿಯನ್ನು ಪ್ರತಿಬಿಂಬಿಸುವ ಹಬ್ಬ ರಕ್ಷಾ ಬಂಧನ ಹಬ್ಬವಾಗಿದೆ ಎಂದು ಸಮಾಜಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ತಿಳಿಸಿದರು. ಪಟ್ಟಣದ ವಿದ್ಯಾರ್ಥಿನಿಯರು ಬಸವರಾಜ ಮೇತ್ರೆ, ಸಂಜೀವನ ಭೋಸ್ಲೆ, ಗುಂಡಪ್ಪ ಕೋರೆ, ಹಸನ್ ಲಚ್ಚಿಕೆ ಇವರಿಗೆ ರಾಖಿ ಕಟ್ಟಿ ರಕ್ಷಾ ಬಂಧನ ಹಬ್ಬ ಆಚರಿಸಿದರು.

## ಹಡಪದ ಪರಿವಾರದಲ್ಲಿ ರಕ್ಷಾ ಬಂಧನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪಟ್ಟಣದ ಪ್ರತಿ ಮನೆ ಮನೆಯಲ್ಲಿವೂ ರಕ್ಷಾ ಬಂಧನ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತ್ತು. ಸಹೋದರಿಯರು ತಮ್ಮ ಸಹೋದರರನ್ನು ಸಹೋದರಿಯರು ತಮ್ಮ ಸಹೋದರನ ಮುಂಗೈಗೆ ರಾಖಿಯನ್ನು ಕಟ್ಟಿ ಸಿಹಿ ತಿನಿಸಿ ಹಣೆಗೆ ಕುಂಕ್ಕುಮ ಹಚ್ಚಿ ಆರತಿ ಬೆಳಗಿ ಸಹೋದರರ ಆಶೀರ್ವಾದವನ್ನು ಬೇಡುತ್ತಾರೆ. ಅಕ್ಕ-ತಮ್ಮ, ತಂಗಿ- ಅಣ್ಣಂದಿರ ರಕ್ಷಣೆ ಎಂಬ ಪರಸ್ಪರ ಭ್ರಾತೃತ್ವದ ಭಾವನೆಯನ್ನು ದಟ್ಟಗೊಳಿಸುವ ಹಬ್ಬವನ್ನು ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಪಟ್ಟಣದ ಜನತಾ ನಗರ ಕಾಲೋನಿಯಲ್ಲಿ ಹಡಪದ ಪರಿವಾರದ ಸಹೋದರರಾದ ಹಣಮಂತ ಕೆ. ಹಡಪದ, ರಾಜಕುಮಾರ ಆರ್. ಹಡಪದ, ಅವಿನಾಶ ಎಚ್. ಹಡಪದ, ನವೀನ್ ಎಚ್. ಹಡಪದ, ಆದಿತ್ಯ ಎ. ಹಡಪದ, ಆಯುಷ್ ಎ. ಹಡಪದ, ಅಮೀತ ಡಿ. ಹಡಪದ ಇವರುಗಳಿಗೆ ಸಹೋದರಿಯರಾದ ಮಂಜುಳಾ ಹಡಪದ, ನಿಖಿತಾ ಹಡಪದ, ಶ್ವೇತಾ ಹಡಪದ ರಾಖಿ ಕಟ್ಟಿ ರಕ್ಷಾ ಬಂಧನ ಹಬ್ಬವನ್ನು ಆಚರಿಸಿದರು.

### ಉಪ ಕಾರಗೃಹದಲ್ಲಿ ರಕ್ಷಾ ಬಂಧನ ಆಚರಣೆ

## ಉಚಿತ ಕಾನೂನು ನೆರವು ಪಡೆದುಕೊಳ್ಳಿ: ಕೈದಿಗಳಿಗೆ ನ್ಯಾಯಾಧೀಶರ ಕರೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:- ಕೈದಿಗಳು ತಮ್ಮ ಕಾನೂನ ಹೋರಾಟಕ್ಕೆ ಖಾಸಗಿ ವಕೀಲರನ್ನು ನೇಮಕ ಮಾಡಿಕೊಳ್ಳದೆ ತಾಲೂಕ ಕಾನೂನು ಸೇವಾ ಸಮಿತಿಯ ಉಚಿತ ಸರ್ಕಾರಿ ವಕೀಲರ ಸೇವೆಯನ್ನು ಪಡೆದುಕೊಳ್ಳಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ತಾಲೂಕಾಧ್ಯಕ್ಷರ ಕಾನೂನು ಸೇವಾ ಸಮಿತಿ ಅಧ್ಯಕ್ಷರಾದ ಲ್ ಪ್ರಶಾಂತ್ ಬಾದವಾಡಗಿ ಪಟ್ಟಣದ ಉಪ ಕಾರಗೃಹದಲ್ಲಿ ಕಾನೂನು ಸೇವಾ ಸಮಿತಿ ಮತ್ತು ಅನ್ನಪೂರ್ಣಶ್ವರಿ ಸಂಸ್ಥೆ ಮತ್ತು ವಕೀಲರ ಸಂಘ ಮತ್ತು ಉಪ ಕಾರಗೃಹ ಸಂಯುಕ್ತಾಶ್ರಯದಲ್ಲಿ ಖಾಯಂಜನತಾಧ್ಯೇಯೋದ್ದೇಶಗಳ ನ್ಯಾಯಾಲಯದ ಜಾಗೃತಿಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ ಕರೆ ನೀಡಿದರು. ಉಚಿತ ಕಾನೂನು ನೆರವು ಪಡೆದುಕೊಂಡ ಪ್ರಕರಣಗಳು ಶೀಘ್ರದಲ್ಲಿ ಇತ್ಯರ್ಥವಾಗಲು ಸಹಾಯವಾಗುತ್ತದೆ ಎಂದರು. ಬಡ ಜನತೆ ಕಡ್ಡಾಯವಾಗಿ ಸರ್ಕಾರದ ಉಚಿತ ಕಾನೂನಿನ ನೆರವು ಪಡೆದುಕೊಳ್ಳಬೇಕೆಂದು ನ್ಯಾಯಾಧೀಶಪ್ರಶಾಂತ್ ಬಾದವಾಡಗಿ ತಿಳಿಸಿದರು. ಈ ಕಾರ್ಯಕ್ರಮವನ್ನು ಅನ್ನಪೂರ್ಣೇಶ್ವರಿ ದೇವಿ ಸಂಸ್ಥೆ ರಕ್ಷಾ ಬಂಧನದ ಹಬ್ಬ ಹಬ್ಬದ ಅಂಗವಾಗಿ ಉಪಕಾರಗೃಹದಲ್ಲಿರುವ ಕೈದಿಗಳಿಗೆ ಹಬ್ಬದ ಅಂಗವಾಗಿ ರಾಖಿ ಕಟ್ಟಿ ಹಬ್ಬ ಆಚರಿಸಿದರು. ಅನ್ನಪೂರ್ಣೇಶ್ವರಿ ದೇವಿ ಸಂಸ್ಥೆಯ ಅಧ್ಯಕ್ಷರಾದ ವಿಜಯಲಕ್ಷ್ಮಿ ಪಾಟೀಲ್ ನ್ಯಾಯಾಧೀಶರಿಗೆ ಹಾಗೂ ಕೈದಿಗಳಿಗೆ ರಾಖಿ ಕಟ್ಟಿ ಚಾಲನೆ ನೀಡಿದರು. ಕಾರಗೃಹದಲ್ಲಿ ಇರುವ ಕೈದಿಗಳು ಹಬ್ಬದ ಬಗ್ಗೆ ಚಿಂತೆ ಮಾಡದೆ ನಮ್ಮ ಸಂಸ್ಥೆಯವತಿಯಿಂದ ರಕ್ಷಾಬಂಧನ ಕಟ್ಟಿ ಹಬ್ಬ ಆಚರಿಸಲಾಗುತ್ತದೆ ಎಂದರು. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾರಗೃಹದ ಅಧೀಕ್ಷಕರಾದ ಭೀಮಶಂಕರ ಜಮಾದಾರ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ತಾಲೂಕ ವಕೀಲ ಸಂಘದ ಪ್ರಧಾನ ಕಾರ್ಯದರ್ಶಿ ವಿಜಯಕುಮಾರ್ ನಾತೆ ಉಚಿತ ಕಾನೂನು ಸೇವಾ ಸಮಿತಿಯ ಕರ್ತವ್ಯಗಳ ಬಗ್ಗೆ ಸುದೀರ್ಘವಾಗಿ ವಿವರಿಸಿದರು. ಪರಿಸರವಾದಿ ಶೈಲೇಂದ್ರ ಕಾವಡಿ ಕೈದಿಗಳಿಗೆ ಪರಿಸರ ಸಂರಕ್ಷಣೆ ಬಗ್ಗೆ ಜಾಗೃತಿ ಮಾಡಿದರು. ರಕ್ಷಾ ಬಂಧನದ ಹಬ್ಬ ಅಂಗವಾಗಿ ಸಂಸ್ಥೆಯವರು ಕೈದಿಗಳಿಗೆ ರಾಖಿ ಕಟ್ಟಿ ಸಿಹಿ ತಿನ್ನಿಸಿದರು. ಸಂಸ್ಥೆಯ ಪ್ರಧಾನ ಕಾರ್ಯದರ್ಶಿಗಳಾದ ವೆಂಕಟೇಶ್ ಕುಲಕರ್ಣಿ, ಸಂಪನ್ಮೂಲ ವ್ಯಕ್ತಿಯಾಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕೊನೆಯಲ್ಲಿ ವಂದಿಸಿದರು.

# ದುರವಸ್ಥೆಯಲ್ಲಿ ಶರಣರ ಉಬ್ಬುಚಿತ್ರಗಳು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 09:-ಬಸವಕಲ್ಯಾಣ ರಾಷ್ಟ್ರೀಯ ಹೆದ್ದಾರಿಯಿಂದ ನಗರ ಪ್ರವೇಶಿಸುವಲ್ಲಿನ ಮಹಾದ್ವಾರದ ಬಳಿಯ ಜಾಗದಲ್ಲಿ ಅನೇಕ ಡಬ್ಬಾ ಅಂಗಡಿಗಳು ತಲೆಎತ್ತಿದ್ದು, ಇದ-ರಿಂದ ಶರಣರ ಉಬ್ಬು ಚಿತ್ರಗಳು ಕಾಣದಂತಾಗಿವೆ.

12ನೇ ಶತಮಾನದಲ್ಲಿ ಬಸವಾದಿ ಶರಣರು ಕಾರ್ಯಗೈದ ಸ್ಥಳ ಇದಾಗಿದೆ. ಅಂದಿನ ಗತವೈಭವ ಮರುಕಳಿಸುವಂತಾಗಲು ಸರ್ಕಾರದಿಂದ ನಗರದಲ್ಲಿ ₹742 ಕೋಟಿ ವೆಚ್ಚದ ಅನುಭವ ಮಂಟಪ ನಿರ್ಮಿಸಲಾಗುತ್ತಿದೆ.

ಅದಕ್ಕೂ ಮೊದಲು ವಿವಿಧ ಶರಣರ 19 ಸ್ಮಾರಕಗಳ ಜೀರ್ಣೋದ್ಧಾರ ನಡೆದಿದೆ.

ಬಸವಕಲ್ಯಾಣ ಅಭಿವೃದ್ಧಿ ಮಂಡಳಿಯಿಂದ ಈ ಎಲ್ಲ ಸ್ಥಳಗಳಲ್ಲಿ ಅಭಿವೃದ್ಧಿ ಕೈಗೊಳ್ಳಲಾಗಿದ್ದು, ಮಂಡಳಿ ವೆಚ್ಚದಲ್ಲೇ ಸಿಮೆಂಟ್‌ನಿಂದ ಉಬ್ಬು ಚಿತ್ರಗಳನ್ನು ನಿರ್ಮಿಸಲಾಗಿದೆ.



ಬಸವಕಲ್ಯಾಣದ ಸಸ್ತಾಪುರ ಬಂಗ್ಲಾದಲ್ಲಿರುವ ನಗರ ಪ್ರವೇಶಿಸುವ ಮಹಾದ್ವಾರಜಗನ್ನಾಥರೆಡ್ಡಿ ಬಸವಕಲ್ಯಾಣ ಅಭಿವೃದ್ಧಿ ಮಂಡಳಿ ಆಯುಕ್ತಮಹಾದ್ವಾರದ ಸಮೀಪದಲ್ಲಿ ಯಾವುದೇ ಚಟುವಟಿಕೆ ನಡೆಯಕೂಡದು. ಅಲ್ಲಿನ ಪಾದಚಾರಿ ಮಾರ್ಗದ ಅತಿಕ್ರಮಣ ತೆರವಿಗೆ ನಗರಸಭೆಯವರಿಗೆ ಸೂಚಿಸುತ್ತೇನೆಮಿಲಿಂದ ಕುಲಕರ್ಣಿ ಸಾಮಾಜಿಕ ಕಾರ್ಯಕರ್ತಮಹಾದ್ವಾರದ ಸ್ಥಳದಲ್ಲಿ ಇನ್ನಷ್ಟು ಸೌಂದರ್ಯೀಕರಣ ಕಾರ್ಯ ನಡೆಯಲಿ. ಅತಿಕ್ರಮಣ ತೆರವಾಗದಿದ್ದರೆ ಮುಂಬರುವ ದಿನಗಳಲ್ಲಿ ಅಸ್ತವ್ಯಸ್ತವಾಗಿ ಕಾಣುತ್ತದೆಸಿದ್ಧಾರ್ಥ ಬಾವಿದೊಡ್ಡಿ ಸಾಮಾಜಿಕ ಕಾರ್ಯಕರ್ತಸಾಕಷ್ಟು ಹಣ ಖರ್ಚು ಮಾಡಿ ಉಬ್ಬುಚಿತ್ರಗಳನ್ನು ನಿರ್ಮಿಸಿದ್ದು ಅವುಗಳ ಸಂರಕ್ಷಣೆ ಅಗತ್ಯವಾಗಿದೆ. ಅವುಗಳಿಗೆ ಬಣ್ಣ ಹಚ್ಚುವುದಲ್ಲದೆ ದುರಸ್ತಿ ನಡೆಯಲಿ.



ಮಹಾದ್ವಾರದ ಎದುರಿನ ಆವರಣಗೋಡೆಯಲ್ಲಿನ ಉಬ್ಬು ಚಿತ್ರ



ಉಬ್ಬು ಚಿತ್ರದ ಎದುರಲ್ಲಿ ಅಂಗಡಿ ಸಾಮಗ್ರಿ ಇಟ್ಟಿರುವುದು





ಆವರಣಗೋಡೆಯಲ್ಲಿನ ಉಬ್ಬು ಚಿತ್ರ

ನಗರ ಪ್ರವೇಶದ ಸ್ಥಳ ಆಕರ್ಷಕವಾಗಿರಲಿ ಎಂಬ ಉದ್ದೇಶದಿಂದ 107 ಅಡಿ ಎತ್ತರದ ಬೃಹತ್ ಮಹಾದ್ವಾರ ಕಟ್ಟಲಾಗಿದೆ. ದ್ವಾರದ ಮಧ್ಯದಲ್ಲಿ ಬಸವೇಶ್ವರರ ಅಶ್ವಾರೂಢ ಪ್ರತಿಮೆ ಇದೆ. ಅದರ ಆಚೆ ಈಚೆ ಹೋಗುವುದಕ್ಕೆ ಮತ್ತು ಬರುವುದಕ್ಕಾಗಿ ಪ್ರತ್ಯೇಕ ರಸ್ತೆಗಳಿವೆ. ಇದರ ಎದುರಿಗೆ ದಕ್ಷಿಣದಲ್ಲಿರುವ ರಾಷ್ಟ್ರೀಯ ಹೆದ್ದಾರಿಯಿಂದ ಬರುವಾಗ ರಸ್ತೆಯ ಎರಡೂ ಕಡೆಗಳಲ್ಲಿ ಎತ್ತರದ ಆವರಣಗೋಡೆ ಕಟ್ಟಿ ಒಳಗೆ ಯಾರಿಗೂ ಅಂಗಡಿ ಹಾಕಲು ಬಾರದಂತೆ ಹಾಗೂ ಇತರೆ ವ್ಯಾಪಾರ ನಡೆಯದಂತೆ ವ್ಯವಸ್ಥೆ ಮಾಡಲಾಗಿದೆ.

ಎರಡೂ ಕಡೆಯ ಕಾಂಪೌಂಡ್‌ಗೆ ಬಸವಣ್ಣ, ಚನ್ನಬಸವಣ್ಣ, ಅಕ್ಕನಾಗಮ್ಮ, ಸಮಗಾರ ಹರಳಯ್ಯ, ಅಂಬಿಗರ ಚೌಡಯ್ಯ, ನುಲಿ ಚಂದಯ್ಯ, ಮಡಿವಾಳ ಮಾಚಿದೇವ ಮುಂತಾದ ಶರಣರ ಹಾಗೂ ಅವರು ಕೈಗೊಂಡಿದ್ದ ಕಾಯಕ ಪ್ರದರ್ಶಿಸುವ ಉಬ್ಬು ಚಿತ್ರಗಳಿವೆ. ಆದರೆ, ಈಚೆಗೆ ಆವರಣಗೋಡೆ ಪಕ್ಕದ ಪಾದಚಾರಿ ಮಾರ್ಗದಲ್ಲಿ ಡಬ್ಬಾ ಹಾಗೂ ಚಿಕ್ಕ ಚಿಕ್ಕ ಅಂಗಡಿ ತೆರೆದು ವ್ಯಾಪಾರ ಆರಂಭಿಸಿದ್ದರಿಂದ ಈ ಚಿತ್ರಗಳು ಮರೆಯಾಗಿವೆ.

ದೂರದೂರದ ಪ್ರವಾಸಿಗರು ಬಂದು ಇಲ್ಲಿ ಇಳಿದಾಗ ಪ್ರಥಮವಾಗಿ ಅವರಿಗೆ ಉಬ್ಬುಚಿತ್ರಗಳ ಮೂಲಕ ಶರಣರ ದರ್ಶನ ಆಗಲಿ ಎಂಬ ಸದುದ್ದೇಶದಿಂದ ಈ ಕಾರ್ಯ ನಡೆದಿತ್ತು. ಆದರೆ, ಈಗ ಬರೀ ಅಂಗಡಿಗಳೇ ಕಾಣುತ್ತಿವೆ. ಕೆಲ ತಿಂಗಳಲ್ಲಿ ಮಹಾದ್ವಾರದವರೆಗೂ ಅಂಗಡಿಗಳು ವ್ಯಾಪಿಸುವ ಸಾಧ್ಯತೆ ಇದೆ. ಹೀಗಾದರೆ ಒಂದೂ ಉಬ್ಬು ಚಿತ್ರಯಾರಿಗೂಗೋಚರಿಸುವುದಿಲ್ಲ. ಮಹಾದ್ವಾರದ ಅಂದವೂ ಹಾಳಾಗಲಿದೆ. ವಾಹನಗಳ ಸಂಚಾರಕ್ಕೂತೊಂದರೆಯಾಗಲಿದೆ ಎಂಬುದು ಸ್ಥಳೀಯರ ಅಭಿಮತ.

'ಸಂಬಂಧಿಸಿದ ಅಧಿಕಾರಿಗಳು ತಕ್ಷಣವೇ ಇಲ್ಲಿನ ಅತಿಕ್ರಮಣ ತೆರವುಗೊಳಿಸಬೇಕು.

ಪಾದಚಾರಿ ಮಾರ್ಗದಲ್ಲಿ ಯಾವುದೇ ಚಟುವಟಿಕೆಗಳು ನಡೆಯದಂತೆ ಕ್ರಮಹಿಸಬೇಕು' ಎಂಬುದು ಜನರ ಆಗ್ರಹವಾಗಿದೆ.

### ಗವಿಮಠದಲ್ಲಿ ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ

## ಐದನೇ ವಿಶೇಷ ಉಪನ್ಯಾಸ.



(ವರದಿ.ಡಿ.ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ : - ಆ 9 ನಮ್ಮ ಶುದ್ಧವಾದ ನಡತೆಯೇ ನಮಗೆ ಆಭೂಷಣ ಎಂದು ಇಲ್ಲಿನ ಸಂಸ್ಥಾನ ಗವಿಮಠದ ಪೂಜ್ಯಶ್ರೀ ಷ. ಬ್ರ. ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ನುಡಿದರು.

ಪವಿತ್ರ ಶ್ರಾವಣ ಮಾಸ ಅಂಗವಾಗಿ ಇಲ್ಲಿನ ಶ್ರೀ ಜಗದ್ಗುರು ಘನಲಿಂಗರುದ್ರಮುನಿ ಶಿವಚಾರ್ಯಸಂಸ್ಥಾನಗವಿಮಠದಲ್ಲಿ ಗವಿಮಠ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಸಿದ್ಧಾಂತಶಿಖಾಮಣಿ ಹಾಗೂ ವಚನ ಸಾಹಿತ್ಯ ಕುರಿತ ಐದನೇ ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ ಬಹಿರಂಗದಲ್ಲಿ ನಮ್ಮ ಈ ಸ್ಥೂಲ ದೇಹವನ್ನು ವಸ್ತ್ರ-ಆಭರಣಗಳಿಂಗ ಅಲಂಕರಿಸಬಹುದು. ಆದರೆ ಅಂತರಂಗದಲ್ಲಿ ಈ ಸೂಕ್ಷ್ಮ ದೇಹವನ್ನು ಅಂದರೆ ವ್ಯಕ್ತಿತ್ವ ಅಲಂಕಾರ ಮಾಡಲು ನಮ್ಮ ಶುದ್ಧವಾದ ನಡೆ - ನುಡಿಗಳೇ ಆಭೂಷಣಗಳು. ಮನುಷ್ಯ ಬಹಿರಂಗದಲ್ಲಿ ಅದೆಷ್ಟೇ ಬೆಲೆಬಾಳುವ ಆಭರಣಗಳನ್ನು ಧರಿಸಿದ್ದರೂ ನಡೆ - ನುಡಿ ಶುದ್ಧವಿಲ್ಲದ ಮನುಷ್ಯನಿಗೆ ಮನ್ನಣೆ ದೊ-ರೆಯದು. ಹಾಗೆಯೇ ವಿಶೇಷ ಸನ್ಮಾನಕ್ಕೆ ಪಾತ್ರರಾದ ಜಾಫರ್‌ವಾಡಿಯ ಶಾಂತವಿಜಯ ಪಾಟೀಲ ಅವರು ಕೃಷಿ ಕ್ಷೇತ್ರದಲ್ಲಿ ಶ್ರದ್ಧೆಯಿಂದ ದುಡಿದು ಸಾಧನೆ ಗೈದ ರೈತ. ಕಾರಣ ರೈತ ದೇಶದ ಬೆನ್ನೆಲುಬು. ಆದರೆ ರೈತರ ಬೆಳೆಗೆ ಸರಿಯಾದ ಬೆಲೆ ಸಿಕ್ಕಾಗ ಮಾತ್ರ ರೈತರ ಬದುಕು ಹಸನಗುತ್ತದೆ. ಈ ಸಾಧಕ ರೈತರನ್ನು ವಿಶೇಷ ಸನ್ಮಾನ ಗೈದು ಗೌರವಿಸಲಾಯಿತು ಎಂದು ನುಡಿದರು.

ಮುಖ್ಯ ಅತಿಥಿ ರವಿ ನಾಗನಕೆರೆ ಮಂಠಾಳ ಮಾತನಾಡಿ ಮೂಢನೇ ಇರಲಿ, ಪಾಪಿಯೇ ಇರಲಿ ಅವರನ್ನು ತನ್ನ ಉಪದೇಶದ ಮೂಲಕ ಸುಧಾರಿಸಿ ಸನ್ಮಾರ್ಗ ತೋರುವವರೇ ಸದ್ಗುರು. ಅಂಥ ಸದ್ಗುರುಗಳಾದ ಪೂಜ್ಯ ಅಭಿನವ ಶ್ರೀಗಳು ಸಾಮಾಜಿಕ, ಧಾರ್ಮಿಕ, ಸಾಂಸ್ಕೃತಿಕ ಕಾರ್ಯ ಶ್ಲಾಘನೀಯ ಎಂದು ಸಂತಸ ವ್ಯಕ್ತಪಡಿಸಿದರು.

ಅಧ್ಯಕ್ಷತೆ ವಹಿಸಿದ್ದ ಶಶಿಕಾಂತ ಶೀಲವಂತ ಅವರು ಮಾತನಾಡಿ ಗವಿಮಠಕ್ಕೆ ಪೂಜ್ಯ ಅಭಿನವ ಶ್ರೀಗಳು ಪ್ರತಿ ವರ್ಷ ಶ್ರಾವಣಮಾಸದಲ್ಲಿ ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ ಕುರಿತು ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮದ ಮೂಲಕ ನಮ್ಮೆಲ್ಲರಿಗೂ ಧರ್ಮಸಂಸ್ಕಾರ ಕೊಡುತ್ತಿರುವುದು ನಮ್ಮೆಲ್ಲರ ಭಾಗ್ಯ. ಅವರ ಕೃಪೆ ಸದಾ ನಮ್ಮ ಮೇಲೆ ಇರಲಿ ಎಂದು ಪ್ರಾರ್ಥಿಸಿದರು.


ಮುಖ್ಯ ಅತಿಥಿ ನಿವೃತ್ತ ಶಿಕ್ಷಕರಾದ ಬಲವಂತ ಚಾಕು-ರೇ, ಶಾಂತವಿಜಯ ಪಾಟೀಲ ವೇದಿಕೆಮೇಲಿದ್ದರು.

ವಿಶೇಷ ಸನ್ಮಾನ: ಕೃಷಿ ಕ್ಷೇತ್ರದಲ್ಲಿ ಸಾಧನೆಗೈದ ರೈತ ಶ್ರೀ ಶಾಂತವಿಜಯ ಪಾಟೀಲ ಜಾಫರವಾಡಿ ಅವರಿಗೆ ಪೂಜ್ಯ ಗುರುಗಳು ವಿಶೇಷಸನ್ಮಾನಗೈದು ಗೌರವಿಸಿ ಆಶೀರ್ವದಿಸಿದರು.

ಭಜನೆ: ಶಿವಪೂರದ ಭಜನಾ ಮಂಡಳಿ ಯವರು ಜಪ, ಭಜನೆ ಮಾಡಿದರು.

ಈ ಸಂದರ್ಭದಲ್ಲಿ ರಾಕೇಶ ಪುರವಂತ, ಷಣ್ಮುಖಯ್ಯ ಸ್ವಾಮಿ, ಮಡಿವಾಳಪ್ಪ ಕಲ್ಯಾಣಿ, ಪ್ರದೀಪ ಬಿರಾದಾರ, ರಮೇಶ ತೊಗರಖೇಡೆ, ಸವಿತಾ ರಮೇಶ ಸ್ವಾಮಿ, ರೇಖಾ ಚಿಟ್ಟೆ, ಸುರೇಖಾ ಸಜ್ಜನಶೆಟ್ಟಿ, ಶಕುಂತಲಾ ಮಠ, ಶಿವಲಿಲಾ ಬಿರಾದಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಶರಣ ಬಸಪ್ಪ ಆಲಗೂಡೆ ಪ್ರಾರ್ಥನೆ ಗೀತೆ. ಪ್ರೊ. ರುದ್ರೇಶ ಸ್ವಾಮಿ ಸ್ವಾಗತಿಸಿದರು. ಮಲ್ಲಿಕಾರ್ಜುನ ಆಲಗೂಡೆ ಸಂಚಾಲಿಸಿದರು.

## ರಾಜೇಶ್ವರ ಗ್ರಾಮದಲ್ಲಿ ಶ್ರಾವಣಿ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಆ 9 ತಾಲೂಕಿನ ರಾಜೇಶ್ವರ ಗ್ರಾಮದಲ್ಲಿ ಶ್ರೀ ಮಾಣಿಕಪ್ರಭು ಬ್ರಾಹ್ಮಣ ಸಮಾಜದ ವತಿಯಿಂದ ಶ್ರಾವಣ ಮಾಸದ ನಿಮಿತ್ತವಾಗಿ ಶ್ರಾವಣಿ ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ ಶ್ರೀನಿವಾಸಾಚಾರ್ಯ ಕಟ್ಟಿ. ಪ್ರಭಾಕರಾವ್ ಧನುರ್ಕರ್, ಪ್ರಕಾಶ್ ಮೊರಿರ್, ಹುಮನಾಬಾದ ತಾಲ್ಲೂಕಾ ಉಪಾಧ್ಯಕ್ಷರಾದ ಮಿಲಿಂದ್ ಕುಲಕರ್ಣಿ ರಾಜೇಶ್ವರ. ದಿಗಂಬರ ಜೋಶಿ, ಶ್ರೀ ವಾಸುದೇವ ಕಟ್ಟಿ, ದತ್ತಾತ್ರೇಯ ಜೋಶಿ, ಮುಕುಂದ ಕುಲಕರ್ಣಿ, ಶ್ರೀ ಪ್ರವೀಣ್ ಜೋಶಿ, ಸುಧೀಂದ್ರ ಕಟ್ಟಿ,

ದಿಗಂಬರ ಕುಲಕರ್ಣ. ಅದ್ವೈತ ಜೋಶಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಇಂದು ಪ್ರಶಸ್ತಿ ಪ್ರದಾನ.

(ವರದಿ. ಡಿ. ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ : ಆ 9 ಇಲ್ಲಿನ ಬಸವೇಶ್ವರ ವೃತ್ತದಲ್ಲಿರುವ ಬಿಕೆಡಿಬಿ ಕಲ್ಯಾಣ ಮಂಟಪದಲ್ಲಿ ಇಂದು ದಿನಾಂಕ 10 - 8 - 2025 ರಂದು ಬೆಳಿಗ್ಗೆ 11 ಗಂಟೆಗೆ ಕರ್ನಾಟಕ ಮರಾಠಾ ನೌಕರರ ಸಂಘದಿಂದ ಸಾಧಕರಿಗೆ ಸನ್ಮಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಅಧ್ಯಕ್ಷರಾದ ಮಹೆಶ ಮುಳೆ ತಿಳಿಸಿದ್ದಾರೆ. ಈ ಸಮಾರಂಭದಲ್ಲಿ ಎಸ್. ಎಸ್. ಎಲ್. ಸಿ. ಮತ್ತು ಪಿಯುಸಿಯಲ್ಲಿ ಹೆಚ್ಚಿನ ಅಂಕ ಪಡೆದ ಉತ್ತೀರ್ಣರಾದ ಮರಾಠಾ ಸಮಾಜದ ವಿದ್ಯಾರ್ಥಿಗಳಿಗೆ ಹಾಗೂ ತಾಲ್ಲೂಕಾ ಮತ್ತು ಜಿಲ್ಲಾ ಮಟ್ಟದಲ್ಲಿ ಟಾಪರ್ ಆಗಿರುವ ಇತರೆ ಸಮುದಾಯದ ವಿದ್ಯಾರ್ಥಿಗಳಿಗೆ ರಾಜಮಾತ ಜೀಜಾವು ಪ್ರತಿಭಾ ಪ್ರಶಸ್ತಿ ನೀಡಿ ಸನ್ಮಾನಿಸಲಾಗುತ್ತಿದೆ. ಸಮಾರಂಭದಲ್ಲಿ ಶಾಸಕರಾದ ಶರಣು ಸಲಗರ್ ಮತ್ತು ಇತರೆ ಗಣ್ಯರು ಭಾಗವಹಿಸಲಿದ್ದಾರೆ ಎಂದು ಪ್ರದಾನ ಕಾರ್ಯದರ್ಶಿ ಶ್ರೀ ಕಾಂತ ಚವ್ಹಾಣ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೈದ್ಯಾಧಿಕಾರಿ ಡಾ ರಾಜೇಶ್ವರಿ ಗುತ್ತೆದಾರ ಸೇವೆ ಶ್ಲಾಘನೀಯ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ ತಾಲೂಕಿನ ದೋರನಹಳ್ಳಿ ಗ್ರಾಮದ ಸಮುದಾಯ ಆರೋಗ್ಯ ಕೇಂದ್ರಕ್ಕೆ ಅನಿರೀಕ್ಷಿತವಾಗಿ ಜಿಲ್ಲಾಧಿಕಾರಿಗಳಾದ ಶ್ರೀ ಹರ್ಷಲ್ ಬೋಯರ್ ಭೇಟಿ ವೈದ್ಯಾಧಿಕಾರಿಗಳಿಗೆ ಆಸ್ಪತ್ರೆಯ ಸ್ವಚ್ಛತೆ ಉತ್ತಮ ಚಿಕಿತ್ಸೆ ಒಳ್ಳೆಯ ಸೇವೆ ಆಸ್ಪತ್ರೆ ನೋಡಿ ಖುಷಿ ಪಟ್ಟರು. ಇನ್ನು ಆಸ್ಪತ್ರೆಗೆ ಬೇಕಾಗಿರುವ ಸೌಲಭ್ಯ ಒದಗೀಸುತ್ತವೇ ಇನ್ನು ಸ್ವಚ್ಛತೆ ಕಾಪಾಡಬೇಕು ಮತ್ತು ಬರುವಂತ ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಲು ತಿಳಿಸಲಾಯಿತು

ಈ ಸಂದರ್ಭದಲ್ಲಿ ವೈದ್ಯಾಧಿಕಾರಿಗಳಾದ ಡಾ. ರಾಜೇಶ್ವರಿ ಗುತ್ತೆದಾರ ಡಾ ಗೀತಾ ಅವಂಟಿ ಹಾಗೂ ಸಿಬ್ಬಂದಿವರ್ಗ ಉಪಸ್ಥಿತರಿದ್ದರು.

## ಆ.16ರಂದು ಸಿಎಂ ಅವರು ಒಳಮೀಸಲಾತಿ ಜಾರಿ ಮಾಡಲಿ: ಅಭಿ ಕಾಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 09 : ಈ ತಿಂಗಳ 16ರಂದು ಸಿಎಂ ಸಿದ್ಧರಾಮಯ್ಯನವರು ಕೊಟ್ಟ ಮಾತಿನಂತೆ ಒಳಮೀಸಲಾತಿ ಜಾರಿ ಮಾಡಲಿ ಎಂದು ಡಾ. ಬಾಬು ಜಗಜೀವನರಾಮ್ ಹೋರಾಟ ಸಮಿತಿ ಜಿಲ್ಲಾ ಅಧ್ಯಕ್ಷ ಅಭಿ ಕಾಳೆ ಒತ್ತಾಯಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶನಿವಾರ ಕರೆದ ಸುದ್ದಿಗೋಷ್ಠಿಉದ್ದೇಶಿಸಿಮಾತನಾಡಿದ ಅವರು, ಸುಮಾರು 30–35 ವರ್ಷಗಳಿಂದ ಒಳಮೀಸಲಾತಿ ಜಾರಿಗಾಗಿ ನಮ್ಮ ಹಿರಿಯರು ನಿರಂತರವಾಗಿತಮಟೆಚಳುವಳಿ, ಅರೆಬೆತ್ತಲೆ ಮೆರವಣಿಗೆ ಹೋರಾಟ, ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ಸೇರಿದಂತೆ ಹಲವಾರು ರೀತಿಯ ಹೋರಾಟ ಮಾಡುತ್ತಲೇ ಬಂದಿದ್ದಾರೆ. ಇದೀಗ ಮುಂಗಾರು ಅಧಿವೇಶನ ಆರಂಭದಲ್ಲೇ ಒಳಮೀಸಲಾತಿ ಜಾರಿ ಮಾಡಬೇಕೆಂದು ಆಗ್ರಹಿಸಿ ಆ. 11 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ಸತ್ಯಾಗ್ರಹ ಹಮ್ಮಿಕೊಂಡಿದ್ದೇವೆ.

ರಾಜ್ಯದ ಎಲ್ಲಾ ಜಿಲ್ಲೆಗಳಿಂದ ವಿವಿಧ ಮಾದಿಗ ಸಂಘಟನೆಗಳ ಪ್ರಮುಖರು ಪಾಲ್ಗೊಳ್ಳಲಿದ್ದಾರೆ. ಒಳಮೀಸಲಾತಿ ಜಾರಿ ಮಾಡುವ ವರೆಗೆ ಹೋರಾಟ ಮುಂದುವರೆಯಲಿದೆ. ಒಂದು ವೇಳೆ ಜಾರಿ ಮಾಡದಿದ್ದರೆ ರಾಜ್ಯದಾದ್ಯಂತ ಬಿಸಿ ವಾತಾವರಣ ಮುಂದುವರೆಯಲಿದೆ. ಆದ್ದರಿಂದ ಜಿಲ್ಲೆಯ ಮಾದಿಗ ಸಮಾಜದ ಹಾಗೂ ಅದರ ಉಪ ಜಾತಿಗಳ ಪ್ರಮುಖರು ಹೆಚ್ಚಿನ ಸಂಖ್ಯೆಯಲ್ಲಿ ಅಹೋರಾತ್ರಿ ಸತ್ಯಾಗ್ರಹದಲ್ಲಿ ಪಾಲ್ಗೊಳ್ಳಬೇಕೆಂದು ಅಭಿ ಕಾಳೆ ತಿಳಿಸಿದರು. ಪೌರಾಡಳಿತ ಸಚಿವ ರಹಿಂಖಾನ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರಿಗೆ ಸತತವಾಗಿ ನಾಲ್ಕು ಬಾರಿ ಗೆಲ್ಲಿಸಿ ಸಹಕಾರ ನೀಡಿದ್ದೇವೆ. ಆದ್ದರಿಂದ ಕ್ಯಾಬಿನೇಟ್‌ನಲ್ಲಿ ಧ್ವನಿ ಎತ್ತಿ ಒಳಮೀಸಲಾತಿ ಜಾರಿ ಮಾಡಲು ಸಹಕರಿಸಿ ಋಣ ತೀರಿಸಬೇಕೆಂದು ಹೇಳಿದರು. ಸಮಿತಿಯ ಗೌರವಾಧ್ಯಕ್ಷ ಸಿ.ಎಂ.ದಾಸ್ ಮಾತನಾಡಿ, ಸುಮಾರು ಮೂರು ದಶಕಗಳಿಂದ ಮಾದಿಗ ಸಮುದಾಯಕ್ಕೆ ಅನ್ಯಾಯವಾಗುತ್ತಲೇ ಬಂದಿದೆ. ಕೊಟ್ಟ ಮಾತಿನಂತೆ ಸಿಎಂ ಸಿದ್ಧರಾಮಯ್ಯ ಒಳಮೀಸಲಾತಿ ಜಾರಿ ಮಾಡಿ ಪುಣ್ಯ ಕಟ್ಟಿಕೊಳ್ಳಬೇಕೆಂದು ತಿಳಿಸಿದರು.

ಕರ್ನಾಟಕ ಆದಿ ಜಾಂಬವ ಸಮಾಜ ಸಂಘಟನೆಯ ಜಿಲ್ಲಾಧ್ಯಕ್ಷ ಸಂಜೀವಕುಮಾರ ಬೇಂದ್ರೆ ಮಾತನಾಡಿ, ಮಾದಿಗ ಸಮುದಾಯ ಶೈಕ್ಷಣಿಕವಾಗಿ, ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಸಾಕಷ್ಟು ಹಿಂದುಳಿದಿದೆ. ಹೀಗಾಗಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸಾಮಾಜಿಕ ನ್ಯಾಯ ನಮಗೂ ಒದಗಿಸಿಕೊಡಬೇಕು. ರಾಜ್ಯ ಸರ್ಕಾರ ಮಾದಿಗ ಸಮುದಾಯದ ಶೇ. 90 ಪ್ರತಿಶತ ಮತಗಳನ್ನು ಪಡೆದು ಸರ್ಕಾರ ರಚಿಸಿದೆ. ಸಮಾಜದ ಬಗ್ಗೆ ಸಿಎಂ ಅವರಿಗೆ ಕಿಂಚಿತ್ತು ಕಳಕಳಿ ಇದ್ದರೆ ಕೂಡಲೇ ಒಳಮೀಸಲಾತಿ ಜಾರಿ ಮಾಡಬೇಕು. ವಿಳಂಬನೀತಿ ಅನುಸರಿಸುತ್ತಿರುವ ರಾಜ್ಯ ಸರ್ಕಾರಕ್ಕೆ ಚುರುಕು ಮುಟ್ಟಿಸಲೆಂದೇ ಆ.11 ರಂದು ಫ್ರೀಡಂ ಪಾರ್ಕ್‌ನಲ್ಲಿ ಧರಣಿ ಸತ್ಯಾಗ್ರಹ ಹಮ್ಮಿಕೊಂಡಿದ್ದೇವೆ. ರಾಜ್ಯಪ್ರಮುಖರಾದ ಬಸವರಾಜ ಕೌತಾಳ ಮತ್ತು ಅಂಬಣ್ಣ ಅರೋಳಿಕರ್ ಅವರ ನೇತೃತ್ವದಲ್ಲಿ ಹೋರಾಟ ನಡೆಯಲಿದೆ. ಜಿಲ್ಲೆಯ ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಕರೆ ನೀಡಿದರು. ಸಮಿತಿಯ ಕಾರ್ಯದರ್ಶಿ ಜಿ.ಎಂ.ಕ್ರಿಸ್ಟೋಫರ್, ರೋಸೆನ್ ಮಲ್ಕಾಪುರ, ಸಮಿತಿಯ ಜಿಲ್ಲಾ ಯುವ ಘಟಕದ ಅಧ್ಯಕ್ಷ ಸೀಮನ್ ಕಾಳೆ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಬಸವರಾಜ ಧನ್ನೂರರಗೆ ಬಸವ ಪುರಸ್ಕಾರ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 09 : ಖ್ಯಾತ ಉದ್ಯಮಿಯೂ ಆದ ಜಾಗತಿಕ ಲಿಂಗಾಯತ ಮಹಾಸಭಾದ ಕೇಂದ್ರ ಸಮಿತಿಯ ಉಪಾಧ್ಯಕ್ಷ ಬಸವರಾಜ ಧನ್ನೂರ ಅವರಿಗೆ ಬೆಂಗಳೂರಿನ ಬಸವ ಪರಿಷತ್ ವತಿಯಿಂದ ಕೊಡಲಾಗುವ 2025ನೇ ಸಾಲಿನ ಬಸವ ಪುರಸ್ಕಾರ ಬೆಂಗಳೂರಿನಲ್ಲಿ ಶನಿವಾರ ಪ್ರದಾನ ಮಾಡಲಾಯಿತು.

ಅರಮನೆ ರಸ್ತೆಯಲ್ಲಿ ಇರುವ ಕೊಂಡಜ್ಜಿ ಬಸಪ್ಪ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಸುತ್ತೂರು ಮಠದ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಪ್ರಶಸ್ತಿ ಪ್ರದಾನ ಮಾಡಿದರು.

ಉದ್ಯಮ ಹಾಗೂ ಸಾಮಾಜಿಕ ಕ್ಷೇತ್ರಕ್ಕೆ ನೀಡಿದ ಗಣನೀಯ ಕೊಡುಗೆಗಾಗಿ ಅವರಿಗೆ ಪ್ರಶಸ್ತಿ ಸಂದಿದೆ. ಈ ಸಾಲಿನ ಬಸವ ಪುರಸ್ಕಾರಕ್ಕೆ ಆಯ್ಕೆಯಾದವರಲ್ಲಿ ಬಸವರಾಜ ಧನ್ನೂರ ಸೇರಿ ವಿವಿಧ ಕ್ಷೇತ್ರಗಳ 15 ಸಾಧಕರು ಸೇರಿದ್ದಾರೆ.

ಉದ್ಯಮ ಹಾಗೂ ಸಮಾಜ ಸೇವೆಯನ್ನು ಒಟ್ಟಿಗೆ ನಿರ್ವಹಿಸಿಕೊಂಡು ಹೋಗುತ್ತಿರುವ ಬಸವರಾಜ ಧನ್ನೂರ ಅಪ್ಪಟ ಬಸವಾನುಯಾಯಿ ಆಗಿದ್ದಾರೆ. ಕಾಯಕದ ಜತೆಗೆ ದಾಸೋಹಕ್ಕೂ ಪ್ರಾಮುಖ್ಯ ನೀಡಿದ್ದಾರೆ. ಸಮಾಜೋಧಾರ್ಮಿಕ ಕಾರ್ಯಗಳಿಗೆ ಉದಾರ ದೇಣಿಗೆ ಕೊಡುತ್ತಾ ಬಂದಿದ್ದಾರೆ. ಅನೇಕ ಬಡ ಮಕ್ಕಳ ಶಿಕ್ಷಣಕ್ಕೆ ನೆರವಾಗಿದ್ದಾರೆ. ಬಸವ ಕಾಯಕ, ದಾಸೋಹ ಫೌಂಡೇಷನ್ ಮೂಲಕ ಸಾಮಾಜಿಕ ಚಟುವಟಿಕೆಗಳಲ್ಲಿ ಸಕ್ರಿಯರಾಗಿದ್ದಾರೆ.

ಜಿಲ್ಲೆಯ ಯಶಸ್ವಿ ಉದ್ಯಮಿಗಳಲ್ಲಿ ಒಬ್ಬರಾದ ಅವರು ಎರಡನೇ ಅವಧಿಗೆ ಬೀದರನ ಗಾಂಧಿಗಂಜನ ದಿ ಗ್ರೇನ್ ಆಯಿಂಡ್ ಸೀಡ್ಸ್ ಮರ್ಚಂಟ್ಸ್ ಅಸೋಸಿಯೇಷನ್ ಅಧ್ಯಕ್ಷರಾಗಿದ್ದಾರೆ.

ಬೀದರ್ ದಾಲ್ ಮಿಲ್ ಓನರ್ಸ್ ಅಸೋಸಿಯೇಷನ್ ಕಾರ್ಯದರ್ಶಿ, ಬಸವ ಕಾಯಕ, ದಾಸೋಹ ಫೌಂಡೇಷನ್ ಅಧ್ಯಕ್ಷ, ಅಂತರರಾಷ್ಟ್ರೀಯ ರೋಟರಿ ಜಿಲ್ಲೆ 3160 ಪಬ್ಲಿಕ್ ಇಮೇಜ್ ಅಧ್ಯಕ್ಷ ಸೇರಿ ವಿವಿಧ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಹಲವಾರು ಸಂಘ– ಸಂಸ್ಥೆಗಳೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ.

ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಇಸ್ರೋ ಮಾಜಿ ಅಧ್ಯಕ್ಷ ಎಸ್. ಕಿರಣಕುಮಾರ, ಮಾಜಿ ಸಚಿವರಾದ ಉಮಾಶ್ರೀ, ಎಸ್.ಆರ್. ಪಾಟೀಲ, ನಿವೃತ್ತ ಲೋಕಾಯುಕ್ತ ಸಂತೋಷ್ ಹೆಗ್ಡೆ ಮತ್ತಿತರರು ಇದ್ದರು.

# ಮದುವೆಗೆ ದುಂಬಾಲು ಬಿದ್ದ ಮಹಿಳೆ: ಅತಿಥಿಗೃಹದಲ್ಲಿ ಯುವಕನ ಶವ ಪತ್ತೆ

ಬೀದರ್, ಆ.9: ನಗರದ ಹಬ್ಸಿಕೋಟ್ ಅತಿಥಿ ಗೃಹದಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಯುವಕನ ಶವ ಪತ್ತೆಯಾಗಿದೆ. ಮೃತನಿಗೆ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಗೋದಿಹಿಪ್ಪರ್ಗಾ ಗ್ರಾಮದ ಯುವಕ ಪರಮೇಶ್ವರ್ (30) ಎಂದು ಗುರುತಿಸಲಾಗಿದೆ. ಹಲ್ಲೆ ಮಾಡಿ ನೇಣು ಹಾಕಿದ್ದಾರೆಂದು ಯುವಕನ ಮನೆಯವರು ಆರೋಪ ಮಾಡಿದ್ದಾರೆ. ಪ್ರಕರಣ ಸಂಬಂಧ ನಾಲ್ವರ ವಿರುದ್ಧ ಮಾರ್ಕೆಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪರಮೇಶ್ವರ್ ಕಳೆದ ಹಲವು ವರ್ಷದಿಂದ ಬೆಂಗಳೂರಿನಲ್ಲಿ ಖಡಕ್ ರೊಟ್ಟಿ, ಚೆಟ್ನಿ ಮಾರುವ ವ್ಯಾಪಾರ ಮಾಡಿಕೊಂಡಿದ್ದನು. ಬೆಂಗಳೂರಿನಲ್ಲಿ ಓರ್ವ ಮಹಿಳೆಯೊಂದಿಗೆ ಅಕ್ರಮ ಸಂಬಂಧ ಹೊಂದಿದ್ದನು. ಮಹಿಳೆಗೆ ಈಗಾಗಲೆ ಒಂದು ಮಗು ಇದೆ. ಅಕ್ರಮ ಸಂಬಂಧದಿಂದ ಮಹಿಳೆ ನಾಲ್ಕು ತಿಂಗಳ



ಗರ್ಭಿಣಿಯಾಗಿದ್ದಾಳೆ.

ಗರ್ಭಿಣಿಯಾಗಿರುವ ವಿಚಾರ ತಿಳಿದು ಮದುವೆ ಮಾಡಿಕೊಳ್ಳುವಂತೆ ಪರಮೇಶ್ವರಗೆ ಮಹಿಳೆ ದುಂಬಾಲು ಬಿದ್ದಿದ್ದಳು. ಮಹಿಳೆಯ ಕಾಟ ತಾಳಲಾರದೆ ಪರಮೇಶ್ವರ ಬೆಂಗಳೂರಿನಿಂದ ಸ್ವಗ್ರಾಮಕ್ಕೆ ಬಂದಿದ್ದನು. ಆಗ, ಮಹಿಳೆ ಬೆಂಗಳೂರಿನಿಂದ ಮಹಿಳಾ ಸಂಘಟನೆಯ ಓರ್ವ ಮಹಿಳೆಯನ್ನು ಕ–ರೆದುಕೊಂಡು ಪರಮೇಶ್ವರನ ಮನೆಗೆ ಹೋಗಿದ್ದಾಳೆ. ಶುಕ್ರವಾರ ಮಹಿಳೆ ಪರಮೇಶ್ವರನ ಮನೆಗೆ ಹೋಗಿ ಗಲಾಟೆ ಮಾಡಿ ಮದುವೆ ಮಾಡಿಕೊಳ್ಳುವಂತೆ ಹಠ ಹಿಡಿದಿದ್ದಳು.

ನಂತರ, ಪರಮೇಶ್ವರ್ ಮತ್ತು ಇತನ ಸ್ನೇಹಿತರು ಹಾಗೂ ಮಹಿಳೆ ಸೇರಿದಂತೆ ನಾಲ್ವರು ಅತಿಥಿಗೃಹದಲ್ಲಿದ್ದರು. ಆದಾಗ್ಯೂ, ಶನಿವಾರ ನೇಣು ಬಿಗಿದ ಸ್ಥಿತಿಯಲ್ಲಿ ಪರಮೇಶ್ವರ್ ಶವ ಪತ್ತೆಯಾಗಿದೆ. ಪರಮೇಶ್ವರ್ ಮನೆಯವರು ಮಾರ್ಕೆಟ್ ಪೊಲೀಸ್ ಠಾಣೆಯಲ್ಲಿ ಕೊಲೆ ಪ್ರಕರಣ ದಾಖಲಿಸಿದ್ದಾರೆ.

## ಭಾಲ್ಕಿ ಪೊಲೀಸ್ ಠಾಣೆಯಲ್ಲಿ ರಕ್ಷಾ ಬಂಧನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.9:ನಮ್ಮದೇಶದಲ್ಲಿಯ ಎಲ್ಲಾ ಹಬ್ಬಗಳಿಗಿಂತಲೂ, ನಮ್ಮಲ್ಲಿ ಸಹೋದರತ್ವ ಭಾವ ಬೆಳೆಯಲು ರಕ್ಷಾ ಬಂಧನ ಅತಿ ಮಹತ್ವದ ಹಬ್ಬವಾಗಿದೆ ಎಂದು ನಗರ ಪೊಲೀಸ್ ಠಾಣೆಯ ವೃತ್ತ ನಿರೀಕ್ಷಕ (ಸಿಪಿಐ) ಬಿ.ಅಮರೇಶ ಅಭಿಪ್ರಾಯಪಟ್ಟರು. ಪಟ್ಟಣದ ಪೊಲೀಸ್ ಠಾಣೆಯಲ್ಲಿ ಮಹಿಳಾ ಸಿಬ್ಬಂದಿಗಳಿಂದ ಶನಿವಾರ ಆಯೋಜಿಸಿದ್ದ ಸಾಮೂಹಿಕ ರಕ್ಷಾ ಬಂಧನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ರಕ್ಷಾ ಬಂಧನ ಹಬ್ಬದಲ್ಲಿ ಸಹೋದರಿಯರು ತಮ್ಮ ಸಹೋದರರ ಆರೋಗ್ಯ ಮತ್ತು ರಕ್ಷಣೆಗಾಗಿ ಪ್ರಾರ್ಥಿಸುತ್ತಾರೆ. ಹೀಗಾಗಿ ಎಲ್ಲಾ ಹಬ್ಬಗಳಲ್ಲಿಯೂ ರಕ್ಷಾ ಬಂಧನ ಬಹಳ ಮಹತ್ವ ಪಡೆದುಕೊಂಡಿದೆ ಎಂದು ಹೇಳಿದರು. ಗ್ರಾಮೀಣ ಪೊಲೀಸ್ ಠಾಣೆಯ ಸಿಪಿಐ ಹಣಮರೆಡ್ಡಿ ಮಾತನಾಡಿ, ರಕ್ಷಾ ಬಂಧನ ಹಬ್ಬವು ಎಲ್ಲರೂ ಪ್ರೀತಿ, ವಿಶ್ವಾಸದಿಂದ ಬಾಳ್ವೆ ಮಾಡುವುದನ್ನು ಕಲಿಸಿಕೊಡುತ್ತದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಎ.ಎಸ್.ಐ ಮಾಧವ, ಶಕೀಲ, ಹೆಚ್.ಸಿ ಸಂಜೀವಕುಮಾರ, ಶಿವಾನಂದ, ಮಹೇಶ, ದಲೀಪ, ಮಹಿಳಾ ಹೆಚ್.ಸಿ ಸುಜಾತ, ಮಹಿಳಾ ಪಿ.ಸಿ ಶ್ರೀದೇವಿ, ರೂಪಾ ಮತ್ತಿತರರು ಇದ್ದರು.

# ಸಹೋದರ-ಸಹೋದರಿಯರ ಬಾಂಧವ್ಯ ಗಟ್ಟಿಗೊಳಿಸುವ ರಕ್ಷಾ ಬಂಧನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.9:ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ಶಿಕ್ಷಣ ಸಮುಚ್ಚಯದಲ್ಲಿ ಶರಣ ನೂಲಿಯ ಚಂದಯ್ಯನವರ ಜಯಂತಿ ಹಾಗೂ ರಕ್ಷಾ ಬಂಧನ ಹಬ್ಬವನ್ನು ಸಡಗರ, ಸಂಭ್ರಮದಿಂದ ಆಚರಿಸಲಾಯಿತು.

ವಿದ್ಯಾರ್ಥಿನಿ ಸಹೋದರಿಯರು, ವಿದ್ಯಾರ್ಥಿ ಸಹೋದರರಿಗೆ ರುದ್ರಾಕ್ಷಿಯಿಂದ ಕೂಡಿದ ರಾಕಿ ಕಟ್ಟಿ, ಆರತಿ ಬೆಳಗಿ, ಸಿಹಿ ತಿಂಡಿಯಾದ ಜಾಮೂನು ತಿನ್ನಿಸಿದರು.

ಇದಕ್ಕೂ ಮೊದಲು ವಿಶ್ವಗುರು ಬಸವಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರಾಚಾರ್ಯ ಬಸವರಾಜ ಮೊಳಕೀರೆ ಅವರು, ರಕ್ಷಾ ಬಂಧನ ಸಹೋದರ–ಸಹೋದರಿಯರ ಬಾಂಧವ್ಯ ಇನ್ನಷ್ಟು ಗಟ್ಟಿಗೊಳಿಸುವ ಹಬ್ಬವಾಗಿದೆ.

ಈ ದಿನದಂದು ಅಣ್ಣನ ಒಳಿತನ್ನು ಬಯಸುವ ಸಹೋದರಿಯರು ರಾಖಿ ಕಟ್ಟುತ್ತಾರೆ ಎಂದು ಹಬ್ಬದ ಮಹತ್ವ ಕುರಿತು ತಿಳಿಸಿದರು.

ನೂಲಿಯ ಚಂದಯ್ಯನವರ ಕುರಿತು ವಿಶೇಷ ಉಪನ್ಯಾಸ ನೀಡಿದ ಮಧುಕರ ಗಾಂವ್ಕರ್ ಅವರು, ನೂಲಿಯ ಚಂದಯ್ಯ ಒಬ್ಬ ಶ್ರೇಷ್ಠ ಶರಣ ಮತ್ತು ವಚನಕಾರ ಆಗಿದ್ದರು. ಅವರು ಕಾಯಕನಿಷ್ಠೆಗೆ ಹೆಸರುವಾಸಿಯಾಗಿದ್ದು, ಕಾಯಕವೇ ಕೈಲಾಸ ಎಂದು ನಂಬಿದ್ದರು ಎಂದು ತಿಳಿಸಿದರು.

12ನೇ ಶತಮಾನದಲ್ಲಿ ಕಲ್ಯಾಣದಲ್ಲಿ ವಾಸಿಸುತ್ತಿದ್ದರು. ಅವರು ನೂಲುವ ಕಾಯಕವನ್ನು ಮಾಡುತ್ತಿದ್ದರು.

ತಮ್ಮ ಕಾಯಕದಿಂದ ಬಂದ ಹಣದಿಂದ ದಾಸೋಹ ನಡೆಸುತ್ತಿದ್ದರು. ಅವರ ವಚನಗಳಲ್ಲಿ ಕಾಯಕದ ಮಹತ್ವವನ್ನು ಸಾರಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಸತಿ ವಿಭಾಗದ ಮುಖ್ಯಸ್ಥೆ ಜಯಕ್ಕಾ ಗಾಂವ್ಕರ್, ಉಪ ಪ್ರಾಚಾರ್ಯ ಸಿದ್ರಾಮ ಗೊಗ್ಗಾ, ಮುಖ್ಯಶಿಕ್ಷಕರಾದ ಮಹೇಶ ಮಹಾರಾಜ್, ಮಹೇಶ ಕುಲಕರ್ಣಿ, ಎಸ್ಸೆಸ್ಸೆಲ್ಸಿ ಸಂಯೋಜಕ ಪ್ರವೀಣ ಖಂಡಾಳೆ, ಪ್ರಮುಖರಾದ ಅನಿಲ್ ಕುಮಾರ ಪಾಟೀಲ, ಪ್ರಶಾಂತ ರೆಡ್ಡಿ, ಶಶಿಕುಮಾರ, ನಾಗೇಶ ತಮಾಸಂಗೆ, ಲಕ್ಷ್ಮಣ ಮೇತ್ರೆ ಸೇರಿದಂತೆ ಇತರರು ಇದ್ದರು.



ಭಾಲ್ಕಿ: ತಾಲೂಕಿನ ಖಟಕ ಚಿಂಚೋಳಿ ವಲಯ ಮಟ್ಟದ ಪ್ರೌಢಶಾಲಾ ಕ್ರೀಡಾ ಕೂಟದಲ್ಲಿ ಮಹಾತ್ಮಾಗಾಂಧಿ ಪ್ರೌಢಶಾಲೆ ಕಲವಾಡಿಯ ವಿದ್ಯಾರ್ಥಿನಿಯರು ಖೊ ಖೋ ಮತ್ತು ಕಬ್ಬಡಿ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಪಡೆದು ತಾಲೂಕು ಮಟ್ಟಕ್ಕೆ ಆಯ್ಕೆಗೊಂಡು ಗೆಲುವಿನ ನಗೆ ಬೀರಿದರು. ದೈಹಿಕ ಶಿಕ್ಷಕ ಆನಂದ ಖಂಡಗೊಂಡ ಇದ್ದರು

## ಗರಿಷ್ಠ 02 ವರ್ಷ ಎದೆ ಹಾಲುಣಿಸಬೇಕು:ಡಾ.ಶೈಲಜಾ ತಳವಾಡೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಅ.9:ತಾಯಿಂದಿರು ಆರೋಗ್ಯವಂತ ಶರೀರಕ್ಕಾಗಿ ಗರಿಷ್ಠ ಎರಡು ವರ್ಷ ಎದೆ ಹಾಲುಣಿಸಬೇಕು ಎಂದು ಸ್ತ್ರೀರೋಗ ತಜ್ಞೆ ಡಾ.ಶೈಲಜಾ ತಳವಾಡೆ ಹೇಳಿದರು.

ಪಟ್ಟಣದ ತಳವಾಡೆ ಆಸ್ಪತ್ರೆಯಲ್ಲಿ ರೋಟರಿ ಕ್ಲಬ್ ಆಫ್ ಭಾಲ್ಕಿ ಫೋರ್ಟ್ ಮತ್ತು ತಳವಾಡೆ ಆಸ್ಪತ್ರೆಯ ಸಹಯೋಗದಲ್ಲಿ ಹಮ್ಮಿಕೊಂಡ ವಿಶ್ವಸ್ತನ್ಯಪಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಕನಿಷ್ಠ ಆರು ತಿಂಗಳು ಮತ್ತು ಗರಿಷ್ಠ ಎರಡು ವರ್ಷ ತಾಯಿ



ಎದೆ ಹಾಲು ಕುಡಿಸಬೇಕು. ಎದೆ ಹಾಲುಣಿಸುವುದರಿಂದ ಉತ್ತಮ ಆರೋಗ್ಯ ಕಾಪಾಡುವುದಲ್ಲದೆ ಹಣದ ಉಳಿತಾಯವಾಗುತ್ತದೆ. ಮೊಲೆ ಹಾಲು ಭವಿಷ್ಯದಲ್ಲಿ ಬರುವ ಬಿಪಿ, ಶುಗರ್, ಟಿಬಿ, ಅಸ್ತಮಾರೋಗ ತಡೆಗಟ್ಟಬಹುದು ಎಂದು ಬಹು ಮಾರ್ಮಿಕವಾಗಿ ನುಡಿದರು.

ಮಕ್ಕಳ ತಜ್ಞ ಡಾ.ವಸಂತ ಪವಾರ ಮಾತನಾಡಿ, ತಾಯಿ–ಮಗುವಿನ ಮಮತೆ ಮತ್ತು ಮಕ್ಕಳ ದೈಹಿಕ ಮತ್ತು ಮಾನಸಿಕ ಸಮತೋಲನ ಬೆಳವಣಿಗೆಗೆ ಯಾಯಿಹಾಲೆ ಶ್ರೇಷ್ಠವಾಗಿರುತ್ತದೆ ಎಂದರು.

ರೋಟರಿ ಕ್ಲಬ್ ತಾಲೂಕು ಅಧ್ಯಕ್ಷ ಅಶ್ವಿನ ಭೋಸ್ಲೆ ಅಧ್ಯಕ್ಷತೆವಹಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ನೂರಾರು ಬಾಣಂತಿಯರು ಸೇರಿದಂತೆ ಆಸ್ಪತ್ರೆ ಸಿಬ್ಬಂದಿ ಉಪಸ್ಥಿತರಿದ್ದರು.

ರೋ.ದತ್ತುಕುವಾರ ಮೇಹಕ್ರೆ ಸ್ವಾಗತಿಸಿದರು. ನಿವೃತ್ತ ಪ್ರಾಚಾರ್ಯ ಅಶೋಕ ರಾಜೋಳೆ ನಿರೂಪಿಸಿದರು. ಆಸ್ಪತ್ರೆ ವ್ಯವಸ್ಥಾಪಕ ಡಿಸೋಜಾ ವಂದಿಸಿದರು.

# ನಿರಂತರ ಮಳೆ ಹಳ್ಳ ಕೊಳ್ಳಗಳು

## ಮೈದುಂಬಿ ಹರಿದು ಪ್ರವಾಹ ಸೃಷ್ಠಿ ಅವಾಂತರ

ಕಲಬುರಗಿ:ಅ,9:ಚಿಂಚೋಳಿ ತಾಲೂಕಿನಾದ್ಯಂತ ಶನಿವಾರ ಬೆಳಗ್ಗೆಯಿಂದಲೇ ನಿರಂತರವಾಗಿ ಧಾರಕಾರ ಸುರಿಯುತ್ತಿರುವ ಮಳೆಯಿಂದ ಹಳ್ಳ ಕೊಳ್ಳಗಳು ಮೈದುಂಬಿ ಹರಿಯುತ್ತಿದ್ದು, ವಿವಿಧಡೆ ಅವಾಂತರ ಸೃಷ್ಠಿಸಿ ಜನಜೀವನ ಅಸ್ತವ್ಯಸ್ತಗೊಂಡಿದೆ.

ತಾಲೂಕಿನ ಗರಗಪಳ್ಳಿಯಿಂದ ಭಕ್ತಂಪಳ್ಳಿ, ಅಣವಾರ ದಿಂದ ಪೋಲಕಪಳ್ಳಿ , ಗಾರಂಪಳ್ಳಿ, ಹೊಸಳ್ಳಿಯಿಂದ ದೇಗಲ್ಮಡಿ ಸಂಪರ್ಕ ಕಲ್ಪಿಸುವ ಸೇತುವೆಗಳು ಮಳೆಯ ಪ್ರವಾಹದಿಂದ ಸಂಪರ್ಕ ಕಡಿತಗೊಂಡು ಸಾರ್ವಜನಿಕರ ಪರದಾಡುವಂತಾಯಿತು. ಚಿಮ್ಮಇದಲಾಯಿ ಬಳಿ ಲೋಹಾರ ಮುಲ್ಲಾಮಾರಿಯ ಕಾಲೂವೆ ಮೈದುಂಬಿ ಹರಿಯುತ್ತ ರೈತರ ಜಮೀನುಗಳಿಗೆ ನೀರು ನುಗ್ಗಿ ಬಿತ್ತಿ ಬೆಳೆದ ಬೆಳೆಯನ್ನು ಅಪಾರ ಪ್ರಮಾಣದಲ್ಲಿ ಹಾನಿಗೊಳಿಸಿದೆ.

ತಾಲೂಕಿನ ಸೇಡಂ ಮತಕ್ಷೇತ್ರದ ಬೆನಕನಳ್ಳಿ ಗ್ರಾಮಸ್ಥರ ಗೋಳು ಯಾರು ಕೇಳದಂತಾಗಿದೆ. ಪ್ರತಿ ವರ್ಷವು ಮಳೆಗಾಲ ಪ್ರಾರಂಭವಾಗುತ್ತಿದ್ದಂತೆ ಚಿಕ್ಕದಾದ ಹಳ್ಳಕ್ಕೆ ಹೊಂದಿಕೊಂಡಿದ್ದ ಗ್ರಾಮದಲ್ಲಿ ಮಳೆಯ ಪ್ರವಾಹಕ್ಕೆ ಬಹುತೇಕ ಮನೆಗಳಿಗೆ ನೀರು ನುಗ್ಗಿ ಅಪಾರ ದವಸ, ಧಾನ್ಯಗಳು ಸೇರಿದಂತೆ ದಿನಬಳಕೆ ವಸ್ತುಗಳು ಪ್ರಮಾಣದ ಹಾನಿ ಸಂಭವಿಸುವುದು ಸಾಮಾನ್ಯವಾಗಿದೆ. ಹಲವು ಬಾರಿ ಸೇಡಂ ಶಾಸಕರಾದ ವೈದ್ಯಕೀಯ ಸಚಿವರ ಗಮನಕ್ಕೆ ಗ್ರಾಮಸ್ಥರು ತಂದರು ಇಂದಿಗೂ ಯಾವುದೇ ಪರಿಹಾರ ದೊರೆತಿಲ್ಲ ಎಂದು ಗ್ರಾಮದ ಯುವ ಮುಖಂಡ ಮಲ್ಲು ರಾಯಪ್ಪಗೌಡ ಅಸಮಧಾನ ವ್ಯಕ್ತಪಡಿಸುತ್ತಿದ್ದಾರೆ.

## ಬಿಜೆಪಿ ಜಿಲ್ಲಾ ಮಹಿಳಾ ಮೋರ್ಚಾ ವತಿಯಿಂದ ರಕ್ಷಾ ಬಂಧನ ಕಾರ್ಯಕ್ರಮ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ನಗರ ಠಾಣೆಯಲ್ಲಿ ಬಿಜೆಪಿ ಜಿಲ್ಲಾ ಮಹಿಳಾ ಮೋರ್ಚಾ ಪದಾಧಿಕಾರಿಗಳು ಹಾಗೂ ಸದಸ್ಯರಿಂದ ಠಾಣಾಧಿಕಾರಿಗಳಿಗೆ, ಸಿಬ್ಬಂದಿಗೆ ಹಾಗೂ ಊರಿನ ಕೆಲ ಯುವಕರಿಗೆ ರಾಖಿಯನ್ನು ಕಟ್ಟುವ ಮುಖಾಂತರ ರಕ್ಷಾ ಬಂಧನ ಹಬ್ಬವನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಠಾಣಾಧಿಕಾರಿ ಮಂಜನಗೌಡ ರಕ್ಷಾ ಬಂಧನ ಸ್ವೀಕರಿಸಿ ಮಾತನಾಡಿದ ಅವರು ಹಬ್ಬವು ಜಾತಿ,ಬೇಧ ಹೋಗಲಾಡಿಸಿ ಸಹೋದರತೆಯ ಭಾವವನ್ನು ಬಿಂಬಿಸುವುದಾಗಿದೆ.ನಮ್ಮ ದೇಶದಲ್ಲಿ ಸಂಬಂಧಗಳಿಗಿರುವ ಮಹತ್ವ ಜಗತ್ತಿನ ಯಾವ ದೇಶದಲ್ಲಿಯೂ ಕಂಡು ಬರುವುದಿಲ್ಲ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಸುನಿತಾ ಚೌವ್ಹಾಣ್ ಮಾತನಾಡಿದ ಅವರು ಅಣ್ಣತಂಗಿಯರ ಹಬ್ಬ, ಅಕ್ಕತಮ್ಮಂದಿರ ಹಬ್ಬ.ಅಕ್ಕತಂಗಿಯರ ರಕ್ಷಣೆಗಾಗಿ ನಡುಕಟ್ಟಿ ನಿಲ್ಲುವ ಅಣ್ಣತಮ್ಮಂದಿರನ್ನು ಪ್ರೀತಿಯಿಂದ ಹರಸಿ ಹಾರೈಸುವ ಹಬ್ಬ. ದೇಶದಾದ್ಯಂತ ಈ ಹಬ್ಬವನ್ನು ಎಲ್ಲ ಅಕ್ಕತಂಗಿಯರು ತಮ್ಮ ಅಣ್ಣತಮ್ಮಂದಿರಿಗಾಗಿ ಆಚರಿಸುತ್ತಾರೆ. ಅಣ್ಣತಮ್ಮಂದಿರ ಕ್ಷೇಮ ಅವರ ಆರೋಗ್ಯ ಆಯಸ್ಸು ಚೆನ್ನಾಗಿರಲೆಂದು ಪ್ರಾರ್ಥಿಸುತ್ತಾರೆ ಎಂದು ಹೇಳಿದರು..

ಈ ಸಂದರ್ಭದಲ್ಲಿ ಮಹಿಳಾ ಮೋರ್ಚಾ ರಾಜ್ಯ ಕಾರ್ಯಕಾರಣಿ ಸದಸ್ಯೆ ವೀಣಾ ಮೋದಿ,ಪ್ರಧಾನ ಕಾರ್ಯದರ್ಶಿ ರಮಾದೇವಿ ಕಾವಲಿ,ಕಾರ್ಯದರ್ಶಿ ಶಕುಂತಲಾ ಗುಜನೂರು,ಉಪಾಧ್ಯಕ್ಷೆ ಮಂಜುಳಾ ಕಟ್ಟಿಮನಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಗವಿಸಿದ್ದಪ್ಪ ನಾಯಕನ ಕೊಲೆಗೆ ನ್ಯಾಯ ಒದಗಿಸುವ ಭರವಸೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳದಲ್ಲಿ ಇಂದು ಗವಿಸಿದ್ದಪ್ಪ ನಾಯಕ ಅವರ ಮನೆಗೆ ವಾಲ್ಮೀಕಿ ಸಮಾಜದ ಗುರುಪೀಠದ ಪೂಜ್ಯ ರಾಜನಹಳ್ಳಿಯ ಪುಣ್ಯಾನಂದಪುರಿ ಮಹಾಸ್ವಾಮಿಗಳು ಮತ್ತು ವಾಲ್ಮೀಕಿ ಸಮಾಜದ ಎಲ್ಲಾ ಮುಖಂಡರು ಭೇಟಿ ನೀಡಿದರು ಈ ಸಂರ್ಭದಲ್ಲಿ ಮಠದಿಂದ ಭಕ್ತಿಯ ಸಹಾಯಧನ ನೀಡಿ ಸಾಂತ್ವನ ಹೇಳಿದರು ಸೋಮವಾರ ರ್‍ವರ್‍ಮದವರಿಂದ ಮತ್ತು ಪಕ್ಷಾತೀತವಾಗಿ ಗವಿಸಿದ್ದಪ್ಪ ನಾಯಕ್ ಕೊಲೆ ಆರೋಪಿಗಳಿಗೆ ಕಠಿಣವಾದ ಶಿಕ್ಷೆ ಮತ್ತು ಕುಟುಂಬದವರಿಗೆ ನ್ಯಾಯ ದೊರಕಿಸಿ ಕೊಡುವ ಭರವಸೆ ನೀಡಿದರು ಈ ಸಂರ್ಭದಲ್ಲಿ ವಾಲ್ಮೀಕಿ ಗುರುಪೀಠದ ಪೂಜ್ಯರು ಸಚಿವ ಶಿವರಾಜ್ ತಂಗಡಿಗೆ ಅವರಿಗೆ ಕರೆ ಮಾಡಿ ವಿಚಾರಿಸಿದಾಗ ಸಚಿವರು ಸರಕಾರದಿಂದ ಗವಿಸಿದ್ದಪ್ಪನ ಕೊಲೆಗೆ ನ್ಯಾಯ ದೊರಕಿಸಿಕೊಟ್ಟು ಕುಟುಂಬಕ್ಕೆ ಪರಿಹಾರ ಕೊಡಿಸುವ ಭರವಸೆಯನ್ನು ಕೊಟ್ಟರು ಈ ಸಂರ್ಭದಲ್ಲಿ ವಾಲ್ಮೀಕಿ ಸಮಾಜದ ಜಿಲ್ಲಾಧ್ಯಕ್ಷರಾದ ಕೆ ಎನ್ ಪಾಟೀಲ್ ಹನುಮೇಶ್ ನಾಯಕ್ ಹುಲಿಹೈದರ್ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರು ಟಿ ರತ್ನಾಕರ್ ನಾಗರಾಜ್ ಬಿಲ್ಗರ್ ರಾಮಣ್ಣ ಕಲ್ಲಣ್ಣನವರ್ ರಾಮಣ್ಣ ಚೌಡ್ಕಿ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರು ಮಾರುತಿ ತೋಟಗಂಟಿ ರವಿ ದೇಸಾಯಿ ಇನ್ನು ಸಮಾಜದ ಹಿರಿಯರು ಯುವಕರು ಈ ಸಂರ್ಭದಲ್ಲಿ ಪಾಲ್ಗೊಂಡು ಸಾಂತ್ವನ ಹೇಳಿದರು.

## ಮನುಸ್ಮೃತಿ ಸುಟ್ಟು ಹಾಕಿ ಸಮಾನತೆ ತಂದುಕೊಟ್ಟ ಗ್ರಂಥವೇ ಸಂವಿಧಾನ:ಕೆ ಆರ್ ರಮೇಶ ಕುಮಾರ




(ಮಲ್ಲಿಕಾರ್ಜುನ ಎಂ)

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ : ಜು 09– ನಮ್ಮ ದೇಶದ ಸ್ವಾತಂತ್ರದ ನಂತರ 1950 ಜನೇವರಿ 26 ಕ್ಕೆ ಪ್ರಜಾಪ್ರಭುತ್ವ ಅಸ್ತಿತ್ವಕ್ಕೆ ತರುವಲ್ಲಿ ಡಾ ಬಾಬಾ ಸಾಹೇಬ ಅಂಬೇಡ್ಕರ್ ರಚಿಸಿದ ಸಂವಿಧಾನವನ್ನು ಜಾರಿಗೆ ತಂದರು. ಈ ಸಂವಿಧಾನವು ಯಾವುದೇ ಒಂದು ಸಮುದಾಯದ ಸೊತ್ತಲ್ಲ ಸಕಲ ಸಮುದಾಯಕ್ಕೆ ಸಾಮಾಜಿಕ ನ್ಯಾಯ ನೀಡುವ ನಿಟ್ಟಿನಲ್ಲಿ ಅಂದರೆ ಮನುಸ್ಮೃತಿ ನೆಲಸಮ ಮಾಡಿ ಸಮಾನತೆ, ಸಾಮಾಜಿಕ ನ್ಯಾಯ ಒದಗಿಸುವ ಮಹತ್ವದ ಕಾರ್ಯ ಮಾಡುವ ಗ್ರಂಥವೇ ಸಂವಿಧಾನ ಎಂದು ಮಾಜಿ ಶಾಸಕ ಮಾಜಿ ಸಭಾಪತಿ ಕೆ ಆರ್ ರಮೇಶ ಕುಮಾರ ನಗರದ ಆರಬೋಳ ಕಲ್ಯಾಣ ಮಂಟಪದಲ್ಲಿ ಶನಿವಾರದಂದು ಜರುಗಿದ ಸಂವಿಧಾನ ಸಂರಕ್ಷಣಾ ಸಮಿತಿ ವತಿಯಿಂದ ಜಿಲ್ಲಾ ಮಟ್ಟದ ಸಂವಿಧಾನ ಜನ ಜಾಗೃತಿ ಸಮಾವೇಶದ ಉದ್ಘಾಟನೆ ನೆರವೇರಿಸಿ ಮಾತನಾಡುತ್ತಾ ನುಡಿದರು.

1942 ಆಗಸ್ಟ್ 9 ರಂದು ಸಂವಿಧಾನ ರಚನಾ ಸಮಿತಿ ಸಭೆ ನಡೆಸಿ ಸರ್ವ ಧರ್ಮ, ಜಾತಿ ಜನಾಂಗದವರೆಲ್ಲರಿಗೂ ಸರಿ ಸಮಾನವಾದ ಸಾಮಾಜಿಕ ನ್ಯಾಯ ಒದಗಿಸಿ ಕೊಡುವ ನಿಟ್ಟಿನಲ್ಲಿ ಹಲವಾರು ದೇಶದ ಸಂವಿಧಾನ ಅಧ್ಯಯನ ನಡೆಸಿ ಡಾ ಅಂಬೇಡ್ಕರ್ ರಚಿಸಿದ ಸಂವಿಧಾನವನ್ನು ಜಾರಿಗೆ ತರಲು ನಿರ್ಧರಿಸಲಾಯಿತು, ಕೆಲ ವಿರೋಧಿ ಬಣಗಳ ವಿರೋಧದ ನಡುವೆ ಅವರೆಲ್ಲರ ವಿಶ್ವಾಸ ಗಳಿಸಿ ಸಂವಿಧಾನ ಜಾರಿಗೆ ತಂದು ಗಣರಾಜ್ಯವನ್ನಾಗಿ ಜಾರಿಗೊಳಿಸಲಾಯಿತು ಪ್ರಜೆಗಳಿಂದ ಪ್ರಜೆಗಳಿಗಾಗಿ ಪ್ರಜೆಗಳಿಗೋಸ್ಕರ ಪ್ರಜೆಗಳೇ ಆಳುವ ಸರಕಾರವನ್ನಾಗಿ ರಚಿಸುವಲ್ಲಿ ಸಾಧ್ಯವಾಯಿತು.ಸಂವಿಧಾನದ ಕಲ್ಪನೆ ಅಗತ್ಯ ಒಂದೇ ದಿನಕ್ಕೆ ಬಂದಿಲ್ಲ ಅದು ಹಲವಾರು ವರ್ಷಗಳ ಶ್ರಮದ ಫಲವಾಗಿ ರಚಿತವಾಗಿದೆ ಎಂದರು.

ಅಂತಹ ಪವಿತ್ರ ಸಂವಿಧಾನಕ್ಕೆ ಅಜ್ಞಾನಿಗಳಿಂದ ಅವಮಾನ ಮಾಡುವ ಕೆಲಸ ಆಗುತ್ತಿರುವುದು ತುಂಬಾ ನೋವಿನ ಸಂಗತಿ

ನಾನು ಯಾವುದೇ ರೀತಿಯ ರಾಜಕೀಯ ಉಪನ್ಯಾಸ ನೀಡಲು ಆಗಮಿಸಿಲ್ಲ ಸಂವಿಧಾನದ ಜನ ಜಾಗೃತಿ ಮೂಡಿಸುವ ಬಗ್ಗೆ ಮಾತನಾಡಲು ಬಂದಿರುವೆ ಎಂದರು. ಏಕೆಂದರೆ ನಮ್ಮ ಸಂವಿಧಾನಕ್ಕೆ ಅಪಾಯ ಉಂಟು ಮಾಡುವ ಕೆಲಸ ನಡೆದಿದೆ ಅಂತವರಿಂದ ರಕ್ಷಣೆ ಮಾಡುವ ಉದ್ದೇಶದಿಂದ ತಾವೆಲ್ಲರೂ ಸೇರಿ ನಡೆಸಿರುವ ಈ ಜನ ಜಾಗೃತಿ ಸಮಾವೇಶ ಹಮ್ಮಿಕೊಂಡಿರುವುದು ತುಂಬಾ ಸಂತೋಷ ಸಂಗತಿ. ಇತ್ತೀಚಿನ ಕೆಲ ಸಮುದಾಯದ ರಾಜಕೀಯ ವ್ಯಕ್ತಿಗಳು ಕೆಲ ಸಂಗ ಪರಿವಾರದವರು ಸಂವಿಧಾನ ತಿದ್ದುಪಡಿಯ ಕಾರ್ಯ–ಕ್ಕೆ ಮುಂದಾಗುತ್ತಿರುವರು ಅಂತಹ ದುಷ್ಟ ಶಕ್ತಿಗಳಿಗೆ ತಕ್ಕ ಪಾಠ ಕಲಿಸುವ ಕಾರ್ಯ ತಳಮಟ್ಟದ ಕಾರ್ಯಕರ್ತರಿಂದಲೇ ಆರಂಭವಾಗಬೇಕಿದೆ ಎಂದರು.

ಸಂವಿಧಾನವು ಸರ್ವಜನಾಂಗದ ಸರ್ವತೋಮುಖ ಅಭಿವೃದ್ಧಿಯೊಂದಿಗೆ ಸಮಾನವಾಗಿ ಕಾಣುವುದಾಗಿದೆ ಆದರೆ ಇವಾಗ ಅದರ ತದ್ವಿರುದ್ಧವಾಗಿ ಸಾಗುತ್ತಿದೆ.

ನಾವೆಲ್ಲರೂ ಸತ್ತ ಹೆಣಗಳಾಗಿ ಬದುಕುತ್ತಿದ್ದೇವೆ

ರವೀಂದ್ರ ನಾಥ ಟಾಗೋರ ಬರೆದಿರುವ ಜನ ಗಣ ಮನ ಅಧಿನಾಯಕ ಜಯ ಹೇ ಅಂದರೆ ಜನ ಸಮೂಹವೇ ತಲೆ ಎತ್ತಿ ನಡೆಯುವ ಕೆಲಸ ವಾಗಬೇಕು ಎಂದರು.

ಡಾ ಅಂಬೇಡ್ಕರ್ ಅವರು ಇಡೀ ದೇಶದ ಸರ್ವ ಜನಾಂಗದ ಸಮಾನತೆ ಹಾಗೂ ಸ್ವಾತಂತ್ರ ಗಮನದಲ್ಲಿಟ್ಟುಕೊಂಡು ತುಳಿತಕೊಳಗಾಗಿದ್ದ ತಮ್ಮದೇ ಸಮುದಾಯದ ಸಮಾನತೆಗೆ ಹಾಗೂ ಸಾಮಾಜಿಕ ನ್ಯಾಯ ದೊರಕಿಸುವ ಉದ್ದೇಶದಿಂದ ಎರಡು ಮಸೂದೆ ಮಂಡಿಸಲು 1951ರಲ್ಲಿ ಕಾನೂನು ಮಂತ್ರಿಗಳಾದ ಸಂದರ್ಭದಲ್ಲಿ ಕೆಲ ವಿರೋಧಿಗಳ ಬಲ ಪ್ರಯೋಗದಿಂದ ಅತ್ಯಂತ ಅವಮಾನಗೊಂಡು ಕಾನೂನು ಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಮಹಾನ್ ವ್ಯಕ್ತಿ ಡಾ ಬಾಬಾ ಸಾಹೇಬರು ಎಂದರು.

ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಭಾವಚಿತ್ರದ ಅನಾವರಣಗೊಳಿಸಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಹಾಗೂ ಸಣ್ಣ ಕೈಗಾರಿಕೆ ಸಾರ್ವಜನಿಕ ಉದ್ಯಮಿಗಳ ಸಚಿವ ಶರಣಬಸಪ್ಪಗೌಡ ದರ್ಶನಾಪುರ ಅವರು ಸಂವಿಧಾನದ ಬಗ್ಗೆ ಸರ್ವರಿಗೂ ತಿಳುವಳಿಕೆ ಮೂಡಿಸುವ ಕಾರ್ಯ ಆಗಬೇಕಿದೆ ಎಂದರು. ದೇಶದ ಎಲ್ಲಾ ಸಮುದಾಯದ ಸಮಾನತೆ,ಸಹೋದರತೆ,ಅಲ್ಲದೇ ಸರ್ವರಿಗೂ ರಾಜಕೀಯ ಸಾಮಾಜಿಕ ನ್ಯಾಯ ಒದಗಿಸುವ ಸದುದ್ದೇಶದಿಂದ ರಚಿತವಾದ ಪವಿತ್ರ ಸಂವಿಧಾನದ ತಿದ್ದುಪಡಿಯ ಕಾರ್ಯಕ್ಕೆ ಮುಂದಾಗಿರುವ ಕೆಲ ಸಂಘ ಪರಿವಾರದವರ ಒತ್ತಾಯಕ್ಕೆ ತಲೆಬಾಗಿ ನಡೆಸುವ ಕೇಂದ್ರ ಸರ್ಕಾರದ ವಿರುದ್ಧ ಹಿಂದುಳಿದ ಅಲ್ಪ ಸಂಖ್ಯಾತರು ಸೇರಿದಂತೆ ಇನ್ನುಳಿದ ಸಮುದಾಯದ ಯುವಕರು ತಲೆ ಎತ್ತುವ ಕೆಲಸ ವಾಗಬೇಕಿದೆ ಎಂದರು. ಜಿಲ್ಲಾ ಮಟ್ಟದ ಈ ಸಂವಿಧಾನ ಜನ ಜಾಗೃತಿ ಸಮಾವೇಶಕ್ಕೆ ಸೇರಿರುವ ಸರ್ವರಿಗೂ ಅಭಿನಂದನೆ ತಿಳಿಸಿದರು.

ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಲು ಬಂದ ಮಂಗಳೂರಿನ ಪ್ರಗತಿಪರ ಚಿಂತಕ ಇಲ್ಯಾಸ್ ಮುಹಮ್ಮದ ತುಂಬೆ ವಕ್ಫ ಕಾಯ್ದೆ ಕುರಿತು ಜನ ಸಾಮಾನ್ಯರಿಗೆ ತಿಳುವಳಿಕೆ ಮೂಡಿಸುವ ಕೆಲಸ ಮಾಡಿದರು.

ತದನಂತರ ಭೌದ್ಧ ಸಾಹಿತಿ ದೇವೇಂದ್ರ ಹೆಗಡೆ ಹಾಗೂ ಗೌರವ ಅಧ್ಯಕ್ಷತೆ ವಹಿಸಿದ ಗಿರೆಯಪ್ಪಗೌಡ ಬಾಣತಿಹಾಳ ಸೇರಿದಂತೆ ಅಧ್ಯಕ್ಷತೆ ವಹಿಸಿದ ನೀಲಕಂಠ ಬಡಿಗೇರ ಕಾರ್ಯಕ್ರಮದ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಅಹಿಂದ ಮುಖಂಡರಾದ ಎ ಸಿ ಕಾಡ್ಲೂರ ಅಯ್ಯಣ್ಣ ಕನ್ಯಾ ಕೋಳೂರ. ಡಿ ಎಸ್ ಎಸ್ ರಾಜ್ಯ ಸಂಚಾಲಕ ಮರಿಯಪ್ಪ ಹಳ್ಳಿ,, ಆನೇಕಲ್ ವೆಂಕಟೇಶ್ ಮೂರ್ತಿ. ಅಂಬಣ್ಣ ಆರೋಲೀಕರ, ಡಿ ಎಸ್ ಎಸ್ ಹಿಂದುಳಿದ ಅಲ್ಪಸಂಖ್ಯಾತ ಒಕ್ಕೂಟದ ರಾಜ್ಯಧ್ಯಕ್ಷ ಕೆ ಎಂ ರಾಜೇಂದ್ರ ವಿ ನಾಗರಾಜ. ಬಸರೆಡ್ಡಿ ಅನಪುರ, ಚಂದ್ರಶೇಖರ ಆರಬೋಳ , ತಾಲೂಕ ಪರಿಷತ್ ಅಧ್ಯಕ್ಷ ರವೀಂದ್ರ ನಾಥ ಹೊಸಮನಿ, ಶೋಭಾ ಕಟ್ಟಿಮನಿ, ರುದ್ರಪ್ಪ ಹುಲಿಮನಿ ಸೇರಿದಂತೆ ತಾಲೂಕ ಹಾಗೂ ಗ್ರಾಮೀಣ ದಲಿತ ಸಂಘಟನೆ ಮುಖಂಡರು ಹಾಗೂ ಹಿಂದುಳಿದ ಅಲ್ಪಸಂಖ್ಯಾತರ ಮುಖಂಡರು ಹಾಗೂ ಮಹಿಳೆಯರು ಯುವಕರು ಇತರರು ಉಪಸ್ಥಿತರಿದ್ದರು

ಕಾರ್ಯಕ್ರಮದಲ್ಲಿನ ಗಣ್ಯರನ್ನು ವೆಂಕಟೇಶ್ ಆಲೂರು ಸ್ವಾಗತಿಸಿದರು ನಿರೂಪಣೆಯನ್ನು ರಾಯಪ್ಪ ಸಾಲಮನಿ ಹಾರಣಗೇರಾ, ಹಾಗೂ ಮಡಿವಾಳಪ್ಪ ಪಾಟೀಲ ನಿರೂಪಿಸಿದರು ಮಹಾದೇವ ಎಂ ದಿಗ್ಗಿ ವಂಡಿಸಿದರು.

## ಶರಣರ ವಿಚಾರಧಾರೆ ಬದುಕಿಗೆ ದಾರಿದೀಪ ಅವರನ್ನು ಒಂದೇ ಸಮುದಾಯಕ್ಕೆ ಮೀಸಲು ಇಡದಿರಿ : ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ್ ಕೋಲಾರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಆಗಸ್ಟ್, 9– ಶರಣರ ವಿಚಾರಧಾರೆ ಬದುಕಿಗೆ ದಾರಿದೀಪವಾಗಿದ್ದು, ನುಲಿಯಾ ಚಂದಯ್ಯನವರ ಆದರ್ಶಗಳನ್ನು ಪಾಲಿಸುವುದರ ಜೊತೆಗೆ ಅವರು ಹಾಕಿಕೊಟ್ಟ ಮಾರ್ಗದಲ್ಲಿ ಮುನ್ನಡೆಯಬೇಕು. ವಚನ ವಿಚಾರಗಳನ್ನು ಅನುಷ್ಠಾನಕ್ಕೆ ತರಬೇಕು ಎಂದು ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ್ ಕೋಲಾರ್ ಅವರು ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ ಹಾಗೂ ನುಲಿಯ ಚಂದಯ್ಯ ಜಯಂತ್ಯೋತ್ಸವ ಸಮಿತಿ ಹಾಗೂ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ನಡೆದ ನುಲಿಯ ಚಂದಯ್ಯ ಜಯಂತ್ಯೋತ್ಸವ ಕಾರ್ಯಕ್ರಮಕ್ಕೆ ದೀಪ ಬೆಳಗಿಸಿ, ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆಗೈದು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ನುಡಿದಂತೆ ನಡೆದ ನೂಲಿ ಚಂದಯ್ಯ ಅವರು ಶ್ರೇಷ್ಠ ಕಾಯಕ ಜೀವಿ. ಇವರ ವಚನಗಳಲ್ಲಿ ಸಮ ಸಮಾಜ ನಿರ್ಮಾಣದ ತಾತ್ವಿಕ ಚಿಂತನೆಗಳು ಅಡಗಿವೆ. ಇವರ ಚಿಂತನೆಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಲು ಸಂಕಲ್ಪ ಮಾಡಬೇಕು ಎಂದರು. ಸಮಾಜದ ಜನರು ತಮ್ಮ ಮಕ್ಕಳಿಗೆ ಒಳ್ಳೆಯ ನೀಡುವುದರ ಕಡೆಗೆ ಹೆಚ್ಚು ಗಮನ ವಹಿಸಬೇಕು ಎಂದು ನುಡಿದರು.

ವಿಶೇಷ ಉಪನ್ಯಾಸಕರಾಗಿ ಆಗಮಿಸಿದ ಸುಭಾಶ್ಚಂದ್ರ ಕೌಲಗಿ ಮಾತನಾಡಿ, 12ನೇ ಶತಮಾನದ ದಾರ್ಶನಿಕರಾದ ಬಸವಣ್ಣನವರ ಸಮಕಾಲಿನ ಶರಣರಾದ ನುಲಿಯ ಚಂದಯ್ಯ ಅವರು ರಚಿಸಿರುವ ಕಾಯಕ ಮತ್ತು ದಾಸೋಹದಂತಹ ವಚನಗಳಲ್ಲಿ ಸಮ ಸಮಾಜ ನಿರ್ಮಾಣದ ತಾತ್ವಿಕ ಚಿಂತನೆಗಳು ಅಡಗಿವೆ. ತಮ್ಮ ವಚನಗಳ ಮೂಲಕ ಕಾಯಕ ತತ್ವವನ್ನು ಸಾರಿದ ಶ್ರೇಷ್ಠ ವಚನಕಾರ ನುಲಿಯ ಚಂದಯ್ಯ ಕಾಯಕವನ್ನು ಭಾವಶುದ್ಧವಾಗಿ ಹಾಗೂ ಅಂತಃಕರುಣೆಯ ಮೂಲಕ ಮಾಡಬೇಕೆಂಬುದು ಸಾರಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ, ಪಿಎಸ್ಐ ನಾಗಮ್ಮ ಸೇರಿದಂತೆ ಸಮಾಜದ ಮುಖಂಡರು ಇನ್ನಿತರರು ಉಪಸ್ಥಿತರಿದ್ದರು.

## ಬಿಜೆಪಿ ಮಹಿಳಾ ಮೋರ್ಚಾದಿಂದ ಪೊಲೀಸ್ ಇಲಾಖೆ ಸಿಬ್ಬಂದಿಗಳಿಗೆ ರಕ್ಷಾ ಬಂಧನ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಯಲಬುರ್ಗಾ ಬಿಜೆಪಿ ತಾಲೂಕ ಮಹಿಳಾ ಮೋರ್ಚಾ ವತಿಯಿಂದ ಕುಕನೂರು ನಗರದ ಪೊಲೀಸ್ ಠಾಣೆಯ ಅಧಿಕಾರಿಗಳಿಗೆ ಮತ್ತು ಸಿಬ್ಬಂದಿ ವರ್ಗದವರಿಗೆ ರಕ್ಷೆಯನ್ನು ನಮ್ಮ ದೇಶದ ನಾಡ ಸಾಂಸ್ಕೃತಿಕ ಸೋದರ ಸೋದ–ರಿಯರ ಹಬ್ಬ ರಕ್ಷಾಬಂಧನ ಹಬ್ಬ ಅಧಿಕಾರಿಗಳಾದ ಸಹೋದರರಿಗೆ ರಕ್ಷಾಬಂಧನ ಕಟ್ಟಿ ಅವರಿಗೆ ಶುಭ ಕೋರಲಾಯಿತು. ಈ ಸಂದರ್ಭದಲ್ಲಿ ತಾಲೂಕ ಮಹಿಳಾ ಮೋರ್ಚಾದ ಅಧ್ಯಕ್ಷರಾದ ಸಂತೋಷಿಮಾ ಜೋಶಿ, ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರಾದ ಶಕುಂತಲಮ್ಮ ಮಾಲಿಪಾಟೀಲ್, ನಿರ್ಮಲಮ್ಮ ಪಾಟೀಲ್ ತಾಲೂಕ ಪ್ರಧಾನ ಕಾರ್ಯದರ್ಶಿ ನಾಗರತ್ನ ಮಾಲಿ ಪಾಟೀಲ್ ತಾಲೂಕ ಕಾರ್ಯದರ್ಶಿ ಪಾರ್ವತಿ ಹನಸಿ,ಬಸಮ್ಮ ಗದಿಗಿನಮಠ ಹಾಗೂ ಹಿರಿಯರು ಯುವಕ ಮಿತ್ರರು ಭಾಗವಹಿಸಿದ್ದರು. ಅದೇ ರೀತಿ ಇನ್ನೂ ಒಂದು ಕುಕನೂರಿನ ರಕ್ಷಣಾ ಘಟಕವಾದ ಅಗ್ನಿಶಾಮಕ ದಳದ ಸಿಬ್ಬಂದಿ ವರ್ಗಕ್ಕೂ ರಕ್ಷಾ ಬಂಧನ ಕಟ್ಟುವ ಮುಖಾಂತರ ಸಹೋದರರಿಗೆ ಶುಭಾಶಯ ಕೋರಲಾಯಿತು.

# ಕಾರ್ಯಾಗಾರದಲ್ಲಿ ಜಿಲ್ಲಾಧಿಕಾರಿಗಳ ಸೂಚನೆ

## ಕೆಪಿಎಂಇ, ಪಿಸಿಪಿಎನ್‌ಡಿಟಿ ಕಾಯ್ದೆಗಳ ಮಾರ್ಗಸೂಚಿ ಪಾಲನೆಯಾಗಲಿ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 09: ಜಿಲ್ಲೆಯಲ್ಲಿ ಎಲ್ಲಾ ಆಸ್ಪತ್ರೆ ಮತ್ತು ಕ್ಲಿನಿಕ್‌ಗಳು ಕೆಪಿಎಂಇ ಕಾಯ್ದೆಯಡಿ ನಿಯಮಗಳನ್ನು ಕಡ್ಡಾಯ ಪಾಲನೆ ಮಾಡಬೇಕು. ಕೆಪಿಎಂಇ ಕಾಯ್ದೆ ಬಗ್ಗೆ ಸರಿಯಾದ ಮಾಹಿತಿ ತಿಳಿದುಕೊಂಡು ಮಾರ್ಗಸೂಚಿಗಳನ್ನು ಪಾಲಿಸಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಹೇಳಿದರು.

ಆಗಸ್ಟ್ 7ರಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇ–ರಿಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಭಾರತೀಯ ವೈದ್ಯಕೀಯ ಸಂಘದ ವತಿಯಿಂದ ಕೆಪಿಎಂಇ ಮತ್ತು ಪಿಸಿ&ಪಿಎನ್‌ಡಿಟಿ ಕಾಯ್ದೆಯ ಕುರಿತು ಒಂದು ದಿನದ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಆಸ್ಪತ್ರೆಗಳು ಸ್ವಚ್ಛವಾಗಿ ಹಾಗೂ ಅಗತ್ಯ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು ಸೇರಿದಂತೆ ಇತರೆ ಸೌಕರ್ಯ ಹೊಂದಿರಬೇಕು. ಕೆಲವು ಕ್ಲಿನಿಕ್‌ಗಳು ಮತ್ತು ಆಸ್ಪತ್ರೆಗಳು ಕೆಪಿಎಂಇ ಕಾಯ್ದೆ ಬಗ್ಗೆ ಗೊತ್ತಿದ್ದರು ಸಹ ಮಾರ್ಗಸೂಚಿಗಳನ್ನು ಪಾಲನೆ ಮಾಡುವುದಿಲ್ಲ. ಇದರಿಂದಾಗಿ ದೂರುಗಳು ಬಂದ ಹಿನ್ನೆಲೆಯಲ್ಲಿ ಬೆಂಗಳೂರಿನಿಂದ ತಂಡವೊಂದು ಬಂದು ಪರಿಶೀಲನೆ ನಡೆಸಿ ದಂಡ ವಿಧಿಸಿದೆ ಎಂದರು.

ಕೆಪಿಎಂಇ ಕಾಯ್ದೆ ಸರಿಯಾಗಿ ಪಾಲನೆ ಮಾಡಬೇಕು ಎಂದು ತಿಳಿಸುವುದು ಈ ಕಾರ್ಯಾಗಾರದ ಉದ್ದೇಶವಾಗಿದೆ. ಗ್ರಾಮೀಣ ಭಾಗದಲ್ಲಿ ಆರ್‌ಎಂಪಿ ವೈದ್ಯರು ಕ್ಲಿನಿಕ್ ಇಟ್ಟುಕೊಂಡು ಜನರಿಗೆ ಹೆಚ್ಚಿನ ಪ್ರಮಾಣದಲ್ಲಿ ಡೋಸ್ ನೀಡುತ್ತಾರೆ. ಕಾಯ್ದೆಯ ಬಗ್ಗೆ ಸರಿಯಾಗಿ ತಿಳಿದುಕೊಳ್ಳುತ್ತಿಲ್ಲ. ಪರವಾನಗಿ ಇಲ್ಲದೆ ಆಸ್ಪತ್ರೆ ನಡೆಸುವವರ ವಿರುದ್ಧ ಕ್ರಮ ವಹಿಸಲು ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಸಮಿತಿ ರಚನೆ ಮಾಡಲಾಗಿದೆ. ಕೆಪಿಎಂಇ ಕಾಯ್ದೆ ಉಲ್ಲಂಘನೆ ಮಾಡುವ ಆಸ್ಪತ್ರೆಗಳ ವಿರುದ್ಧ ದಂಡ ವಿಧಿಸಿ ದೂರು ದಾಖಲು ಮಾಡಲಾಗುತ್ತದೆ ಎಂದು ತಿಳಿಸಿದರು. ಕೆಪಿಎಂಇ ಕಾಯ್ದೆ ಜಾರಿಯಾಗಿ ಸುಮಾರು ವರ್ಷಗಳಾದರೂ ಪಾಲನೆ ಮಾಡದೇ ಇರುವುದರಿಂದ ಸಾಕಷ್ಟು ಅನಾಹುತಗಳು ನಡೆಯುತ್ತಿವೆ. ಜಿಲ್ಲೆಯಲ್ಲಿ ಎಲ್ಲಾ ಆಸ್ಪತ್ರೆಗಳು ಮತ್ತು ಕ್ಲಿನಿಕ್‌ಗಳು ಬಗ್ಗೆ ಮಾಹಿತಿ ಪಡೆದುಕೊಂಡು ಪರಿಶೀಲನೆ ಮಾಡಬೇಕು. ಐಎಂಎ ವೈದ್ಯಕೀಯ ಸಂಘವೂ ಇದಕ್ಕೆ ಬೆಂಬಲವಾಗಿದ್ದು, ಕಾಯ್ದೆಯನ್ನು ಪಾಲನೆ ಮಾಡುವಂತೆ ಹೇಳಿದರು.

ಈ ವೇಳೆ ಭಾರತೀಯ ವೈದ್ಯಕೀಯ ಸಂಘದ ಜಿಲ್ಲಾಧ್ಯಕ್ಷರಾದ ಶೈಲೇಶ ಅಮರಖೇಡ್ ಅವರು ಮಾತನಾಡಿ, ಜಿಲ್ಲೆಯಲ್ಲಿರುವ ಅನೇಕ ಆಸ್ಪತ್ರೆ ಮತ್ತು ಕ್ಲಿನಿಕ್‌ಗಳಿಗೆ ಕೆಪಿಎಂಇ ಕಾಯ್ದೆ ಬಗ್ಗೆ ಮಾಹಿತಿ ಇಲ್ಲ. ಇದ್ದರು ಸರಿಯಾಗಿ ಪಾಲನೆ ಮಾಡುತ್ತಿಲ್ಲ. 1994 ರಲ್ಲಿ ಕಾಯ್ದೆ ಜಾರಿಯಾಗಿದೆ. ಆಸ್ಪತ್ರೆಯಲ್ಲಿ ಗುಣಮಟ್ಟದ ಆರೋಗ್ಯವು ಪ್ರತಿಯೊಬ್ಬ ಜನಸಾಮಾನ್ಯರಿಗೂ ದೊರೆಯಲು ಈ ಕಾಯ್ದೆ ಜಾರಿಗೊಳಿಸಲಾಗಿದೆ. ಕೆಪಿಎಂಇ ಕಾಯ್ದೆ ಉಲ್ಲಂಘನೆ ಮಾಡುವುದು ಸರಿಯಲ್ಲ. ವೈದ್ಯಕೀಯ ವೃತ್ತಿಯಲ್ಲಿ ತೊಡಗಿಕೊಂಡಿರುವ ಪ್ರತಿಯೊಬ್ಬರು ಕಡ್ಡಾಯವಾಗಿ ನಿಯಮಗಳನ್ನು ಪಾಲನೆ ಮಾಡಬೇಕು ಎಂದರು.

ಈ ವೇಳ ಪಿಸಿಪಿಎನ್‌ಡಿಟಿ ಕಾಯ್ದೆಯ ಜಿಲ್ಲಾ ಸಲಹಾ ಸಮಿತಿ ಅಧ್ಯಕ್ಷರಾದ ಡಾ.ಶಿವಪ್ಪ ಮಾಲಿಪಾಟೀಲ್ ಅವರು ಮಾತನಾಡಿ, ಮಹಾರಾಷ್ಟ್ರ ರಾಜ್ಯವು ಪಿಸಿಪಿಎನ್‌ಡಿಟಿ ಕಾಯ್ದೆಯ ಜಾರಿ ತಂದ ಮೊದಲ ರಾಜ್ಯವಾಗಿದೆ. ಪ್ರಸವಪೂರ್ವ ರೋಗನಿರ್ಣಯ ತಂತ್ರಗಳ ಕಾಯ್ದೆಯನ್ನು 1994 ರಲ್ಲಿ ಅಂಗೀಕರಿಸಲಾಯಿತು ಎಂದರು. ಪಿಎನ್‌ಡಿಟಿ ನೋಂದಣಿ, ಎಮ್‌ಟಿಪಿ ನೋಂದಣಿ ಬಗ್ಗೆ ತಿಳಿಸಿದರು.

ಇದೇ ಸಂದರ್ಭದಲ್ಲಿ ಸಹಾಯಕ ಆಯುಕ್ತರಾದ ಗಜಾನನ ಬಾಳೆ, ಬಸವಣ್ಣೆಪ್ಪ ಕುಲಶೆಟ್ಟಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಕೆ.ಪಿ.ಎಂ.ಇ. ಕಾಯ್ದೆ ರಾಜ್ಯ ಸಮಿತಿ ಸದಸ್ಯರಾದ ಡಾ.ಮಧುಸೂದನ್ ಕಾರಿಗನೂರು, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ಶಿವಕುಮಾರ್, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿವಿಧ ವಿಭಾಗದ ಮುಖ್ಯಸ್ಥರಾದ ಡಾ.ಗಣೇಶ್, ಡಾ.ಎಂ.ಡಿ.ಶಾಕೀರ್, ಡಾ.ಚಂದ್ರಶೇಖರಯ್ಯ, ಡಾ.ಯಶೋಧ ಸೇರಿದಂತೆ ವಿವಿಧ ಖಾಸಗಿ ಆಸ್ಪತ್ರೆಯ ವೈದ್ಯರು ಹಾಗೂ ವ್ಯವಸ್ಥಾಪಕರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

## ಸ್ವಯಂ ಉದ್ಯಮ ಪ್ರಾರಂಭಿಸಿ ಆರ್ಥಿಕ ಅಭಿವೃದ್ಧಿ ಸಾಧಿಸಿ–ಲೋಕೆಶ ಮಾನಸಿಂಗ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಆಗಸ್ಟ್.09–ಯುವಕರು ಉದ್ಯಮಗಳನ್ನು ಪ್ರಾರಂಭಿಸಲು ಬೇಕಾಗುವ ಎಲ್ಲಾ ಮಾಹಿತಿಗಳನ್ನು ಪಡೆದು ಸ್ವಯಂ ಉದ್ಯಮಗಳನ್ನು ಪ್ರಾರಂಭಿಸಿ ಆರ್ಥಿಕವಾಗಿ ಅಭಿವೃದ್ಧಿ ಸಾಧಿಸಬೇಕು ಎಂದು ಬೀದರ ಜಿಲ್ಲಾ ಕೌಶಲ್ಯ ಆಭಿವೃದ್ಧಿ ಅಧಿಕಾರಿ ಲೋಕೆಶ ಮಾನಸಿಂಗ ತಿಳಿಸಿದರು.

ಅವರಿಂದು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಬೆಂಗಳೂರು ಮತ್ತು ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್), ಬೀದರ ಸರ್ಕಾರಿ ಐಟಿಐ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಐಟಿಐ ಕಾಲೇಜಿನ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಭಾವಿ ಉದ್ಯಮಶಿಲರುಗಳಿಗೆ ಒಂದು ದಿನದ ಉದ್ಯಮಶೀಲತಾ ಜಾಗೃತಿ ಶಿಬಿರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಕೈಗಾರಿಕಾ ಮತ್ತು ಸೇವಾ ವಿಭಾಗದಲ್ಲಿ ಉದ್ಯಮಗಳನ್ನು ಪ್ರಾರಂಭಿಸಲು ಸಾಕಷ್ಟು ಅವಕಾಶಗಳು ಲಭ್ಯವಿರುತ್ತದೆ. ನಮ್ಮ ದೇಶದಲ್ಲಿ ಯುವ ಜನ ಹೆಚ್ಚಿನ ಸಂಖೆಯಲ್ಲಿದ್ದು ಬುದ್ಧಿವಂತರಿದ್ದಾರೆ ಹಾಗೂ ಸಣ್ಣ ಪ್ರಮಾಣದ ಉತ್ಪಾದನಾ ಚಟುವಟಿಕೆ ಮತ್ತು ಸೇವಾ ಚಟುವಟಿಕೆಗಳನ್ನು ಸ್ಥಾಪಿಸಲು ಹೆಚ್ಚಿನ ಅವಕಶವಿರುತ್ತದೆ ಎಂದು ಹೇಳಿದರು.

ಬೀದರ ಲೀಡ ಬ್ಯಾಂಕ ಸ್ಟೇಟ್ ಬ್ಯಾಂಕ ಆಫ ಇಂಡಿಯಾದ ವ್ಯವಸ್ಥಾಪಕ ಸತೀಷಕುಮಾರ ಗಾಯಕವಾಡ ಮಾತನಾಡಿ, ಸ್ವಯಂ ಉದ್ಯಮಗಳ ಸ್ಥಾಪನೆ ಮಾಡುವ ವಿಧಾನ, ಸ್ವಯಂ ಉದ್ಯೋಗಕ್ಕೆ ಇರುವ ಸೌಲಭ್ಯಗಳ ಕುರಿತು ಮಾಹಿತಿ, ಉದ್ದಿಮೆಯನ್ನು ಆಯ್ಕೆ ಮಾಡುವ ವಿಧಾನ, ಯೋಜನಾ ವರದಿ ತಯಾರಿಕೆ, ಮಾರುಕಟ್ಟೆ ಸಮೀಕ್ಷೆ ಮಾಡುವ ವಿಧಾನ ಬ್ಯಾಂಕ್ ವ್ಯವಹಾರಗಳ ಕುರಿತು ವಿವರವಾಗಿ ತಿಳಿಸಿದರು. ಬೀದರ ಸರ್ಕಾರಿ ಐಟಿಐ ಕಾಲೇಜಿನ ಪ್ರಾಂಶುಪಾಲ ಲಕ್ಷ್ಮೀಕಾಂತ ಮಾತನಾಡಿ, ಉದ್ಯಮ ಸ್ಥಾಪನೆಗೆ ಇರುವ ಸಾಲ ಸೌಲಭ್ಯಗಳು ಮತ್ತು ಇತರ ಸಂಬಂಧಪಟ್ಟ ವಿಷಯಗಳ ಬಗ್ಗೆ ತರಬೇತಿ ನೀಡಲಾಗುವದು ಎಂದು ತಿಳಿಸಿದರು. ಈ ಕಾರ್ಯಕ್ರಮ್ಮದಲ್ಲಿ ಸಿಡಾಕ್ ಜಿಲ್ಲಾ ತರಬೇತಿದಾರ ಮಲ್ಲಪ್ಪಾ ಟಿ.ಮೇತ್ರೆ, ಸಂಪನ್ಮೂಲ ವ್ಯಕ್ತಿ ದಿಲೀಪಕುಮಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಬಳ್ಳಾರಿಯಲ್ಲಿ ಅದ್ದೂರಿ ಕಾಯಕಯೋಗಿ ನುಲಿಯ ಚಂದಯ್ಯ ಜಯಂತ್ಯೋತ್ಸವ

# ಕಾಯಕ ದಾಸೋಹಿ ನುಲಿಯ ಚಂದಯ್ಯ ಅಡ್ಡರ್ ಅಧ್ಯಕ್ಷ ಮುಂಡರಿಗಿ ನಾಗರಾಜ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.09–12ನೇಶತಮಾನದ ಅನುಭವ ಮಂಟಪದಲ್ಲಿ ವಚನಕಾರರಾಗಿದ್ದ ನುಲಿಯ ಚಂದಯ್ಯ ಅವರು ಕಾಯಕ ದಾಸೋಹಿಗಳಾಗಿದ್ದರು ಎಂದು ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಿಗಿ ನಾಗರಾಜ್ ಅವರು ಹೇಳಿದರು.

ಜಿಲ್ಲಾಡಳಿತ,ಜಿಲ್ಲಾಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಶನಿವಾರ ಆಯೋಜಿಸಿದ್ದ ಕಾಯಕಯೋಗಿ ನುಲಿಯ ಚಂದಯ್ಯ ಜಯಂತಿ ಕಾರ್ಯಕ್ರಮವನ್ನು ನುಲಿಯ ಚಂದಯ್ಯ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

12ನೇ ಶತಮಾನದ ವಚನಕಾರರ ಕಾಲದ ಕಾಯಕಜೀವಿಗಳು ಯಾವ ಸಮುದಾಯವೂ ನಮ್ಮವರೆಂದು ಗುರುತಿಸಿಕೊಳ್ಳಲಾಗದ ರೀತಿಯಲ್ಲಿ ಸಮಾಜಕ್ಕೆ ಉತ್ತಮ ಕೊಡುಗೆ ನೀಡಿದ್ದಾರೆ ಅದರಲ್ಲಿ ನುಲಿಯ ಚಂದಯ್ಯ ಒಬ್ಬರು ಎಂದು ಹೇಳಿದರು.

ಸಮಾಜ ಹಾಗೂ ಜನಸಾಮಾನ್ಯರ ಏಳ್ಗೆಗಾಗಿ ಪರಿತಪಿಸಿದ ವಿವಿಧ ಮಹನೀಯರ ವಿಚಾರಧಾರೆಗಳನ್ನು ನಾವೆಲ್ಲರು ಅಳವಡಿಸಿಕೊಳ್ಳುವ ಮೂಲಕ ಉತ್ತಮ ಜೀವನ ನಡೆಸಬೇಕು.ಎಲ್ಲರೂ ಸಂಘಟಿತರಾಗಿ ದುಶ್ಚಟಗಳಿಂದ ದೂರವಿದ್ದು, ಸರ್ಕಾರದ ಯೋಜನೆಗಳನ್ನು ಸದುಪಯೋಗಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ನುಲಿಯ ಚಂದಯ್ಯ ಅವರು ಶ್ರೇಷ್ಠ ಕಾಯಕ ಯೋಗಿಯಾಗಿದ್ದರು, ತಮ್ಮ ವೃತ್ತಿಯ ಬಗ್ಗೆ ಅಪಾರ ಗೌರವ ಹೊಂದಿದ್ದವರು. ವೃತ್ತಿಯಿಂದ ಬಂದಂತಹ ಆದಾಯದಲ್ಲಿ ತಮ್ಮ ಜೀವನಕ್ಕೆ ಅಲ್ಪವ್ಯಯಮಾಡಿಕೊಂಡು ಉಳಿದ ಹಣದಲ್ಲಿ ಜಂಗಮರ ದಾಸೋಹಕ್ಕಾಗಿ ಮೀಸಲಿಟ್ಟಿದ್ದು, ಅವರ ನಿಸ್ವಾರ್ಥ ಸೇವೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಸಿಂಧನೂರು ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಉಪನ್ಯಾಸಕ ಡಾ.ಗಂಗಾಧರ.ಎಲ್ ಅವರು ಉಪನ್ಯಾಸದಲ್ಲಿ ಮಾತನಾಡಿ, ನುಲಿಯ ಚಂದಯ್ಯನವರು ಸುಮಾರು ಕ್ರಿ.ಶ.1,130 ರಲ್ಲಿ ವಿಜಯಪುರ ಜಿಲ್ಲೆಯ ಶಿವಣಿಗೆ ಗ್ರಾಮದಲ್ಲಿ ಜನಿಸಿದರು. ನಂತರ ಬಸವಣ್ಣನ ಕಾರ್ಯಕ್ಷೇತ್ರ ಕಲ್ಯಾಣಕ್ಕೆ ಬಂದರು. ಕಲ್ಯಾಣದ ಕೆರೆಗಳಲ್ಲಿ ಸಿಗುವ ಹೊಡಕೆ, ಚೇಣಿ ಮುಂತಾದ ನಾರುಗಳಿಂದ ಹಗ್ಗ ಹೊಸೆದು ಮಾರಾಟ ಮಾಡಿ ಬಂದ ಹಣದಿಂದ ಜಂಗಮ ದಾಸೋಹ ನಡೆಸುತ್ತಿದ್ದರು. ಈ ರೀತಿ ನುಲಿಯ ಕಾಯಕದಿಂದಾಗಿ ಮುಂದೆ ನುಲಿಯ ಚಂದಯ್ಯನೆಂದು ಹೆಸರಾದರು ಎಂದು ತಿಳಿಸಿದರು.

ಕಲ್ಯಾಣದಲ್ಲಿ 1160ರ ವೇಳೆಯಲ್ಲಿ ನಡೆಯುತ್ತಿದ್ದ ಅನುಭವಗೋಷ್ಠಿಗಳಲ್ಲಿ ಇವರು ಚಂದೇಶ್ವರ ಲಿಂಗ ಎಂಬ ಅಂಕಿತನಾಮದಲ್ಲಿ ಸುಮಾರು 48 ವಚನ ರಚಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಕೊರವ ಸಮಾಜದ ಜಿಲ್ಲಾಧ್ಯಕ್ಷ ಶ್ರೀರಾಮುಲು, ಗೌರವಾಧ್ಯಕ್ಷ ಶಂಕರಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಿ.ನಾಗರಾಜ್ ಸೇರಿದಂತೆ ಸಮುದಾಯದ ಮುಖಂಡರು, ಮಹಿಳೆಯರು ಹಾಗೂ ಇತರರು ಉಪಸ್ಥಿತರಿದ್ದರು.

*ಅದ್ದೂರಿ ಮೆರವಣಿಗೆ:*

ಕಾಯಕಯೋಗಿ ನುಲಿಯ ಚಂದಯ್ಯ ಜಯಂತ್ಯೋತ್ಸವ ಅಂಗವಾಗಿ ನಗರದಲ್ಲಿ ಅದ್ದೂರಿ ಮೆರವಣಿಗೆ ನಡೆಯಿತು. ಮೆರವಣಿಗೆಯಲ್ಲಿ ಪೂರ್ಣ ಕುಂಭ ಹೊತ್ತ ಮಹಿಳೆಯರು ಹಾಗೂ ವಿವಿಧ ಸಾಂಸ್ಕೃತಿಕ ಕಲಾತಂಡಗಳು ಗಮನ ಸೆಳೆದವು.

ಮೆರವಣಿಗೆಯು ನಗರದ ಕೊರವ ಸಮುದಾಯ ಭವನ ಆವರಣದಿಂದ ಆರಂಭವಾಗಿ ಕೊರವ ಬೀದಿ–ಸುಂಕ್ಲಮ್ಮ ದೇವಸ್ಥಾನ–ಕೌಲ್ ಬಜಾರ್ ಮುಖ್ಯರಸ್ತೆ–ವಾಲ್ಮೀಕಿ ಭವನ–ಡಾ.ಬಾಬು ಜಗಜೀವನರಾಂ ಭವನದ ಮೂಲಕ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದ ವೇದಿಕೆ ಸಭಾಂಗಣಕ್ಕೆ ತಲುಪಿ ಸಂಪನ್ನಗೊಂಡಿತು.

# ಬಳ್ಳಾರಿಯಲ್ಲಿಯೇ ಮೆಗಾಡೇರಿ ನಿರ್ಮಾಣ: ರಾಘವೇಂದ್ರ ಹಿಟ್ನಾಳ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.9– ಬಳ್ಳಾರಿ ಜಿಲ್ಲೆಯಲ್ಲಿಯೇ ಮೆಗಾಡೇರಿ ನಿರ್ಮಿಸಲಾಗುವುದು ಎಂದು ರಾಯಚೂರು,ಬಳ್ಳಾರಿ,ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ನೂತನ ಅಧ್ಯಕ್ಷ ಹಾಗೂ ಶಾಸಕರಾದ ರಾಘವೇಂದ್ರ ಹಿಟ್ನಾಳ್ ಹೇಳಿದರು.

ಶುಕ್ರವಾರದಂದು ನಗರದ ಕೆಎಂಎಫ್‌ನ ಡೈರಿ ಆಡಳಿತ ಮಂಡಳಿಯ ಸಭಾಂಗಣದಲ್ಲಿ ಏರ್ಪಡಿಸಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಮೆಗಾಡೇರಿ ನಿರ್ಮಾಣಕ್ಕೆ ಬಳ್ಳಾರಿ ತಾಲ್ಲೂಕಿನ ಕೊಳಗಲ್ಲು ಗ್ರಾಮದ ಬಳಿಯ 15 ಎಕರೆ ಪ್ರದೇಶವನ್ನು ಈಗಾಗಲೇ ಗುರುತಿಸಲಾಗಿದ್ದು, ಈಗಾಗಲೇ ಜಿಲ್ಲಾಡಳಿತಕ್ಕೆ ನೀಡಬೇಕಿರುವ 2.92 ಕೋಟಿ ರೂ. ಹಣ ನೀಡುವ ಬಗ್ಗೆ ನಿರ್ದೇಶಕ ಆಡಳಿತ ಮಂಡಳಿ ಸಭೆಯಲ್ಲಿ ಅನುಮೋದಿಸಲಾಗಿದೆ. ದೇಶದಲ್ಲಿಯೇ ಮಾದರಿ ಮೆಗಾಡೇರಿಯನ್ನಾಗಿ ಬಳ್ಳಾರಿಯಲ್ಲಿ ಸ್ಥಾಪಿಸಲಾಗುವುದು ಎಂದರು.

ರಾಬಕೊವಿ ವ್ಯಾಪ್ತಿಯಲ್ಲಿ ಹಾಲು ಉತ್ಪಾದನೆಗೆ ಹೆಚ್ಚಿನ ಸಹಕಾರ ನೀಡಲಾಗುವುದು. ಈಗಾಗಲೇ ಕೆಎಂಎಫ್ ಮೂಲಕ ಹೊರಗುತ್ತಿಗೆ ಆಧಾರದ ಮೇಲೆ ಪಶು ವೈದ್ಯಾಧಿಕಾರಿಗಳನ್ನು ನೇಮಿಸಿ ಜಿಲ್ಲಾವಾರು ಹಂಚಿಕೆ ಮಾಡಲಾಗಿದೆ ಎಂದರು.

ಪ್ರಸ್ತುತ ರಾಬಕೊವಿ ಜಿಲ್ಲಾ ಹಾಲು ಒಕ್ಕೂಟವು 2.43 ಲಕ್ಷ ಲೀ. ಹಾಲು ಉತ್ಪಾದನೆ ಇದೆ. ಅದರಲ್ಲಿ ಬಳ್ಳಾರಿ ಜಿಲ್ಲೆಯು 10 ಸಾವಿರ ಲೀ., ವಿಜಯನಗರ ಜಿಲ್ಲೆಯು 1.12 ಲಕ್ಷ ಲೀ., ಕೊಪ್ಪಳ ಜಿಲ್ಲೆಯು 70 ಸಾವಿರ ಲೀ ಮತ್ತು ರಾಯಚೂರು ಜಿಲ್ಲೆಯು 26 ಸಾವಿರ ಲೀ. ಉತ್ಪಾದನೆ ಇದೆ ಎಂದು ತಿಳಿಸಿದ ಅವರು, ನಾಲ್ಕು ಜಿಲ್ಲೆಗಳಲ್ಲಿ ಹಾಲಿನ ಉತ್ಪಾದನೆ ಹೆಚ್ಚಿಸಲು ಹಲವಾರು ತೀರ್ಮಾನಗಳನ್ನು ತೆಗೆದುಕೊಳ್ಳಲಾಗಿದೆ ಎಂದರು.

ರಾಬಕೋವಿ ಜಿಲ್ಲಾ ಹಾಲು ಒಕ್ಕೂಟಗಳ ಡೇರಿಗಳ ನಿರ್ವಹಣೆಗೆ ಅನುದಾನ ಮೀಸಲಿರಿಸಲಾಗಿದೆ. ಬಳ್ಳಾರಿ ಡೇರಿಗೆ 1 ಕೋಟಿ ರೂ., ಕೊಪ್ಪಳದ ಬೂದುಗುಂಪಾ ಡೇರಿಗೆ ಸುಮಾರು 4 ರಿಂದ 5 ಕೋಟಿ ರೂ. ಹಾಗೂ ರಾಯಚೂರಿಗೆ ಡೇರಿಗೆ ಕೆಕೆಆರ್‌ಡಿಬಿಯ ಮ್ಯಾಕ್ರೋ ಯೋಜನೆಯಡಿ ರೂ.10 ಕೋಟಿ ಮನವಿ ಸಲ್ಲಿಸಲಾಗಿದೆ ಎಂದರು.

ಈಗಾಗಲೇ ನಾಲ್ಕು ಜಿಲ್ಲೆಗಳಲ್ಲಿ 860 ಸೊಸೈಟಿಗಳಿವೆ. ಇದರಲ್ಲಿ ಹಲವು ಸೊಸೈಟಿಗಳು ಕಾರ್ಯನಿರ್ವಹಿಸುತ್ತಿಲ್ಲ. ಮುಂಬರುವ ದಿನಗಳಲ್ಲಿ ಪ್ರತಿ ತಾಲ್ಲೂಕಿನಲ್ಲಿ ಮೂರು ಸೊಸೈಟಿಗಳನ್ನು ಸ್ಥಾಪಿಸಲಾಗುವುದು. ಒಟ್ಟಾರೆಯಾಗಿ ಹಾಲಿನ ಉತ್ಪಾದನೆಯನ್ನು 2.43 ಲಕ್ಷ ಲೀಟರ್ ನಿಂದ 5 ಲಕ್ಷ ಲೀಟರ್ ಗೆ ಹೆಚ್ಚಿಸುವ ಗುರಿಯನ್ನು ಒಂದಲಾಗಿದೆ ಎಂದರು.

ಮೆಗಾಡೇರಿ ನಿರ್ಮಾಣದ ಕಾಮಗಾರಿಯ ಭೂಮಿಪೂಜೆ ಕಾರ್ಯ ನೆರವೇರಿಸಲು ಕ್ರಿಯಾಯೋಜನೆ ಹಂತ–ಹಂತವಾಗಿ ಕಾರ್ಯರೂಪಕ್ಕೆ ತಂದು ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಆಹ್ವಾನಿಸಲಾಗುವುದು ಎಂದು ಇದೇ ಸಂದರ್ಭದಲ್ಲಿ ಹೇಳಿದರು.

ರಾಬಕೊವಿ ಒಕ್ಕೂಟದ ಕಚೇರಿಯಲ್ಲಿ ಮೊದಲ ಬಾರಿಗೆ ಆಡಳಿತ ಮಂಡಳಿಯ ನಿರ್ದೇಶಕರ ಸಭೆ ನಡೆಸಲಾಗಿದೆ. ರೈತರಿಗೆ ಅನುಕೂಲವಾಗುವಂತಹ ಹಲವಾರು ಅಭಿವೃದ್ಧಿದಾಯಕ ವಿಷಯಗಳನ್ನು ಚರ್ಚಿಸಲಾಗಿದೆ ಎಂದು ತಿಳಿಸಿದರು.

ಇದಕ್ಕೂ ಮುನ್ನ ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ, ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ, ಬಳ್ಳಾರಿ ಮಹಾನಗರ ಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್ ಸೇರಿದಂತೆ ಇತರರೊಡನೆ ಕೊಳಗಲ್ಲು ಗ್ರಾಮದಲ್ಲಿ ಮೇಗಾಡೇರಿ ಸ್ಥಾಪಿಸಲು ಗುರುತಿಸಿದ ಸ್ಥಳವನ್ನು ಪರಿಶೀಲನೆ ಮಾಡಿದರು.

ಈ ಸಂದರ್ಭದಲ್ಲಿ ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಉಪಾಧ್ಯಕ್ಷ ಕಾರಟಗಿಯ ಎನ್.ಸತ್ಯನಾರಾಯಣ, ವ್ಯವಸ್ಥಾಪಕ ನಿರ್ದೇಶಕ ಬಿ.ಆರ್.ಪ್ರಭುಶಂಕರ್ ಹಾಗೂ ಇತರರಿದ್ದರು.

ಹಳಪೇಟೆಯಲ್ಲಿ ಯಜ್ಞೋಪವೀತಧಾರಣೆ ಕಾರ್ಯಕ್ರಮ

# ಯಜ್ಞೋಪವೀತ ವ್ಯಕ್ತಿಯನ್ನು ಸನ್ಮಾರ್ಗಕ್ಕೆ ಕೊಂಡೊಯ್ಯುತ್ತದೆ : ಪ್ರತಿನಿಧಿ




ಮಲ್ಲಮ್ಮ ನುಡಿ ವಾರ್ತೆ

ಶಹಪುರ ಬ್ರಾಹ್ಮಣ ಸಮಾಜದಲ್ಲಿ ಯಜ್ಞೋಪವೀತಕ್ಕೆ ಮಹತ್ವದ ಸ್ಥಾನವಿದ್ದು ವ್ಯಕ್ತಿಯನ್ನು ಸನ್ಮಾರ್ಗದತ್ತ ನಡೆಯುವಂತೆ ಪ್ರೇರೇಪಿಸುತ್ತದೆ, ಅದನ್ನು ಪೂಜ್ಯ ಭಾವನೆಯಿಂದ ಕಾಣುತ್ತೇವೆ ಎಂದು ಶ್ರೀ ವೆಂಕಟೇಶ್ವರಸ್ವಾಮಿ ದೇವಸ್ಥಾನದ ಅರ್ಚಕ ವಿಠ್ಠಲಾಚಾರ್ಯ ಪ್ರತಿನಿಧಿ ತಿಳಿಸಿದರು.

ನಗರದ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ ವಿಪ್ರಸಮುದಾಯದಿಂದ ಆಯೋಜಿಸಿದ್ದ ಯಜ್ಞೋಪವೀತ ಧಾರಣೆ ಕಾರ್ಯಕ್ರಮದಲ್ಲಿ ವಿಶೇಷ ಹೋಮಹವನ ನಡೆಸಿ ಅಭಿಪ್ರಾಯ ಹಂಚಿಕೊಂಡರು. ಬೆಳಗಿನ ತುಂತುರು ಮಳೆಯಲ್ಲಿಯೂ, ಸ್ವಾಮಿ ಸನ್ನಿಧಿಯಲ್ಲಿ ಧಾರ್ಮಿಕ ಕಾರ್ಯಗಳು ಜರುಗಿದವು. ಹಿರಿಯರಾದ ಕೋನೇರಾಚಾರ್ಯ ಸಗರ, ಶ್ರೀನಿವಾಸರಾವ ದೇಸಾಯಿ, ಗುಂಡೇರಾವ ದೇಶಪಾಂಡೆ, ಶ್ರೀನಿವಾಸಾಚಾರ್ಯ ಸಗರ, ನರಸಿಂಹಾಚಾರ್ಯ ರೊಟ್ಟಿ, ವಾಸುದೇವ ಬೀರನೂರ, ಗಣಪತಿ ಹೆಗಡೆ, ಸತ್ಯನಾರಾಯಣ ದೇಸಾಯಿ, ಗೋಪಾಲ್‌ರಾವ ಕಕ್ಕೇರಿ, ಡಾ.ಸುನೀಲ ದೇಸಾಯಿ, ವಿಜಯಕುಮಾರ ದೇಶಪಾಂಡೆ ಸೇರಿದಂತೆ ಇತರರು ಇದ್ದರು.

## ಚೋರನೂರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಡಿಹೆಚ್‌ಓ ಭೇಟಿ–ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.09–ಗರ್ಭಾವಸ್ಥೆಯ ಅವಧಿಯಲ್ಲಿ ಮನೆಯಲ್ಲಿನ ಗರ್ಭಿಣಿ ಮಹಿಳೆಯರಿಗೆ ಸ್ವ–ಆರೈಕೆಯ ಕುರಿತು ಸಲಹೆ ಮತ್ತು ಸೂಕ್ತ ಸಂವಹನ ನೀಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಿಗೆ ಸೂಚಿಸಿದರು.

ಗುರುವಾರ ಸಂಡೂರು ತಾಲ್ಲೂಕಿನ ಚೋರನೂರು ಪ್ರಾಥಮಿಕ ಆರೋಗ್ಯ ಕೇಂದ್ರ–ಕ್ಕೆ ಭೇಟಿ ನೀಡಿ, ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಕುರಿತು ಪ್ರಗತಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ತೊಡಕಿನ ಗರ್ಭಿಣಿಯರಿಗೆ ಪ್ರತಿ ತಿಂಗಳು 9ನೇ ತಾರೀಖಿನಂದು ನಡೆಯುವ ಪ್ರಧಾನ ಮಂತ್ರಿ ಸುರಕ್ಷ ಮಾತೃತ್ವ ಅಭಿಯಾನ ದಿನದಂದು ವೈದ್ಯಾಧಿಕಾರಿಗಳ ಹತ್ತಿರ ಆರೋಗ್ಯ ತಪಾಸಣೆ ಮಾಡಿಸಲು ಕಾಳಜಿ ವಹಿಸಬೇಕು ಎಂದು ತಿಳಿಸಿದರು.

ಪ್ರಸವಪೂರ್ವ ಆರೈಕೆಯಲ್ಲಿ ವೈದ್ಯಕೀಯ ಪರೀಕ್ಷೆ, ವೈದ್ಯರ ಸಲಹೆ ಮತ್ತು ಆರೋಗ್ಯ ಶಿಕ್ಷಣ ನೀಡುವ ಅವಶ್ಯಕತೆ ಇದ್ದು, ಹೆರಿಗೆಯ ಸಮಯದಲ್ಲಿ ಮತ್ತು ನಂತರ ಆರೈಕೆಯ ಬೆಂಬಲ ನೀಡಬೇಕು ಎಂದರು.

ಗರ್ಭಿಣಿಯರಿಗೆ ಯಾವುದೇ ಸಮಸ್ಯೆಗಳು ಇಲ್ಲದಿದ್ದರೂ ಸಹ ಗರ್ಭಾವಸ್ಥೆಯಲ್ಲಿ ಕನಿಷ್ಠ 4 ಬಾರಿ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಆರೋಗ್ಯ ತಪಾಸಣೆಯ ಜೊತೆಗೆ ವೈದ್ಯರ ಸಲಹೆಯಂತೆ ರಕ್ತ ಪರೀಕ್ಷೆ ಮಾಡಿಸಲು ತಿಳಿಸಬೇಕು. ಗರ್ಭಾವಸ್ಥೆಯಲ್ಲಿನ ಅಪಾಯದ ಚಿಹ್ನೆಗಳ ಬಗ್ಗೆ ತಾಯಂದಿರಿಗೆ ಅರಿವು ಮೂಡಿಸಬೇಕು. ವೈದ್ಯರ ಸಲಹೆ ಇಲ್ಲದೇ ಯಾವುದೇ ಔಷಧಿಗಳನ್ನು ತೆಗೆದುಕೊಳ್ಳಬಾರದು ಎಂದು ಸಲಹೆ ನೀಡಬೇಕು ಎಂದು ಡಿಹೆಚ್‌ಓ ಅವರು ತಿಳಿಸಿದರು.

ಮಳೆಗಾಲ ಆರಂಭದ ಹಿನ್ನಲೆಯಲ್ಲಿ ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ಸ್ವಚ್ಛತೆ ಕಾಪಾಡಿಕೊಳ್ಳಲು ಸೂಚಿಸಬೇಕು. ನಿಂತ ನೀರಿನಲ್ಲಿ ಸೊಳ್ಳೆಗಳ ಉತ್ಪತ್ತಿಯಿಂದ ಡೆಂಗ್ಯೂ, ಚಿಕುನ್‌ಗುನ್ಯಾ ಕಾಯಿಲೆಗಳು ಹರಡುವ ಸಾಧ್ಯತೆ ಇದ್ದು, ಈ ಕುರಿತು ಸಾರ್ವಜನಿಕ ಸಮುದಾಯದಲ್ಲಿ ಜಾಗೃತಿ ಕಾರ್ಯಕ್ರಮ ನಡೆಸಬೇಕು ಎಂದು ತಿಳಿಸಿದರು.

ತಾಯಿಯ ಎದೆ ಹಾಲು ಮಗುವಿಗೆ ಅಮೃತ. ಮಗುವಿಗೆ 6 ತಿಂಗಳವರೆಗೆ ತಾಯಿಯ ಹಾಲನ್ನೇ ಕೊಡಲು ಸೂಚಿಸಬೇಕು. ಆರು ತಿಂಗಳ ನಂತರ ತಾಯಿ ಹಾಲಿನ ಜೊತೆಗೆ ಪೂರಕ ಆಹಾರ ನೀಡಲು ತಿಳಿಸಬೇಕು. ಎಲ್ಲಾ ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ಮಾರಕ ರೋಗಗಳ ವಿರುದ್ಧದ ಲಸಿಕೆಗಳನ್ನು ನೀಡಲಾಗುತ್ತಿದ್ದು, ಮಕ್ಕಳಿಗೆ ನಿಗಧಿತ ಸಮಯದಲ್ಲಿ ಎಲ್ಲಾ ಲಸಿಕೆಗಳನ್ನು ತಪ್ಪದೇ ಹಾಕಿಸುವಂತೆ ಪೋಷಕರಲ್ಲಿ ಮನವರಿಕೆ ಮಾಡಿಕೊಡಬೇಕು ಎಂದು ಹೇಳಿದರು.

ಬಳಿಕ ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು ಅವರು ನಂತರ ಪ್ರಯೋಗಾಲಯ, ಐಎಲ್‌ಆರ್ ಕೊಠಡಿ ನಂತರ ವಾರ್ಡ್ಗಳಿಗೆ ಭೇಟಿ ನೀಡಿ ಸ್ವಚ್ಛತೆ ಕುರಿತು ಪರಿಶೀಲಿಸಿದರು. ನಂತರ ಸಾರ್ವಜನಿಕರ ಜೊತೆಗೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಿಗುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿ ಸೌಲಭ್ಯ ಪಡೆದುಕೊಳ್ಳಲು ತಿಳಿಸಿದರು.

ಈ ಸಂದರ್ಭದಲ್ಲಿ ವೈದ್ಯಾಧಿಕಾರಿ ಡಾ.ಅಕ್ಷಯ್, ಡಿಎನ್‌ಓ ಗಿರೀಶ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಡೊಣೇಶ್ವರ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ, ಆರೋಗ್ಯ ನಿರೀಕ್ಷಣಾಧಿಕಾರಿ, ಆಶಾ ಕಾರ್ಯಕರ್ತೆಯರು ಸೇರಿದಂತೆ ತಾಯಂದಿರು, ಸಾರ್ವಜನಿಕರು ಉಪಸ್ಥಿತರಿದ್ದರು.

## ಕೃಷ್ಣಪ್ಪನವರಂತೆ ಹೋರಾಟದ ಮನೋಭಾವ ಎಲ್ಲರೂ ಮೈಗೂಡಿಸಿಕೊಳ್ಳಬೇಕು ಸೋಮಶೇಖರ್

ಬಳ್ಳಾರಿ :ಅ,9– ದಲಿತರ ಪರ ಹೋರಾಡಿ ಸಾಮಾಜಿಕ ನ್ಯಾಯ ದೊರಕಿಸಿಕೊಟ್ಟ ಪ್ರೊ.ಬಿ.ಕೃಷ್ಣಪ್ಪ ಅವರ ಹೋರಾಟದ ಮನೋಭಾವವನ್ನು ನಾವೆಲ್ಲರೂ ಮೈಗೂಡಿಸಿಕೊಳ್ಳಬೇಕು ಎಂದು ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕ ಎಂ. ಸೋಮಶೇಖರ್ ಕರೆ ಕೊಟ್ಟರು

ಅವರು ನಿನ್ನೆ ನಗರದ ಕೆ.ಇ.ಬಿ ಫಂಕ್ಷನ್ ಹಾಲ್ ನಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಸ್ವಾಭಿಮಾನಿ ( ಬಿ. ಕೃಷ್ಣಪ್ಪ) ಬಣದಿಂದ ಪ್ರೊ. ಬಿ. ಕೃಷ್ಣಪ್ಪ ರವರ 88ನೇ ಜನ್ಮದಿನಾಚರಣೆ ಅಂಗವಾಗಿ

ಹಮ್ಮಿಕೊಂಡಿದ್ದ ಕಾರ್ಯಕರ್ತರ ರಾಜ್ಯ ಮಟ್ಟದ ಸ್ವಾಭಿಮಾನ ಸಂಘರ್ಷ ಚೈತನ್ಯ ಸಮಾವೇಶದ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದರು.

ಪ್ರೊ.ಬಿ.ಕೃಷ್ಣಪ್ಪ ಅವರು ದಲಿತರ ಸಮುದಾಯಗಳ ಮೇಲೆ ನಡೆಯುತ್ತಿರುವ ಶೋಷಣೆ, ಹಿಂಸೆ ಹಾಗೂ ದೌರ್ಜನ್ಯಗಳ ವಿರುದ್ಧ ಧ್ವನಿ ಎತ್ತಿದ್ದರು. ತಮ್ಮ ತನು, ಮನ, ಧನವನ್ನು ಧಾರೆ ಎರೆದು ದಲಿತ ಸಮುದಾಯ ಹಾಗೂ ಶೋಷಣೆಗೆ ಒಳಗಾದ ಎಲ್ಲಾ ಸಮುದಾಯವನ್ನು ಒಗ್ಗೂಡಿಸಿ ಅವರ ಏಳಿಗೆಗೆ ದುಡಿದ ಮಹಾನ್ ವ್ಯಕ್ತಿಯಾಗಿದ್ದರು. ನಾವೆಲ್ಲರೂ ಅವರ ಹೋರಾಟದ ದಾರಿಯಲ್ಲಿ ಸಾಗಬೇಕಾಗಿದೆಂದರು.

ಕಾರ್ಯಕ್ರಮವನ್ನು ರತ್ನಾಕರ ಬಂತಜೀ ಉದ್ಘಾಟಿಸಿದರು. ಡಾ ಬಿ. ಶ್ರೀನಿವಾಸ ಮೂರ್ತಿ, ವಿ. ನಾರಾಯಣಸ್ವಾಮಿ , ಹೆಚ್. ಹನುಮಂತಪ್ಪ, ಭಾಗ್ಯಮ್ಮ ನಾರಾಯಣಸ್ವಾಮಿ, ಅಂದನಿ ಸೋಮನಹಳ್ಳಿ,ಆನೇಕಲ್ಲೂ ಕೃಷ್ಣಪ್ಪ, ಕಬ್ಬಳ್ಳಿ ಮೈಲಪ್ಪ, ಅಂಬೇಡ್ಕರ್ ಸಂಘದ ಜಿಲ್ಲಾ ಅಧ್ಯಕ್ಷರಾದ ಅನಂತಕುಮಾರ್, ಈಶ್ವರಪ್ಪ, ಸತ್ಯಾಬಾಬು, ಹೆಚ್.ವೆಂಕಟೇಶ್, ಎನ್.ಡಿ. ಯಂಕಮ್ಮ,ಆರ್. ಜಾಶ್ವ,

ಜಿಲ್ಲಾ ಸಂಚಾಲಕರಾದ ರಾಮಣ್ಣ ಚೇಳ್ಳಗುರ್ಕಿ ,

ರಾಜ್ಯ ಸಂ ಸಂಚಾಲಕರು, ವಿಭಾಗೀಯ ಸಂಚಾಲಕರು, ಹಾಗೂ ರಾಜ್ಯದ ಜಿಲ್ಲಾ ಸಂಚಾಲಕರು ಭಾಗವಹಿಸಿದ್ದರು.

## ಕಾಯಕದಿಂದ ಕಾಯಕ ಯೋಗಿಯಾಗಿ ತಮ್ಮ ವಚನಗಳ ಮೂಲಕ ಜನರಿಗೆ ಸಂದೇಶ ನೀಡಿದರು. ವಿಶೇಷ ಉಪನ್ಯಾಸಕ ಡಾ. ಡಿ.ಎನ್.ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಆ.09–ಕಾಯಕದಿಂದ ಕಾಯಕಯೋಗಿಯಾಗಿ ಜಂಗಮ್ಮ ದಾಸಿಯಾಗಿ ಒಂದು ರೀತಿಯ ಶಿವಶರಣರ ಮಾದರಿಯಾಗಿ ತಮ್ಮ ವಚನಗಳ ಮೂಲಕ ಜನರಿಗೆ ಸಂದೇಶ ನೀಡಿದ್ದಾರೆ ಎಂದು ವಿಶೇಷ ಉಪನ್ಯಾಸಕ ಕನ್ನಡ ಅಧ್ಯಾಪಕರಾದ ಡಾ. ಡಿ.ಎನ್. ಪಾಟೀಲ ಅವರು ಹೇಳಿದರು.

ಶನಿವಾರದಂದು ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಕಲಬುರಗಿ ಇವರುಗಳ ಸಂಯುಕ್ತಾಶ್ರಯದಲ್ಲಿ ನುಲಿಯ ಚಂದಯ್ಯ ರವರ ಭಾವ ಚಿತ್ರಕ್ಕೆ ಮಾಲಾರ್ಪಣೆ ಮಾಡಿ ಮಾತನಾಡಿದರು.

ಕಾಯಕ ಜೀವಿಗಳ ಮತ್ತು ಶರಣ ಚೇತನಕ್ಕೆ ಆದರ್ಶಪ್ರಾಯರಾದ ನುಲಿಯ ಚಂದಯ್ಯನವರು ದೇವರಿಗಾಗಿ ಗುಡಿ ಗುಂಡಾರ ಸುತ್ತಲಿಲ್ಲ. ಆದರೆ ತನ್ನ ಕಾಯಕದ ಮೂಲಕ ಲಿಂಗ ದೇವರನ್ನೇ ತನ್ನನ್ನು ಸುತ್ತುವಂತೆ ಬದಕಿ ಬಾಳಿದವರು ಎಂದರು.

ಬಸವಣ್ಣನವರು ಸ್ಥಾಪಿಸಿದ ಅನುಭವ ಮಂಟಪದಲ್ಲಿ ತರ್ಕ ವಿತರ್ಕಗಳಿಗೆ ಎಡೆಗೊಡದೆ ತನಗೆ ಸರಿ ಎನಿಸಿದ ವಿಚಾರಗಳಿಗೆ ಅತಿ ನಿಷ್ಠುರವಾದಂತಹ ಪ್ರತಿಕ್ರಿಯೆಯನ್ನು ಕೊಡುತ್ತಾ ಅಂಬಿಗರ ಚೌಡಯ್ಯನಂತೆ ಕಟುವಾಗಿದ್ದರು ಕೂಡ ಭಾಷೆ ಮೃದುವಾಗಿತ್ತು. ಚಂದೇಶ್ವರ ಲಿಂಗ ಎಂಬ ಅಂಕಿತದೊಂದಿಗೆ ಇಲ್ಲಿಯವರೆಗೆ 48 ವಚನಗಳು ಲಭ್ಯವಾಗಿವೆ ಎಂದು ಹೇಳಿದರು.

ಕಲ್ಯಾಣ ಕ್ರಾಂತಿಯ ಬಳಿಕ ಶರಣರು ದಿಕ್ಕುಪಾಲಾಗಿ ಹೋದಾಗ ಅಕ್ಕನಾಗಲಂಬಿಕೆಯ ಬೆನ್ನಿಗೆ ನಿಂತು–ಕೊಂಡು ಅವರನ್ನು ಮತ್ತು ಅವರ ವಿಚಾರಧಾರೆಯನ್ನು ಕಾಪಾಡುತ್ತ ಲೋಕಕ್ಕೆ ಶರಣ ತತ್ವವನ್ನು ಬಿತ್ತರಿಸಿದ ಕಾಯಕಯೋಗಿಯಾಗಿದ್ದರು.

ಬಸವಕಲ್ಯಾಣದಲ್ಲಿ ಕೂಡ ತ್ರಿಪುರಾಂತ ಕೆರೆ ಇದ್ದು ಅದು ಚಂದನಿಗೆ ಸಂಬಂಧಿಸಿದ ಅಷ್ಟೇ ಅಲ್ಲ ಅಲ್ಲೇ ಗಂಜಿ ಕೆರೆ ಇದ್ದು ಅಂದು ಚೆಂದಯ್ಯ ನೋವು ಮಾಡಿದ ಗಂಜಿ ಒಲೆಯ ಮೇಲೆ ಉಕ್ಕಿ ಅಲ್ಲಿನ ಪ್ರದೇಶದ ತುಂಬೆಲ್ಲ ಅರಳಿತು ಆಗ ಅಲ್ಲಿಯೇ ಒಂದು ಕೆರೆಯನ್ನ ಕಟ್ಟಿದರಿಂದ ಅದಕ್ಕೆ ಗಂಜಿ ಕೆರೆ ಎಂದು ಹೆಸರು ಬಂತು.

ಮಹಾಂತೇಶ್ವರ ಮಠ, ಚಿಣಮಗೇರಾ ಪೂಜ್ಯಶ್ರೀ.ಷ.ಬ್ರ. ವೀರಮಹಾಂತ ಶಿವಾಚಾರ್ಯರು ದಿವ್ಯಸಾನಿಧ್ಯವಹಿಸಿ ಮಾತನಾಡಿ, ನಮ್ಮ ಸಮುದಾಯಗಳು ಸಂಘಟಿತರಾಗಬೇಕು ಬಡ ಮಕ್ಕಳು ಶಿಕ್ಷಣಕ್ಕೆ ಹೆಚ್ಚು ಒತ್ತು ಕೊಡಬೇಕು ಮತ್ತು ಮೌಢ್ಯ ಆಚರಣೆ ಬಿಡಬೇಕು ತಾಯಿಂದರು ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಬೇಕು ಎಂದರು ತಿಳಿಸಿದರು.

ಜಿಲ್ಲಾ ಕೊರಮ್ ಉಪಾಧ್ಯಕ್ಷ ಸುನೀಲ ಮಾನ್ಪಡೆ ಮಾತನಾಡಿ, ಬಸವಣ್ಣವರ ವಿಚಾರಗಳನ್ನು ಒಪ್ಪಿಕೊಂಡು ಸಾಗಬೇಕು ಡಾ. ಬಾಬಾ ಸಾಹೇಬ ಅಂಬೇಡ್ಕರ್ ರವರ ಮೂಲಕ ಬಂದ ಸಂವಿಧಾನ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕೆಂದರು.

ಸಮಾಜದ ಮುಖಂಡರಾದ ಶಾಂತಪ್ಪ ಜಾಧವ ಅವರು ಮಾತನಾಡಿ, ನಮ್ಮ ಸಮುದಾಯ ಭವನಕ್ಕೆ 100ಫಿ100 ಫೀಟ್‌ನ್ ಸ್ಥಳವನ್ನು ಸಿ.ಎ. ನಿವೇಶನದಿಂದ ನೀಡಬೇಕು ನಮ್ಮ ಸಮಾಜ ಸಿಗಬೇಕಾದ ಸೌಲಭ್ಯಗಳನ್ನು ನೀಡಬೇಕೆಂದು ಅವರು ಹೇಳಿದರು.

ಇದೇ ಸಂದರ್ಭದಲ್ಲಿ ಶಾಸಕ ಮಗನಾದ ಶರಣಗೌಡ ಪಾಟೀಲ ಅವರಿಗೆ ಮನವಿ ಪತ್ರ ನೀಡಲಾಯಿತು.

ಮೆರವಣಿಗೆಯು ಜಗತ್ ವೃತದಿಂದ ನುಲಿಯ ಚಂದಯ್ಯನವರ ಭಾವಚಿತ್ರಕ್ಕೆ ಹಾಗೂ ಬುದ್ಧ ಬಸವ, ಅಂಬೇಡ್ಕರ ಮೂರ್ತಿಗಳಿಗೆ ಮಾಲಾರ್ಪಣೆ ಮಾಡಿ ಕನ್ನಡ ಭವನಕ್ಕೆ ಬಂದು ತಲುಪಿತು.

ಕನ್ನಡ ಮತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕಿ ಜಗದೀಶ್ವರಿ ಆ ನಾಸಿ. ಸ್ವಾಗತಿಸಿದರು. ಸಮಜದ ಮುಖಂಡ ರಮೇಶ ಜಾಧವ ಕಾರ್ಯಕ್ರಮ ನಿರೂಪಿಸಿದರು. ತಹಶೀಲ್ದಾರ ಗ್ರೇಡ್–1 ಆನಂದ ಶೀಲ, ಜಿಲ್ಲಾಧಿಕಾರಿಗಳ ಶಿಷ್ಠಚಾರದ ತಹಶೀಲ್ದಾರ ಪಂಪಯ್ಯ, ಸಮಿತಿಯ ಅಧ್ಯಕ್ಷ ರಾಜಕುಮಾರ ಬಜಂತ್ರಿ ಮದಗುಣಗಿ, ಜಿಲ್ಲಾ ಕೊರಮ್ ಅಧ್ಯಕ್ಷ ಹಣಮಂತ ಭಜಂತ್ರಿ ಕರಜಗಿ ಶಿಕ್ಷಕರಾದ ಪ್ರಕಾಶ ಭಂಜತ್ರಿ ಸೇರಿದಂತೆ ಕೋರಮ ಸಮಾಜದ ಪದಾಧಿಕಾರಿಗಳು ಹಾಗೂ ಮುಖಂಡರು. ಭಾಗವಹಿಸಿದ್ದರು.

# ಜೋಳ ಖರೀದಿಯ 78 ಕೋಟಿ ರೂ ಬಾಕಿ ಹಣ ಬಿಡುಗಡೆಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಆ.09: ಜಿಲ್ಲೆಯ ರೈತರಿಗೆ ಜೋಳವನ್ನು ಬೆಂಬಲ ಬೆಲೆಯಲ್ಲಿ ಖರೀದಿಸಿದ 78 ಕೋಟಿ ರೂ ಹಣವನ್ನು ತಕ್ಷಣ ಬಿಡುಗಡೆಗೆ ಕ್ರಮ ಕೈಗೊಳ್ಳಬೇಕೆಂದು ತುಂಗಭದ್ರ ರೈತ ಸಂಘ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರಲ್ಲಿ ಇಂದು ಮನವಿ ಮಾಡಿದೆ.

ಶಾಸಕರ ಕಚೇರಿಯಲ್ಲಿ ಮನವಿ ಸಲ್ಲಿಸಿದ ಸಂಘದ ಅಧ್ಯಕ್ಷ ದರೂರು ಪುರುಷೋತ್ತಮಗೌಡ,

ಬೇಸಿಗೆ ಸಮಯದಲ್ಲಿ ಸರ್ಕಾರವು ರೈತರಿಂದ ಬೆಂಬಲ ಬೆಲೆಯಲ್ಲಿ ಜಿಲ್ಲೆಯ 12 ಖರೀದಿ ಕೇಂದ್ರಗಳನ್ನು ತೆಗೆದು ರೂ.3,371 ನಂತೆ ಹೈಬ್ರಿಡ್ ಜೋಳವನ್ನು ಹಾಗೂ ರೂ.3421 ನಂತೆ ಬಿಳಿಜೋಳವನ್ನು 3739 ರೈತರಿಂದ ಖರೀದಿಸಲಾಗಿದೆ. ಖರೀದಯ ಮೊತ್ತವು 78 ಕೋಟಿ ರೂಪಾಯಿಗಳಾಗಿದ್ದು. ಇದುವರೆಗೂ ಸರ್ಕಾರವು ರೈತರಿಗೆ ಹಣ ಪಾವತಿ ಮಾಡಿಲ್ಲ.

ಈಗಾಗಲೇ ಮುಂಗಾರು ಮಳೆ ಪ್ರಾರಂಭವಾಗಿದೆ. ಮತ್ತು ತುಂಗಭದ್ರ ಜಲಾಶಯದಿಂದ ಕಾಲುವೆಗಳಿಗೆ ನೀರು ಬಿಟ್ಟು ಒಂದು ತಿಂಗಳಾಗಿದೆ. ಇದರಿಂದಾಗಿ ರೈತರಿರು ಬೀಜ, ರಸಗೊಬ್ಬರ ಖರೀದಿಗೆ ಹಣಕಾಸಿನ ತೊಂದರೆಯಾಗಿ ಆರ್ಥಿಕ ಸಂಕಷ್ಟದಲ್ಲಿದ್ದಾರೆ.

ಈ ವಿಷಯವನ್ನು ಮುಖ್ಯ ಮಂತ್ರಿಗಳ ಗಮನಕ್ಕೆ ತಂದು ತಕ್ಷಣ ಬಳ್ಳಾರಿ ಜಿಲ್ಲೆಯ ಜೋಳ ಮಾರಾಟಮಾಡಿರುವ ರೈತರಿಗೆ 78 ಕೋಟಿ ರೂಪಾಯಿಗಳ ಹಣಕಾಸು ಪಾವತಿಸಲು ಕ್ರಮಕ್ಕೆ ಮುಂದಾಗಬೇಕೆಂದು ಮನವಿ ಮಾಡಿದ್ದಾರೆ.

## ಡಿ.ದೇವರಾಜು ಅರಸು ಜಯಂತಿ ಅರ್ಥಪೂರ್ಣ ಆಚರಣೆಗೆ ಸೂಚನೆ



**ಮಲ್ಲಮ್ಮ ನುಡಿ ವಾರ್ತೆ**

ರಾಯಚೂರುಆಗಸ್ಟ್09-ಜಿಲ್ಲೆಯಲ್ಲಿ ಆಗಸ್ಟ್ 20 ರಂದು ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಆಗಸ್ಟ್ 7ರ ಗುರುವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಡಿ.ದೇವರಾಜ ಅರಸು ಅವರ 110ನೇ ಜನ್ಮ ದಿನಾಚರಣೆಯ ಪೂರ್ವಭಾವಿ ಸಿಧ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂದು ಬೆಳಿಗ್ಗೆ 9ಕ್ಕೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಮೆರವಣಿಗೆಯು ಅಚ್ಚುಕಟ್ಟಾಗಿ ನಡೆಯಬೇಕು. ಬಳಿಕ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮವು ಸುವ್ಯಸ್ಥಿತವಾಗಿ ನಡೆಯುವಂತಾಗಬೇಕು. ಜಯಂತಿ ಹಿನ್ನೆಲೆಯಲ್ಲಿ ಅಂದು ನಗರದ ಎಲ್ಲಾ ವೃತ್ತಗಳಲ್ಲಿ ಮತ್ತು ಪ್ರಮುಖ ರಸ್ತೆಗಳಲ್ಲಿ ಹಾಗೂ ಜಿಲ್ಲಾ ರಂಗಮಂದಿರದ ಹೊರಾಂಗಣ ಮತ್ತು ಒಳಾಂಗಣದಲ್ಲಿ ಶುಚಿತ್ವ ಕಾಯ್ದುಕೊಳ್ಳಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಆಯಾ ತಾಲೂಕಿನ ತಹಸೀಲ್ದಾರರು ತಾಲೂಕು ಮಟ್ಟದಲ್ಲಿ ದಿನಾಚರಣೆ ಆಚರಿಸಲು ಕ್ರಮ ವಹಿಸಬೇಕು. ಜನ ಪ್ರತಿನಿಧಿಗಳ, ಸಂಘ ಸಂಸ್ಥೆಗಳ ಮತ್ತು ಅಧಿಕಾರಿಗಳ ಸಭೆ ಕರೆದು ಸಮಾಲೋಚಿಸಿ ತಾಲೂಕು ಕೇಂದ್ರಗಳಲ್ಲಿ ಅರ್ಥಪೂರ್ಣವಾಗಿ ದಿನಾಚರಣೆ ನಡೆಸಲು ಸಿದ್ಧತೆ ಮಾಡಿಕೊಳ್ಳಬೇಕು ಎಂದು ತಹಸೀಲ್ದಾರರಿಗೆ ಸೂಚನೆ ನೀಡಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರ ಕಚೇರಿಯಿಂದ ಸುತ್ತೋಲೆ ಹೊರಡಿಸಿ ತಿಳಿಸಿದಂತೆ ಡಿ. ದೇವರಾಜು ಅವರ ಜನ್ಮ ದಿನಾಚರಣೆಯನ್ನು ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳಲ್ಲಿ, ಆಶ್ರಮ ಶಾಲೆಗಳಲ್ಲಿ, ಖಾಸಗಿ ಮೆಟ್ರಿಕ್ ಪೂರ್ವ ಮತ್ತು ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಆಗಸ್ಟ್ 20 ರಂದು ಕಡ್ಡಾಯ ಆಚರಿಸಲು ಕ್ರಮ ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು, ಬಿಸಿಎಂ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಚನೆ ನೀಡಿದರು.

ಭೂ ಸುಧಾರಣೆ ಕಾಯಿದೆಯಂತಹ ಜನಪರ ಯೋಜನೆಗಳನ್ನು ರೂಪಿಸಿ ಕಾರ್ಯನುಷ್ಠಾನಕ್ಕೆ ತಂದ ಡಿ.ದೇವರಾಜ ಅರಸು ಅವರ ವ್ಯಕ್ತಿತ್ವದ ಬಗ್ಗೆ ಇಂದಿನ ಯುವ ಸಮುದಾಯಕ್ಕೆ ಸಂದೇಶ ಹೋಗುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿನ ವಿವಿಧ ವಸತಿ ನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ, ಭಾಷಣ ಸ್ಪರ್ಧೆ ಹಾಗು ಇನ್ನಿತರ ಸ್ಪರ್ಧೆಗಳನ್ನು ಆಯೋಜನೆ ಮಾಡಿ ಬಹುಮಾನ ವಿತರಣೆಗೆ ಕ್ರಮ ವಹಿಸಬೇಕು ಎಂದು ಇದೆ ವೇಳೆ ಅಪರ ಜಿಲ್ಲಾಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಅಶೋಕ ಅವರಿಗೆ ಸೂಚನೆ ನೀಡಿದರು.

2024-25ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ., ಪಿ.ಯು.ಸಿ ಹಾಗೂ ಸ್ನಾತಕೋತ್ತರ ಪದವಿಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ಬಿಸಿಎಂ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳನ್ನು ಗುರುತಿಸಿ ವೇದಿಕೆಯಲ್ಲಿ ಸನ್ಮಾನಿಸಿ ಗೌರವಿಸಬೇಕು. ಹಿಂದುಳಿದ ಸಮುದಾಯಗಳ ಒಕ್ಕೂಟದ ಗಣ್ಯರಿಗೆ ವೇದಿಕೆಗೆ ಅವಕಾಶ ಕಲ್ಪಿಸಿಕೊಡಬೇಕು. ಉತ್ತಮ ಸಂಪನ್ಮೂಲ ವ್ಯಕ್ತಿಗಳಿಂದ ಡಿ.ದೇವರಾಜು ಅರಸು ಅವರ ಕುರಿತು ಉಪನ್ಯಾಸ ಏರ್ಪಡಿಸಬೇಕು. ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ರಾಜ್ಯಶಾಸ್ತ್ರದ ಉಪನ್ಯಾಸಕರಾದ ವೆಂಕಟೇಶ ಅವರನ್ನು ಉಪನ್ಯಾಸಕರೆಂದು ಆಹ್ವಾನ ನೀಡಬೇಕು ಎಂದು ಸಭೆಯಲ್ಲಿದ್ದ ವಿವಿಧ ಸಮುದಾಯದ ಮುಖಂಡರು ಸಭೆಗೆ ಸಲಹೆ ಮಾಡಿದರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಡಾ.ಅಶೋಕ ವಿ ಹಾಗೂ ಪತ್ರಾಂಕಿತ ವ್ಯವಸ್ಥಾಪಕರಾದ ಪಂಕಜ ಅವರು ದಿನಾಚರಣೆಗೆ ಸಂಬಂಧಿಸಿದ ಸರ್ಕಾರದ ಸುತ್ತೋಲೆಗಳನ್ನು ಸಭೆಗೆ ಓದಿ ಹೇಳಿದರು.

ಸಭೆಯಲ್ಲಿ ವಿವಿಧ ಸಂಘ ಸಂಸ್ಥೆಗಳ ಪ್ರಮುಖರಾದ ಕೆ.ಶಾಂತಪ್ಪ, ಟಿ.ಕಾಜನಗೌಡ, ಹನುಮಂತಪ್ಪ, ಭಗತರಾಜ ನಿಜಾಮಕಾರಿ, ಪಾಗುಂಡಪ್ಪ, ಎಂ.ಚಂದಶೇಖರ, ರಂಗನಾಥ, ಆಂಜನೇಯ ಯಾದವ, ಸುರೇಖಾ ಪಿ, ವಿಜಯಭಾಸ್ಕರ ಇಟಗಿ, ಹಿರಿಯ ಪತ್ರಕರ್ತರಾದ ಬಿ ವೆಂಕಟಸಿಂಗ್, ವಾರ್ತಾ ಇಲಾಖೆಯ ಗವಿಸಿದ್ದಪ್ಪ ಹೊಸಮನಿ, ಲಿಂಗರಾಜ ಸೇರಿದಂತೆ ಇನ್ನಿತರ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.

## ಸಿಯುಕೆ: ಬದಲಾಗುತ್ತಿರುವ ಕಾನೂನು ಜ್ಞಾನದ ಆಯಾಮಗಳು ಉಪನ್ಯಾಸ

**ಮಲ್ಲಮ್ಮ ನುಡಿ ವಾರ್ತೆ**

ಕಲಬುರಗಿ,ಆ.9:ವಕೀಲರು ಜೀವಮಾನದ ಓದುಗರು ಮತ್ತು ಯಾವಾಗಲು ಕಲಿಯುವವರು. ಆದಾಗ್ಯೂ, ಓದುವುದು ಕೇವಲ ಕರ್ತವ್ಯವಾಗಿರದೆ, ಪವಿತ್ರ ಪ್ರೋಜೆಯಾಗಿರಲಿ ಎಂದು ಹುಬ್ಬಳ್ಳಿಯ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಪ್ರೋ. ಜಿ.ಬಿ. ಪಾಟೀಲ್ ಹೇಳಿದರು. ಅವರು ಕರ್ನಾಟಕದ ಕೇಂದ್ರೀಯ ವಿಶ್ವವಿದ್ಯಾಲಯದ ಕಾನೂನು ವಿಭಾಗದಲ್ಲಿ ಬದಲಾಗುತ್ತಿರುವ ಕಾನೂನು ಜ್ಞಾನದ ಆಯಾಮಗಳು ಎಂಬ ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡುತ್ತಿದ್ದರು. ಕಾನೂನು ವಿದ್ಯಾರ್ಥಿಗಳು ಮತ್ತು ಕಾನೂನು ವಿಭಾಗದ ಸಂಶೋಧನಾ ವಿದ್ವಾಂಸರು ಓದುವಿಕೆಯನ್ನು ಕೇವಲ ಶೈಕ್ಷಣಿಕ ಬಾಧ್ಯತೆಯಾಗಿ ಮಾತ್ರವಲ್ಲದೆ ಸಂತೋಷ, ಸ್ಥಿತಿಸ್ಥಾಪಕತ್ವ ಮತ್ತು ಭಾವನಾತ್ಮಕ ಸಮತೋಲನದ ಮೂಲವಾಗಿ ಸ್ವೀಕರಿಸಬೇಕು. ಕಾನೂನಿನ ನಿರಂತರ ಬೇಡಿಕೆಗಳಲ್ಲಿ, ಪುಸ್ತಕಗಳು ನಿಮ್ಮ ಒತ್ತಡ ನಿವಾರಕಗಳು ಮತ್ತು ಸಂತೋಷವನ್ನು ಹೆಚ್ಚಿಸುವವುಗಳಾಗಿವೆ.

ಅವು ಮನಸ್ಸನ್ನು ಪುನರುಜ್ಜೀವನಗೊಳಿಸುತ್ತವೆ, ಸೃಜನಶೀಲತೆಗೆ ಇಂಧನ ನೀಡುತ್ತವೆ ಮತ್ತು ಶ್ರೇಷ್ಠತೆಗೆ ಅಗತ್ಯವಾದ ಭಾವನಾತ್ಮಕ ಸಮತೋಲನವನ್ನು ಉಳಿಸಿಕೊಳ್ಳುತ್ತವೆ. ನ್ಯಾಯಶಾಸ್ತ್ರದ ದಂತಕಥೆ ಎಂದು ಕರೆಸಿಕೊಂಡವರು ಕಾನೂನು ವ್ಯಾಖ್ಯಾನ ಮತ್ತು ನ್ಯಾಯಾಲಯದ ವಾದವನ್ನು ತೀಕ್ಷ್ಣಗೊಳಿಸಲು ಸಂತೋಷದಾಯಕ, ಜಾಗರೂಕ ಓದುವಿಕೆಯೊಂದಿಗೆ ಬೆಸೆದುಕೊಂಡಿರುವ ವಿಶ್ಲೇಷಣಾತ್ಮಕ ಶಕ್ತಿಯನ್ನು ಹೊಂದಿದ್ದರು ಎಂದು ಹೇಳಿದರು.

ಮೈಸೂರು ವಿಶ್ವವಿದ್ಯಾನಿಲಯದ ಪ್ರೋ.ಟಿ.ಆರ್. ಮಾರುತಿ, ಕಾನೂನು ವಿಭಾಗದ ಮುಖ್ಯಸ್ಥ ಡಾ. ಬಸವರಾಜ್ ಎಂ. ಕುಬಕಡ್ಡಿ ಮಾತನಾಡಿದರು.

ಡಾ. ರೇಣುಕಾ ಗುಬ್ಬೇವಾಡ ನಿರೂಪಿಸಿದರು, ಡಾ. ಅನಂತ್ ಡಿ. ಚಿಂಚುರೆ ವಂದಿಸಿದರು. ಡಾ. ಜಯಂತ್ ಬೋರುವಾ, ವಿದ್ಯಾರ್ಥಿಗಳು ಮತ್ತು ಸಂಶೋಧನಾ ವಿದ್ವಾಂಸರು ಉಪಸ್ಥಿತರಿದ್ದರು.

## 4 ಕೋಟಿ ರೂ.ಗಳ ಕಾಮಗಾರಿಗೆ ಶಾಸಕ ಮೇಟಿ ಭೂಮಿ ಪೂಜೆ



**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಆ.9-ತಾಲೂಕಿನ ಶಿರೂರ-ಮನ್ನಿಕಟ್ಟಿ ಜಿಪಂ ಮುಖ್ಯ ರಸ್ತೆಗೆ ಕೂಡುವ ಬೆನಕಟ್ಟಿ ಗ್ರಾಮೀಣ ರಸ್ತೆ ಅಗಲೀಕರಣ ಮತ್ತು ಸುಧಾರಣೆಯ 3 ಕೋಟಿ ಹಾಗೂ ಬೆನಕಟ್ಟಿ-ಹಳ್ಳೂರ ರಸ್ತೆಯಲ್ಲಿನ ತಡೆಗೋಡೆ ನಿರ್ಮಾಣ ಮತ್ತು ರಸ್ತೆಯ ಆಯ್ದ ಭಾಗಗಳ ಸುಧಾರಣೆಯ 1 ಕೋಟಿ ರೂ.ವೆಚ್ಚದ ಕಾಮಗಾರಿಗಳಿಗೆ ಶಾಸಕ ಎಚ್.ವಾಯ್.ಮೇಟಿ ಶನಿವಾರ ಬೆನಕಟ್ಟಿಯಲ್ಲಿ ಭೂಮಿ ಪೂಜೆ ನೆರವೇರಿಸಿದರು. ಶಿರೂರ-ಮನ್ನಿಕಟ್ಟಿ ರಸ್ತೆಗೆ ಕೂಡುವ ಬೆನಕಟ್ಟಿ ಗ್ರಾಮೀಣ ರಸ್ತೆಯಲ್ಲಿ 3.10 ಕಿ.ಮೀ ರಸ್ತೆ ಅಗಲೀಕರಣ ಮತ್ತು ಸುಧಾರಣೆ ಕಾಮಗಾರಿ ಕೈಗೊಳ್ಳಲಾಗುತ್ತಿದ್ದು, ಬೆನಕಟ್ಟಿ-ಹಳ್ಳೂರ ಮಧ್ಯದ ರಸ್ತೆಯ 13.98 ಕಿ.ಮೀ ನಲ್ಲಿ ತಡೆಗೋಡೆ ಮತ್ತು ಹಳ್ಳೂರ ಸಮೀಪದ ಕೆಟ್ಟು ಹೋಗಿರುವ ರಸ್ತೆಯ ಸುಧಾರಣೆಯ ಕಾಮಗಾರಿ ಮಾಡಲಾಗುತ್ತಿದೆ. ಈ ಮೂರೂ ಕಾಮಗಾರಿಗಳು ಜಿಲ್ಲಾ ಮುಖ್ಯ ರಸ್ತೆಗಳ ಸುಧಾರಣೆ ಅಪೆಂಡಿಕ್ಸ್-ಇ ಯಡಿ ಲೋಕೋಪಯೋಗಿ ಇಲಾಖೆಯಿಂದ 4 ಕೋಟಿ ರೂ.ಗಳ ವೆಚ್ಚದಲ್ಲಿ ನಡೆಯುತ್ತವೆ ಎಂದು ಶಾಸಕ ಮೇಟಿ ತಿಳಿಸಿದರು.

ಸರ್ಕಾರ ಪ್ರತಿಯೊಬ್ಬ ಶಾಸಕರಿಗೂ 50 ಕೋಟಿ ರೂ.ಗಳ ಅನುದಾನ ನೀಡುತ್ತಿದ್ದು, ತುರ್ತಾಗಿ ಆಗಬೇಕಾದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. ಗ್ರಾಮೀಣ ರಸ್ತೆಗಳ ಸುಧಾರಣೆ ಹೆಚ್ಚು ಆದ್ಯತೆ ನೀಡಲಾಗುತ್ತಿದೆ ಎಂದ ಎಚ್.ವಾಯ್.ಮೇಟಿ, ಗುತ್ತಿಗೆದಾರರ ಗುಣಮಟ್ಟದ ಕಾಮಗಾರಿಗೆ ಒತ್ತು ಕೊಡಬೇಕು. ಜನರಿಂದ ಯಾವುದೇ ತಕರಾರು ಬರದಂತೆ ಕೆಲಸ ನಿರ್ವಹಿಸಬೇಕು ಎಂದು ಹೇಳಿದರು. ಬೆನಕಟ್ಟಿ-ಭೈರಮಟ್ಟಿ ರಸ್ತೆ ಕಾಮಗಾರಿ ಹಾಗೂ ಬೆನಕಟ್ಟಿ ಕೆರೆಯಲ್ಲಿ ತಡೆಗೋಡೆ ನಿರ್ಮಾಣಕ್ಕೂ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಗ್ರಾಮ ಪಂಚಾಯತಿ ಅಧ್ಯಕ್ಷೆ ಪಾರ್ವತೆವ್ವ ಮಾದರ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲೂಕಾ ಅಧ್ಯಕ್ಷ ಎಸ್.ಎನ್.ರಾಂಪೂರ, ಕಾಂಗ್ರೆಸ್ ಗ್ರಾಮೀಣ ಮಹಿಳಾ ಘಟಕದ ಅಧ್ಯಕ್ಷೆ ಮಂಜುಳಾ ಕಮತಗಿ, ಮೆಲ್ಪ್ರೋ ಸಕ್ಕರೆ ಕಾರ್ಖಾನೆ ಅಧ್ಯಕ್ಷ ಶಿವಾನಂದ ಮೆಳ್ಳಿಗೇರಿ, ಮುಖಂಡರಾದ ಬಸವರಾಜ ಅರಕೇರಿ, ಬಿ.ಆರ್.ಯಡಹಳ್ಳಿ, ಕೆ.ಆರ್.ಯಡಹಳ್ಳಿ, ಮಲ್ಲಿಕಾರ್ಜುನ ಶಿರೂರ, ವಿಜಯ ಕಮತಗಿ, ಮಲ್ಲಿಕಾರ್ಜುನ ಮೇಟಿ, ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ವೆಂಕಟೇಶ ಹೂಲಗೇರಿ, ಸಹಾಯಕ ಅಭಿಯಂತರರಾದ ಮಲ್ಲು ಹಾಲವರ, ವಿದ್ಯಾಶ್ರೀ ಹಳ್ಳೂರ, ಚೇತನಾ ಮಳಲಿ, ಗುತ್ತಿಗೆದಾರರಾದ ಕುಮಾರ ಬಿಂಜವಾಡಗಿ, ಸಂತೋಷ ಕುಂದರಗಿ, ಆನಂದ ನೀರಲಕೇರಿ, ದೇಶಪಾಂಡೆ ಮತ್ತಿತರರು ಪಾಲ್ಗೊಂಡಿದ್ದರು.

## 54 ಸಾವಿರ ರೂಗಳಿದ್ದ ಹಣದ ಬ್ಯಾಗ್ ಪ್ರಯಾಣಿಕನಿಗೆ ಮರಳಿ ನೀಡಿ ಮಾನವೀಯತೆ ಮೆರೆದ ಸಾರಿಗೆ ಸಿಬ್ಬಂದಿ

**ಮಲ್ಲಮ್ಮ ನುಡಿ ವಾರ್ತೆ**



ಗುರುಮಠಕಲ್,ಆ.9-ಪ್ರಯಾಣಿಕರೊಬ್ಬರು ಬಸ್ಸಿನಲ್ಲಿಯೇ ಮರೆತು ಹೋಗಿದ್ದ 54 ಸಾವಿರ ರೂಪಾಯಿಗಳಿದ್ದ ಹಣದ ಬ್ಯಾಗನ್ನು ಅವರಿಗೆ ಮರಳಿ ನೀಡುವುದರ ಮೂಲಕ ಈಶಾನ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಿಬ್ಬಂದಿ ಮಾನವೀಯತೆ ಮೆರೆದಿದ್ದಾರೆ.

ಆಂಧ್ರಪ್ರದೇಶ ಮೂಲದ ಮೋತಿರಾಮ್ ಎಂಬ ಪ್ರಯಾಣಿಕರು ಯಾದಗಿರಿ ಘಟಕದ ಬಸ್ಸಿನಲ್ಲಿ ಸುಮಾರು 54 ಸಾವಿರ ರೂಪಾಯಿ ಹಣವಿದ್ದ ಬ್ಯಾಗನ್ನು ಮರೆತು ಬಿಟ್ಟು ಹೋಗಿದ್ದರು. ಇದನ್ನು ಗಮನಿಸಿದ ಬಸ್ಸಿನ ನಿರ್ವಾಹಕ ಅಶೋಕ್, ಚಾಲಕರಾದ ವಿಶ್ವನಾಥ ಮತ್ತು ಚಂದ್ರಶೇಖರ್ ಅವರು ಈ ವಿಷಯವನ್ನು ಬಸ್ ಘಟಕದ ವ್ಯವಸ್ಥಾಪಕರ ಗಮನಕ್ಕೆ ತಂದಿದ್ದಾರೆ. ಆಗ ಅವರು ಅದನ್ನು ಬಸ್ ಘಟಕಕ್ಕೆ ತಂದು ಒಪ್ಪಿಸಲು ಸೂಚಿಸಿದ್ದಾರೆ. ಅದರಂತೆ ಪ್ರಯಾಣಿಕ ಮೋತಿರಾಮ ಅವರನ್ನು ಸಂಪರ್ಕಿಸಿ ಅವರನ್ನು ಬಸ್ ಡಿಪೋಗೆ ಕರೆಸಿಕೊಂಡು ಎಲ್ಲರ ಸಮಕ್ಷಮದಲ್ಲಿ ಅವರಿಗೆ ಹಣದ ಬ್ಯಾಗನ್ನು ಮರಳಿ ನೀಡುವುದರ ಮೂಲಕ ಮಾನವೀಯತೆ ಮರೆದಿದ್ದಾರೆ. ಅಲ್ಲದೆ ಸಾರಿಗೆ ಸಿಬ್ಬಂದಿಯ ಪ್ರಾಮಾಣಿಕತೆ ಮತ್ತು ಸೇವೆಯನ್ನು ಘಟಕದ ವ್ಯವಸ್ಥಾಪಕರು ಶ್ಲಾಘಿಸಿ ನಮ್ಮ ಸಾರಿಗೆ ಸಿಬ್ಬಂದಿ ನಮ್ಮ ಹೆಮ್ಮೆಯಾಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.



ಹುಮನಾಬಾದ್.ಶಿವಶರಣ ನುಲಿ ಚಂದಯ್ಯನರವರ ಜನ್ಮದಿನೋತ್ಸವವು ಮಿನಿ ವಿಧಾನಸೌಧದಲ್ಲಿ ಶನಿವಾರ ಆಚರಿಸಲಾಯಿತು. ಈ ಸಂದರ್ಬದಲ್ಲಿ, ಸಮಾಜದ ಮುಖಂಡರಾದ ಬಸವರಾಜ ಮಜಕೊರಿ, ದಯಾನಂದ ಮೊಳಕೇರಾ, ದಶರಥ, ಹಾಗೂ ಸುಭಾಷ್ ಆರ್ಯ, ಗ್ರಡ್ 2 ತಹಸೀಲ್ದಾರ ಸಿಬ್ಬಂದಿ ವರ್ಗದವರಿದ್ದರು. (ಮಲ್ಲಮ್ಮ ನುಡಿ ಚಿತ್ರ).

## ಇದೊಂದು ಸೇವಾ ಮನೋಭಾವನೆಯ ಕಾರ್ಯವಾಗಿದೆ:ನಾಯಕ

**ಮಲ್ಲಮ್ಮ ನುಡಿ ವಾರ್ತೆ**



ಸೈದಾಪುರ:ಅ.9:ತಮ್ಮ ಜನ್ಮ ದಿನದಂದು ದುಂದು ವೆಚ್ಚ ಮಾಡದೆ. ಮಕ್ಕಳಿಗೆ ಉಚಿತ ನೋಟ ಬುಕ್‌ಗಳನ್ನು ವಿತರಣೆ ಮಾಡುತ್ತಿರುವ ಸಿದ್ದಣ್ಣಗೌಡ ಸಾವೂರ ಅವರ ಸೇವಾ ಮನೋಭಾವನೆಯ ಕಾರ್ಯ ಇತರರಿಗೆ ಮಾದರಿಯಾಗಿದೆ ಎಂದು ಮುಖ್ಯಗುರು ಲಿಂಗಾರೆಡ್ಡಿ ನಾಯಕ ಅಭಿಪ್ರಾಯಪಟ್ಟರು.

ಪಟ್ಟಣದ ವಿದ್ಯಾ ವರ್ಧಕ ಪ್ರೌಢ ಶಾಲೆಯ ಮಾಜಿ ವಿದ್ಯಾರ್ಥಿ ಶಿಕ್ಷಣ ಪ್ರೇಮಿ ಸಿದ್ದಣ್ಣಗೌಡ ಸಾವೂರು ತಮ್ಮ ಹುಟ್ಟು ಹಬ್ಬದ ದಿನದ ಅಂಗವಾಗಿ ಸಂಸ್ಥೆಯ ವಿವಿಧ ವಿಭಾಗಗಳ ವಿದ್ಯಾರ್ಥಿಗಳಿಗೆ ನೀಡಲಾದ ಉಚಿತ ನೋಟ ಬುಕ ವಿತರಣೆ ಮಾಡಿ ಮಾತನಾಡಿದರು. ನಮ್ಮ ಸಂಸ್ಥೆಯಲ್ಲಿ ವಿವಿಧ ವಿಭಾಗಗಳ 1500ಕ್ಕೂ ಹೆಚ್ಚು ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನೋಟ ಬುಕ ವಿತರಣೆ ಮಾಡಿದ್ದಾರೆ. ಇದು ಅವರಲ್ಲಿನ ಶಿಕ್ಷಣದ ಮಹತ್ವ ತಿಳಿಸುವಂತಿದೆ ಎಂದು ಹೇಳಿದರು.

ಸಂಸ್ಥೆಯವತಿಯಿಂದ ಸನ್ಮಾನಿತರಾಗಿ ಸಿದ್ದಣ್ಣಗೌಡ ಸಾವೂರ ಮಾತನಾಡಿ, ಪ್ರತಿಯೊಬ್ಬರಿಗೂ ಶಿಕ್ಷಣ ಬಹಳ ಮಹತ್ವವಿದೆ. ಪರಿಶ್ರಮದೊಂದಿಗೆ ಅಭ್ಯಾಸ ಮಾಡಿ ತಂದೆ ತಾಯಿಗಳಿಗೆ ಸೇರಿದಂತೆ ಶಾಲೆಗೆ ಉತ್ತಮ ಹೆಸರು ತರುವ ವಿದ್ಯಾರ್ಥಿಗಳು ನಿವಾಗಬೇಕು ಎಂದು ಕಿವಿ ಮಾತುಗಳನ್ನು ಹೇಳಿದರು.

ಈ ಸಂದರ್ಭದಲ್ಲಿ ನಾಗರೆಡ್ಡಿಗೌಡ, ಪ್ರಾಂಶುಪಾಲ ಕರಬಸಯ್ಯ ದಂಡಿಗಿಮಠ, ಗೂಳಪ್ಪ.ಎಸ್.ಮಲ್ಹಾರ, ದೇವಿಂದ್ರಪೀರಾ, ರಾಚಯ್ಯ ಸ್ವಾಮಿ ಬಾಡಿಯಾಳ, ಕಾಶೀನಾಥ ಶೇಖಸಿಂದಿ, ವಿಶ್ವನಾಥರೆಡ್ಡಿ ಪಾಟೀಲ, ರಾಜಶೇಖರ ಪಾಟೀಲ, ಭೀಮಣ್ಣ ನಾಯಕ, ಸಂಗಾರೆಡ್ಡಿ ಪಾಟೀಲ, ತೊಟೇಂದ್ರ, ನಿಜಗುಣಚಾರ್ಯ, ಅಭಿಲಾಷ, ಬಾಲರಾಜ ಸೇರಿದಂತೆ ಇತರರಿದ್ದರು.

## ನ್ಯಾಯಾಧೀಶ ಛಬ್ಬಿ ಪರಿಪೂರ್ಣತೆಯ ಸಂಕೇತ : ನ್ಯಾ.ಅಶೋಕ




**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಆ.9-ನಿವೃತ್ತ ನ್ಯಾಯಾಧೀಶರು ಹಾಗೂ ವಕೀಲರಾಗಿದ್ದ ದಿ.ಗೋಪಾಲರಾವ ಛಬ್ಬಿ ಸಮಗ್ರ ಜ್ಞಾನದ ಪರಿಪೂರ್ಣತೆಯ ಸಂಕೇತವಾಗಿದ್ದರು ಎಂದು ಕರ್ನಾಟಕದ ಕಾನೂನು ಆಯೋಗದ ಅಧ್ಯಕ್ಷ, ನ್ಯಾಯಮೂರ್ತಿ ಅಶೋಕ ಹಿಂಚಿಗೇರಿ ಹೇಳಿದರು.

ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಎಸ್.ಸಿ.ನಂದಿಮಠ ಕಾನೂನು ಮಹಾವಿದ್ಯಾಲಯ, ಮತ್ತು ಜಿ.ಎಚ್.ಛಬ್ಬಿ ಅಸೋಸಿಯೇಟ್ಸ್, ಬಾಗಲಕೋಟ ಇವರ ಸಂಯುಕ್ತ ಆಶ್ರಯದಲ್ಲಿ ಬಸವೇಶ್ವರ ಇಂಜನಿಯರಿಂಗ್ ಗ್ಯಾಲರಿ ಹಾಲ್‌ನಲ್ಲಿ ಶನಿವಾರ ನಡೆದ ದಿ.ಜಿ.ಎಚ್.ಛಬ್ಬಿ ಸಂಸ್ಮರಣಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆಧ್ಯಾತ್ಮ ಜೀವಿಯಾಗಿ ಆತ್ಮವನ್ನು ವಿಕಸನಗೊಳಿಸಿಕೊಂಡು ದೈವಿ ಸ್ವರೂಪಿಯಾಗಿದ್ದ ಛಬ್ಬಿ ಪರಿಪೂರ್ಣತೆಯ ಸಂಕೇತವಾಗಿದ್ದರು ಎಂದು ಹೇಳಿದ ಅವರು, ನ್ಯಾಯಾಧೀಶರು ಕರ್ತವ್ಯದ ಸಮಯದಲ್ಲಿ ತಮ್ಮ ಪೂರ್ವಾಶ್ರಮದಿಂದ ಮುಕ್ತರಾಗಿರಬೇಕು, ವಕೀಲರು ಹಣದ ಆಸೆಗೆ ಒಳಗಾಗದೆ ಪ್ರಕರಣ ನ್ಯಾಯಯುತವಾಗಿದ್ದರೆ ಮಾತ್ರ ಅದನ್ನು ಕೈಗೆತ್ತಿಕೊಂಡು ಕಕ್ಷಿದಾರರಿಗೆ ಕಡಿಮೆ ಸಮಯದಲ್ಲಿ ನ್ಯಾಯ ಒದಗಿಸಬೇಕು ಎಂದರು.

ಶಿಕ್ಷಕರು ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಯ ಶಿಲ್ಪಿಗಳಾಗಿದ್ದಾರೆ, ಇಂದಿನ ಯುವಸಮೂಹಕ್ಕೆ ಮಾತೃದೇವೋಭವ, ಪಿತೃದೇವೋಭವ, ಗುರುದೇವೋಭವ, ಅತಿಥಿದೇವೋಭವದ ಪರಿಕಲ್ಪನೆಯ ಅರಿವು ಮೂಡಿಸುವುದು ಅಗತ್ಯವಾಗಿದೆ ಎಂದು ಹಿಂಚಗೇರಿ ಹೇಳಿದರು.

ಮುಖ್ಯ ಅತಿಥಿ ಬಾಗಲಕೋಟೆಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್.ವ್ಹಿ.ವಿಜಯ ಮಾತನಾಡಿ, ಜಿಲ್ಲೆಯ ವಿವಿಧ ಸ್ಥಳಗಳಲ್ಲಿ ನ್ಯಾಯಾಲಯಗಳು ಅಭಿವೃದ್ಧಿಯಾಗುತ್ತಿದ್ದು, ಅದಕ್ಕೆ ನಮ್ಮ ಜಿಲ್ಲೆಯ ಆಡಳಿತಾತ್ಮಕ ನ್ಯಾಯಾಧೀಶರಾದ ಸಂಜೀವಕುಮಾರ ಹಂಚಾಟೆ ಪ್ರಯತ್ನ ಶ್ಲಾಘನೀಯವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಧೀಶರಾದ ನ್ಯಾಯಮೂರ್ತಿ ಹಂಚಾಟೆ ಸಂಜೀವಕುಮಾರ ಮಾತನಾಡಿ, ದೇಶ, ಸಮಾಜಕ್ಕೆ ಮಹೋನ್ನತ ಸೇವೆ ಸಲ್ಲಿಸಿದ ಮಹನಿಯರನ್ನು ಸ್ಮರಿಸಿಕೊಳ್ಳದಿದ್ದರೆ ಅಂಥ ದೇಶ ಅಭಿವೃದ್ಧಿಯಾಗಲು ಸಾಧ್ಯವಿಲ್ಲ, ಕಾರಣ ಇಂದಿನ ಯುವ ಜನಾಂಗಕ್ಕೆ ನಮ್ಮ ಇತಿಹಾಸ, ಸಂಸ್ಕೃತಿಯ ಅರಿವು ಮೂಡಿಸುವುದು ಅಗತ್ಯವಾಗಿದೆ, ಮನಸ್ಸು ಮನಸ್ಸುಗಳನ್ನು ಒಂದುಗೂಡಿಸುವ ಮೂಲ ಸಂವಿಧಾನದಲ್ಲಿ ನಮ್ಮ ಸಂಸ್ಕೃತಿಯನ್ನು ಬಿಂಬಿಸುವ ರಾಮಾಯಣ ಮತ್ತು ಮಹಾಭಾರತದ ಉಲ್ಲೇಖವಿದ್ದು, ಭಾರತವನ್ನು ಸಾಂಸ್ಕೃತಿಕ ರಾಷ್ಟ್ರವನ್ನಾಗಿ ಕಟ್ಟುವುದು ಸಂವಿಧಾನದ ಉದ್ದೇಶವಾಗಿದೆ ಎಂದರು.

ಅತಿಥಿಗಳಾಗಿ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ ಅಧ್ಯಕ್ಷ ನ್ಯಾಯಮೂರ್ತಿ ಆರ್.ಬಿ.ಬೂದಿಹಾಳ, ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಉಪಸ್ಥಿತರಿದ್ದರು.

ಐಶ್ವರ್ಯ ಲಿಂಗದ ಪ್ರಾರ್ಥಿಸಿದರು. ಕಾನೂನು ಮಹಾವಿದ್ಯಾಲಯದ ಪ್ರಾಚಾರ್ಯೆ ಎಂ.ಪಿ.ಚಂದ್ರಿಕಾ ಸ್ವಾಗತಿಸಿದರು, ಶಭಾನಾತಾಜ ನಿಡಗುಂದಿ ಪರಿಚಯಿಸಿದರು. ಆರ್.ಎಸ್.ಕುಂಬಾರ ವಂದಿಸಿದರು. ಸುನೀಲ ಕಿರಸೂರ ನಿರೂಪಿಸಿದರು.

ಇದೇ ಸಂದರ್ಭದಲ್ಲಿ ಜಿ.ಎಚ್.ಛಬ್ಬಿ ಅಸೋಸಿಯೇಟ್ಸ್ ವತಿಯಿಂದ ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಪ್ರಭಾವತಿ ಹಿರೇಮಠ, ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನ ಅಧ್ಯಕ್ಷ ಎಸ್.ಎಸ್.ಮಿಟ್ಟಲಕೋಡ ಅವರನ್ನು ಸನ್ಮಾನಿಸಲಾಯಿತು. ಎಲ್.ಎಲ್.ಬಿ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಸಿವಿಲ್ ಪ್ರಕ್ರಿಯಾ ಸಂಹಿತೆ ಪುಸ್ತಕಗಳನ್ನು ವಿತರಿಸಲಾಯಿತು.

ಮಹೇಶ ಎನ್.ಅಥಣಿ, ಗುರುಬಸವ ಎಸ್.ಸೂಳಿಭಾವಿ, ಕುಮಾರಸ್ವಾಮಿ ಹಿರೇಮಠ ಹಾಗೂ ಶ್ರೀನಿವಾಸ ಛಬ್ಬಿಯವರ ಕುಟುಂಬಸ್ಥರು, ನ್ಯಾಯಾಧೀಶರು, ವಕೀಲರು, ವಿವಿಧ ಮಹಾವಿದ್ಯಾಲಯದ ಪ್ರಾಚಾರ್ಯರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ನಂತರ ನಡೆದ ಗೋಷ್ಠಿಯಲ್ಲಿ "ಪುನರ್ವಸತಿ ಮತ್ತು ಪುನರ್ವ್ಯಸ್ಥೆ ಕಾಯ್ದೆ, 2013ರ ಅಡಿಯಲ್ಲಿ ನ್ಯಾಯಯುತ ಪರಿಹಾರ ಮತ್ತು ಪಾರದರ್ಶಕತೆಯ ಹಕ್ಕು" ಎಂಬ ವಿಷಯದ ಕುರಿತು ಜಿಲ್ಲಾ ನ್ಯಾಯಾಧೀಶರಾದ ಸುನೀಲ ಶೆಟ್ಟರ ಉಪನ್ಯಾಸ ನೀಡಿದರು. ಶ್ರೀಮತಿ ಫೈರೋಜಾ ಉಕ್ಕಲಿ, ಹಿರಿಯ ವಕೀಲ ಕೆ.ಜಿ.ಪುರಾಣಿಕಮಠ ಇದ್ದರು.

## ವಿದ್ಯೆ ಸಾಧಕನ ಸೊತ್ತೆ ವಿನಃ ಸೋಮಾರಿಯ ಸೊತ್ತಲ್ಲ ರಂಗಸ್ವಾಮಿ ಕೊಂಕಲ



**ಮಲ್ಲಮ್ಮ ನುಡಿ ವಾರ್ತೆ**

ಗುರುಮಿಠಕಲ್,ಆ09.ತಾಲೂಕಿನ ಕೊಂಕಲ ಎಂಬ ಗಡಿನಾಡಿನ ಗ್ರಾಮವೊಂದರ ಅಧ್ಬುತ ಪ್ರತಿಭೆಗಳು ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಅದ್ಭುತ ಸಾಧನೆ ಮಾಡಿರುವುದು ಗ್ರಾಮಕ್ಕೆ ಗೌರವ ತರುವ ಕಾರ್ಯ ಮಾಡಿದ್ದಾರೆ.

ಉನ್ನತ ಶಿಕ್ಷಣ ಕೇವಲ ಉಳ್ಳವರಿಗೆ ಮಾತ್ರ ಎನ್ನುವ ಈ ಕಾಲದಲ್ಲಿ ಅದರಲ್ಲೂ ಸರಕಾರಿ ಕನ್ನಡ ಮಾದ್ಯಮ ಶಾಲೆಯಲ್ಲಿ ಓದಿದ ನಮ್ಮ ಹೆಮ್ಮೆಯ ಕೊಂಕಲ್ ಶಾಲೆಯ ನೆಚ್ಚಿನ ವಿದ್ಯಾರ್ಥಿ ಆನಂದ್ ತಂದೆ ರಾಮಚಂದ್ರ ಓಇಇಖ ಪರೀಕ್ಷೆಯಲ್ಲಿ ಅತ್ಯುತ್ತಮ ಅಂಕ ಪಡೆದು (MBBS) ಪದವಿಯನ್ನು ಪಡೆಯುವುದರ ಮೂಲಕ ಬೆಂಗಳೂರಿನ ಪ್ರತಿಷ್ಠಿತ ವೈದ್ಯಕಿಯ ಕಾಲೇಜನ್ನು ಆಯ್ಕೆ ಮಾಡಿಕೊಂಡಿರುತ್ತಾನೆ.

ಅದೆ ರೀತಿ ಗ್ರಾಮದ ಇನ್ನೊಬ್ಬ ವಿದ್ಯಾರ್ಥಿ ನಿ ಯಾದ ಕುಮಾರಿ ಜಗಮ್ಮ ಕೊಂಕಲ್ ಗ್ರಾಮದಲ್ಲಿಯೇ ಶಿಣಖ ವರೆಗೆ ವಿದ್ಯಾಬ್ಯಾಸ ಮಾಡಿ 94% ಪ್ರತೀಶತ ಅಂಕವನ್ನು ಪಡೆದು ಪ್ರಸ್ತುತ ವಾಗಿ ಅಂಗನವಾಡಿ ಶಿಕ್ಷಕಿಯಾಗಿ ಕಾರ್ಯನಿರ್ವಹಿಸಿತ್ತಿದ್ದಾರೆ ಇವರಿಬ್ಬರ ಸಾಧನೆ ಅತ್ಯಮೂಲ್ಯವಾದದ್ದು.

ಎಂದು ರಂಗಸ್ವಾಮಿ ಕೊಂಕಲ್ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ವಿದ್ಯೆ ಸಾಧಕನ ಸೊತ್ತೆ ವಿನಃ ಸೋಮಾರಿಯ ಸೊತ್ತಲ್ಲ ಎಂಬುದಕ್ಕೆ ಪ್ರಥಮ ಪೀಳಿಗೆಯ ಶಿಕ್ಷಣ ಪಡೆಯುತ್ತಿರುವ ಬಡ, ಹಿಂದುಳಿದ ಕುಟುಂಬದ ಹಿನ್ನೆಲೆಯಿದ್ದರೂ ಈ ನಮ್ಮ ವಿದ್ಯಾರ್ಥಿಗಳ ಸಾಧನೆ ನಮ್ಮೆಲ್ಲರಿಗೂ ಹರ್ಷದಾಯಕವಾಗಿದೆ

ಉತ್ತಮ ವೈದಕೀಯ ಶಿಕ್ಷಣ ಪಡೆದು ಬಡ ರೋಗಿಗಳ ಪಾಲಿಗೆ ಜೀವದಾತನಾಗು ಎಂದು ಕೊಂಕಲ್ ಗ್ರಾಮದ ಗ್ರಾಮಸ್ಥರು ಸನ್ಮಾನಿಸಿ ಹಾರೈಸಿದರು.

## ರೈತರಿಗೆ ಸಮರ್ಪಕವಾದ ಯೂರಿಯಾ, ಡಿಏಪಿ ರಸಗೊಬ್ಬರಗಳನ್ನು ವಿವರಿಸುವಲ್ಲಿ ವಿಫಲವಾದ ರೈತ ದ್ರೋಹಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಸವರಾಜು ವಾಗ್ದಾಳಿ.

**ಮಲ್ಲಮ್ಮ ನುಡಿ ವಾರ್ತೆ**

ಶಹಾಪುರ ನಗರದಲ್ಲಿ ಬಿ ಜೆ ಪಿ ಜಿಲ್ಲಾಧ್ಯಕ್ಷರಾದ ಬಸವರಾಜ ವಿಭೂತಿಹಳ್ಳಿ ಹಾಗೂ ಯುವ ನಾಯಕರಾದ ಶ್ರೀ ಅಮೀನರಡ್ಡಿ ಯಾಳಗಿ ಅವರ ನೇತೃತ್ವದಲ್ಲಿ ಬೃಹತ್ ಪ್ರತಿಭಟನಾ ಪಾದಯಾತ್ರೆಯನ್ನು ನಗರದ ಸಿ ಬಿ ಕಮಾನ್ ನಿಂದ ಬಸವೇಶ್ವರ ವೃತ್ತದವರೆಗೆ ಮಾಡಲಾಯಿತು.

ಈ ಸಂದರ್ಭದಲ್ಲಿ ನಗರ ಮಂಡಲ ಅಧ್ಯಕ್ಷರಾದ ಚಂದ್ರಶೇಖರ ಯಾಳಗಿ, ಗ್ರಾಮೀಣ ಮಂಡಲ ಅಧ್ಯಕ್ಷರಾದ ತಿರುಪತಿ ಹತ್ತಿಕಟಿಗಿ, ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷರಾದ ದುರ್ಗಪ್ಪ ಯಳಿಮೇಳಿ, ಜಿಲ್ಲಾ ಉಪಾಧ್ಯಕ್ಷರಾದ ದೇವಿಂದ್ರಪ್ಪ ಕೋನೆರ, ಜಿಲ್ಲಾ ಕಾರ್ಯದರ್ಶಿಯಾದ ದಾಮು ಪವಾರ, ಹಿರಿಯ ಮುಖಡರಾದ ಶಿವರಾಜ ದೇಶಮುಖ, ಡಾ॥ ಚಂದ್ರಶೇಖರ ಸುಬೇದಾರ, ಮಲ್ಲಿಕಾರ್ಜುನ ಕಂದಕೂರ, ಬಸವರಾಜ ಆರುಣಿ, ಅಶೋಕ ಮಲ್ಲಾಬಾದಿ, ಮಂಡಲ ಪ್ರ.ಕಾರ್ಯದರ್ಶಿಗಳಾದ ಕರಬಸಪ್ಪ ಸಾಹು ಬಿರಾಳ, ವೆಂಕಟೇಶ ಗೌನಳ್ಳಿ ಹಾಗೂ ನಗರ ಮತ್ತು ಗ್ರಾಮೀಣ ಮಂಡಲದ ಎಲ್ಲ ಸ್ಥರದ ಪದಾಧಿಕಾರಿಗಳು, ಮೋರ್ಚಾ ಪದಾಧಿಕಾರಿಗಳು, ರೈತ ಬಾಂಧವರು, ರೈತ ಪರ ಚಿಂತಕರು ಸಾರ್ವಜನಿಕರು ಉಪಸ್ಥಿತರಿದ್ದರು.

# ಜನಮಾನಸದಲ್ಲಿ ಚಿರಸ್ಥಾಯಿಯಾಗಿರುವ ದಿ.ಬಸವರಾಜ ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಬಸವರಾಜ ಪಾಟೀಲ್ ಹುಮನಾಬಾದ್ ಅವರು ಕರ್ನಾಟಕದ ಒಬ್ಬ ಹಿರಿಯ ರಾಜಕಾರಣಿ. ಅವರು ಬೀದರ್ ಜಿಲ್ಲೆಯ ಹುಮನಾಬಾದ್ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸಿದವರು. ಹಲವಾರು ದಶಕಗಳಿಂದ ಸಕ್ರಿಯ ರಾಜಕಾರಣಿಯಾಗಿದ್ದ ಅವರು, ತಮ್ಮ ಅಧಿಕಾರಾವಧಿಯಲ್ಲಿ ಕ್ಷೇತ್ರ ಮತ್ತು ರಾಜ್ಯದ ಅಭಿವೃದ್ಧಿಗಾಗಿ ಗಮನಾರ್ಹ ಕೊಡುಗೆ ಸಲ್ಲಿಸಿದ್ದಾರೆ.

**ರಾಜಕೀಯ ನಡೆದು ಬಂದ ದಾರಿ**

ಬಸವರಾಜ ಪಾಟೀಲ್ ಅವರು ತಮ್ಮ ರಾಜಕೀಯ ಜೀವನವನ್ನು ಯುವಕರಾಗಿದ್ದಾಗ ಪ್ರಾರಂಭಿಸಿದರು. ಆರಂಭದಲ್ಲಿ ಅವರು ಸ್ಥಳೀಯ ರಾಜಕೀಯದಲ್ಲಿ ಸಕ್ರಿಯರಾಗಿದ್ದರು. ನಂತರ ಹುಮನಾಬಾದ್ ಕ್ಷೇತ್ರದ ಶಾಸಕರಾಗಿ ಆಯ್ಕೆಯಾದರು. ಈ ಮೂಲಕ ರಾಜಕೀಯದಲ್ಲಿ ತಮ್ಮ ಪ್ರಭಾವವನ್ನು ಹೆಚ್ಚಿಸಿಕೊಂಡರು. ಅವರು ಕರ್ನಾಟಕ ಸರ್ಕಾರದ ವಿವಿಧ ಸಚಿವ ಸ್ಥಾನಗಳನ್ನು ಅಲಂಕರಿಸಿದ್ದಾರೆ. ಇವರ ರಾಜಕೀಯ ಪಯಣವು ಹಲವಾರು ಏಳು–ಬೀಳುಗಳನ್ನು ಕಂಡಿದ್ದರೂ, ಜನರೊಂದಿಗೆ ಇಟ್ಟುಕೊಂಡಿದ್ದ ಸಂಪರ್ಕದಿಂದಾಗಿ ಅವರು ಜನಪ್ರಿಯ ನಾಯಕರಾಗಿ ಉಳಿದವರು.

**ಬಸವರಾಜ ಪಾಟೀಲ್ ಅವರ ಅಧಿಕಾರಾವಧಿಯಲ್ಲಿನ ಪ್ರಮುಖ ಸೇವೆಗಳು**

ಬಸವರಾಜ ಪಾಟೀಲ್ ಅವರು ಸಚಿವರಾಗಿ, ಶಾಸಕರಾಗಿ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ. ಅವರ ಅಧಿಕಾರಾವಧಿಯಲ್ಲಿ ಗಮನ ಸೆಳೆದ ಕೆಲವು ಪ್ರಮುಖ ಸೇವೆಗಳು ಇಲ್ಲಿವೆ:

**ಶಿಕ್ಷಣ ಕ್ಷೇತ್ರ:** ಹುಮನಾಬಾದ್ ಮತ್ತು ಬೀದರ್ ಜಿಲ್ಲೆಯಲ್ಲಿ ಶಿಕ್ಷಣದ ಗುಣಮಟ್ಟ ಸುಧಾರಿಸಲು ಶ್ರಮಿಸಿದ್ದಾರೆ. ಅನೇಕ ಶಾಲಾ–ಕಾಲೇಜುಗಳ ಸ್ಥಾಪನೆಗೆ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲು ನೆರವು ನೀಡಿದ್ದಾರೆ.

**ನೀರಾವರಿ ಯೋಜನೆಗಳು:** ರೈತರ ಸಮಸ್ಯೆಗಳಿಗೆ ಸ್ಪಂದಿಸಿದ ಬಸವರಾಜ ಪಾಟೀಲ್ ಅವರು ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಒತ್ತು ನೀಡಿದರು. ಇದರಿಂದ ಬರ ಪೀಡಿತ ಪ್ರದೇಶಗಳಿಗೆ ನೀರು ತಲುಪಿಸಲು ಪ್ರಯತ್ನಿಸಿದರು.

**ವಿದ್ಯುತ್ ಪೂರೈಕೆ:** ಗ್ರಾಮೀಣ ಪ್ರದೇಶಗಳಿಗೆ ನಿರಂತರ ವಿದ್ಯುತ್ ಪೂರೈಕೆಗಾಗಿ ಯೋಜನೆಗಳನ್ನು ರೂಪಿಸಿದರು. ಇದರಿಂದ ರೈತರಿಗೆ ಮತ್ತು ಸಣ್ಣ ಉದ್ಯಮಗಳಿಗೆ ಸಹಾಯವಾಯಿತು.

**ಗ್ರಾಮೀಣಾಭಿವೃದ್ಧಿ:** ಹಳ್ಳಿಗಳ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸುವಲ್ಲಿ ಅವರ ಕೊಡುಗೆ ದೊಡ್ಡದು. ರಸ್ತೆಗಳ ನಿರ್ಮಾಣ, ಕುಡಿಯುವ ನೀರಿನ ವ್ಯವಸ್ಥೆ, ಮತ್ತು ನೈರ್ಮಲ್ಯಕ್ಕಾಗಿ ಹಲವಾರು ಯೋಜನೆಗಳನ್ನು ಅನುಷ್ಠಾನಕ್ಕೆ ತಂದರು.

**ಸಾಮಾಜಿಕ ನ್ಯಾಯ:** ಬಸವರಾಜ ಪಾಟೀಲ್ ಅವರು ಸಮಾಜದ ದುರ್ಬಲ ವರ್ಗದವರ ಕಲ್ಯಾಣಕ್ಕಾಗಿ ವಿಶೇಷ ಗಮನ ಹರಿಸಿದರು. ವಿವಿಧ ಸರ್ಕಾರಿ ಯೋಜನೆಗಳು ಈ ವರ್ಗದ ಜನರಿಗೆ ತಲುಪುವಂತೆ ನೋಡಿಕೊಂಡರು.

ಬಸವರಾಜ ಪಾಟೀಲ್ ಹುಮನಾಬಾದ್ ಅವರು ದಕ್ಷ ಆಡಳಿತಗಾರರಾಗಿ ಮತ್ತು ಜನಸೇವಕರಾಗಿ ತಮ್ಮ ಛಾಪು ಮೂಡಿಸಿದ್ದರು. ಅವರ ರಾಜಕೀಯ ಜೀವನ ಮತ್ತು ಸೇವೆಗಳು ಬೀದರ್ ಜಿಲ್ಲೆಯ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸಿವೆ.

ಸರ್ವಜನಾಂಗದವರ ಸೇವೆಗಾಗಿ ಅನೇಕ ಉತ್ತಮ ಕೆಲಸಗಳನ್ನು ಮಾಡಿದ್ದಾರೆ, ಉದಾಹರಣೆಗೆ:

**ಶಿಕ್ಷಣ ಮತ್ತು ಆರೋಗ್ಯ:** ಎಲ್ಲ ಸಮುದಾಯದ ಮಕ್ಕಳಿಗೆ ಉತ್ತಮ ಶಿಕ್ಷಣ ದೊರೆಯಲು ಶಾಲೆಗಳ ನಿರ್ಮಾಣ, ಆರೋಗ್ಯ ಕೇಂದ್ರ್ರಗಳ ಸ್ಥಾಪನೆ, ಮತ್ತು ಸರ್ಕಾರಿ ಆಸ್ಪತ್ರೆಗಳಿಗೆ ಸೌಲಭ್ಯಗಳನ್ನು ಒದಗಿಸುವುದು.

**ಮೂಲಸೌಕರ್ಯ ಅಭಿವೃದ್ಧಿ:** ರಸ್ತೆ, ನೀರು, ವಿದ್ಯುತ್ ಮತ್ತು ಸಾರ್ವಜನಿಕ ಸಾರಿಗೆ ವ್ಯವಸ್ಥೆಗಳನ್ನು ಸುಧಾರಿಸುವುದು. ಇವು ಎಲ್ಲಾ ಸಮುದಾಯದ ಜನರಿಗೆ ನೇರವಾಗಿ



ಪ್ರಯೋಜನವನ್ನು ನೀಡುತ್ತವೆ.

**ಸಾಮಾಜಿಕ ಕಲ್ಯಾಣ ಯೋಜನೆಗಳು:** ವಿಧವೆಯರು, ವೃದ್ಧರು ಮತ್ತು ಅಂಗವಿಕಲರಿಗೆ ಪಿಂಚಣಿ, ಬಡವರಿಗೆ ವಸತಿ ಯೋಜನೆಗಳು ಮತ್ತು ಸರ್ಕಾರದ ಇತರ ಸೌಲಭ್ಯಗಳನ್ನು ತಲುಪಿಸುವುದು.

**4 ಬಾರಿ ಶಾಸಕರು:** ಅವರು ಹುಮನಾಬಾದ್ ವಿಧಾನಸಭಾ ಕ್ಷೇತ್ರದಿಂದ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದರು. ಅವು 1978, 1983, 1985 ಮತ್ತು 1989 ರ ಚುನಾವಣೆಗಳು.

**ಸಚಿವರು:** ಅವರು ಎಸ್. ಬಂಗಾರಪ್ಪ ಮತ್ತು ಎಸ್. ಎಂ. ಕೃಷ್ಣ ಅವರ ಸಂಪುಟದಲ್ಲಿ ಸಚಿವರಾಗಿ ಸೇವೆ



ಸಲ್ಲಿಸಿದ್ದರು. ಅವರು ಪಶು ಸಂಗೋಪನೆ ಮತ್ತು ಇಂಧನ ಸಚಿವರಾಗಿ ಕೆಲಸ ಮಾಡಿದ್ದರು.

**3 ಬಾರಿ ಎಂಎಲ್‌ಸಿ:** ಅವರು ಮೂರು ಬಾರಿ ವಿಧಾನ ಪರಿಷತ್ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದಾರೆ.

ಬಸವರಾಜ ಪಾಟೀಲ್ ಹುಮನಾಬಾದ್ ಅವರು ಹುಮನಾಬಾದ್ ಕ್ಷೇತ್ರದ ಶಾಸಕರಾಗಿ ಮತ್ತು ಸಚಿವರಾಗಿ ತಮ್ಮ ಅಧಿಕಾರಾವಧಿಯಲ್ಲಿ ಹಲವಾರು ಪ್ರಮುಖ ಸೇವೆಗಳನ್ನು ಮಾಡಿದ್ದಾರೆ. ಅವರ ಮುಖ್ಯ ಕೊಡುಗೆಗಳು:

**ನೀರಾವರಿ ಯೋಜನೆಗಳು:** ರೈತರ ಹಿತದೃಷ್ಟಿಯಿಂದ, ಹುಮನಾಬಾದ್ ಕ್ಷೇತ್ರದ ಕೃಷಿ ಭೂಮಿಗೆ ನೀರು ಒದಗಿಸಲು ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಶ್ರಮಿಸಿದ್ದಾರೆ. ಇದರಿಂದ ಅನೇಕ ರೈತರಿಗೆ ಅನುಕೂಲವಾಗಿದೆ.

**ಶಿಕ್ಷಣ ಅಭಿವೃದ್ಧಿ:** ಶಿಕ್ಷಣ ಕ್ಷೇತ್ರಕ್ಕೆ ಅವರು ವಿಶೇಷ ಗಮನ ನೀಡಿದ್ದಾರೆ. ಹುಮನಾಬಾದ್‌ನಲ್ಲಿ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸುವುದು ಮತ್ತು ಅವುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು ಅವರ ಪ್ರಮುಖ ಕೆಲಸಗಳಲ್ಲಿ ಒಂದಾಗಿತ್ತು. ಇವರ ಹೆಸರಿನಲ್ಲಿ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ಕೂಡ ಸ್ಥಾಪನೆಯಾಗಿದೆ.

**ಗ್ರಾಮೀಣಾಭಿವೃದ್ಧಿ:** ರಸ್ತೆಗಳ ನಿರ್ಮಾಣ ಮತ್ತು ದುರಸ್ತಿ, ಕುಡಿಯುವ ನೀರಿನ ಪೂರೈಕೆ, ಮತ್ತು ವಿದ್ಯುತ್ ವ್ಯವಸ್ಥೆಗಳ ಸುಧಾರಣೆ ಮುಂತಾದ ಗ್ರಾಮೀಣ ಮೂಲಸೌಕರ್ಯಗಳ ಅಭಿವೃದ್ಧಿಗೆ ಒತ್ತು ನೀಡಿದ್ದಾರೆ.

**ಸಾಮಾಜಿಕ ಕಲ್ಯಾಣ:** ಸಮಾಜದ ದುರ್ಬಲ ವರ್ಗದವರಿಗೆ ಸಹಾಯವಾಗುವಂತೆ ವಿವಿಧ ಸರ್ಕಾರಿ ಯೋಜನೆಗಳನ್ನು ಜಾರಿಗೆ ತರುವಲ್ಲಿ ಅವರು ಸಕ್ರಿಯ ಪಾತ್ರ ವಹಿಸಿದ್ದಾರೆ.

ಬಸವರಾಜ ಪಾಟೀಲ್ ಹುಮನಾಬಾದ್ ಅವರ ಸೇವೆಗಳು ಕ್ಷೇತ್ರದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸಿವೆ. ಅವರು ಇಂಧನ ಮತ್ತು ಪಶುಸಂಗೋಪನೆ ಸಚಿವರಾಗಿದ್ದಾಗಲೂ ತಮ್ಮ ಕ್ಷೇತ್ರದ ಹಿತಾಸಕ್ತಿಗಳನ್ನು ಕಾಪಾಡಲು ಪ್ರಯತ್ನಿಸಿ, ಕ್ಷೇತ್ರದ ಹಾಗೂ ರಾಜ್ಯದ ಅಭಿವೃದ್ದಿಯಲ್ಲಿ ತಮ್ಮನ್ನು ತೊಡಗಿಸಿಕೊಂಡು ಜನರೊಂದಿಗೆ ಅವಿನಾಭಾವ ಸಂಬಂಧ ಹೊಂದಿದ್ದ ಅವರು, ಜನನಾಯಕ ಎಂಬುವುದರಲ್ಲಿ ಎರಡು ಮಾತಿಲ್ಲ.

# ತಂದೆಯ ಮಾರ್ಗದಲ್ಲಿ ಮುನ್ನಡೆಯುತ್ತಿರುವ ಮಕ್ಕಳು

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ದಿ.ಬಸವರಾಜ ಪಾಟೀಲ ರವರು ಹಾಕಿಕೊಟ್ಟ ಮಾರ್ಗದಲ್ಲಿ ಮಕ್ಕಳಾದ ರಾಜಶೇಖರ ಪಾಟೀಲ, ಡಾ.ಚಂದ್ರಶೇಖರ ಪಾಟೀಲ, ಭೀಮರಾವ ಪಾಟೀಲ, ಸೋಮಶೇಖರ್ ಪಾಟೀಲ ಸೇರಿದಂತೆ ಇಡೀ ಪಾಟೀಲ ಪರಿವಾರ ನಡೆದು–ಕೊಂಡು ಬರುತ್ತಿದ್ದಾರೆ. ಕ್ಷೇತ್ರದ ಜನರ ಸಮಸ್ಯೆಗಳನ್ನು ತಮ್ಮ ಸಮಸ್ಯೆಗಳೆಂದು ಭಾವಿಸಿ ಜನರ ಸೇವೆ ಮಾಡುತ್ತಾ ಜನೋಪಕಾರಿಯಾಗಿದ್ದಾರೆ.

ಕೋವಿಡ್ ಸಂದರ್ಭದಲ್ಲಿ ತಮ್ಮ ಜೀವವನ್ನು ಲೆಕ್ಕಿಸದೇ ಅಂದು ಶಾಸಕರಾಗಿದ್ದ ರಾಜಶೇಖರ ಪಾಟೀಲ ರವರು ಜನರ ಸೇವೆಯಲ್ಲಿ ತೊಡಗಿ ಕೋವಿಡ್‌ನಿಂದ ಬಳಲುತ್ತಿರುವವರಿಗೆ ಅಗತ್ಯ ವೈದ್ಯಕೀಯ ಸೌಲಭ್ಯ ಒದಗಿಸುವ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಲ್ಲದೇ, ಲಾಕ್ ಡೌನ್ ಸಂದರ್ಭದಲ್ಲಿ ಜನರಿಗೆ ನೆರವು ನೀಡಿ ನಿಜವಾದ ಜನನಾಯಕರಾಗಿದ್ದಾರೆ. ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಕ್ಷೇತ್ರದಲ್ಲಿ ಮಾಡಿದ್ದಾರೆ. ಕುಡಿಯುವ ನೀರು, ಚರಂಡಿ, ವಿದ್ಯುತ್, ಸೇರಿದಂತೆ ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸುವಲ್ಲಿ ಅಹರ್ನಿಸಿ ಕೆಲಸ ಮಾಡಿದ್ದಾರೆ. ವಿಧಾನಸಭಾ ಚುನಾವಣೆಯಲ್ಲಿ ಈ ಬಾರಿ ಸೋಲಾದರೂ ಅವರು







ಸುಮ್ಮನೇ ಮನೆಯಲ್ಲಿ ಕೂಡದೇ ಸದಾ ಕ್ಷೇತ್ರದ ಜನರೊಂದಿಗೆ ಸಂಪರ್ಕವನ್ನು ಹೊಂದಿದ್ದಾರೆ. ಇದಕ್ಕೆ ಸಾಕ್ಷಿ ಪ್ರತಿದಿನ ಅವರ ಗೃಹ ಕಚೇರಿಯಲ್ಲಿ ಸಾರ್ವಜನಿಕರು ವಿವಿಧ ಸಮಸ್ಯೆಗಳ ಇತ್ಯರ್ಥಕ್ಕೆ ಅವರ ಬಳಿ ಬಂದೂ ಪರಿಹಾರ ಕಂಡುಕೊಳ್ಳುತ್ತಿರುವುದು ಸಾಕ್ಷಿಯಾಗಿದೆ. ಇಂದಿಗೂ ಕ್ಷೇತ್ರದ ಜನರ ಮನದಲ್ಲಿ ಮನೆ ಮಾಡಿರುವ ಅವರು ಕ್ಷೇತ್ರದ ಜನಪ್ರಿಯ ಜನನಾಯಕರಾಗಿದ್ದಾರೆ, ಮನೆ ಮಾತಾಗಿದ್ದಾರೆ. ರಾಜಶೇಖರ ಪಾಟೀಲರಂತೆ ಅವರ ಸಹೋದರರು ಸಹ ಪಕ್ಷದ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಮತ್ತು ಜನ ಸಾಮಾನ್ಯರೊಂದಿಗೆ ಬೆರೆಯುವ ಗುಣ ಹೊಂದಿರುವುದರಿಂದ ಕ್ಷೇತ್ರದ ಜನರಲ್ಲಿ ಜನಪ್ರಿಯತೆ ಉಳಿಸಿಕೊಂಡು ತಂದೆಗೆ ತಕ್ಕ ಮಕ್ಕಳು ಎಂಬ ಕೀರ್ತಿಗೆ ಭಾಜನರಾಗಿದ್ದಾರೆ.




Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.